07 May 2026 Thursday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಯಾರು ಎಷ್ಟೇ ಓದಿದರೂ, ಎಷ್ಟೇ ಪದವಿ ಪ್ರಶಸ್ತಿಗಳನ್ನು ಗಳಿಸಿದರೂ, ಒಳ್ಳೆಯ ನಡುವಳಿಕೆಯು ಮಾತ್ರ ಗೌರವವನ್ನು ತಂದು ಕೊಡುತ್ತದೆ!

-ಸ್ನೇಹಾ ಆನಂದ್

info.varthaman@gmail.com



ಸ್ವಚ್ಛತೆಗೆ ಮೈಸೂರು ಪಾಲಿಕೆ ಪ್ಲಾನ್: ಇಡೀ ಗೋಡೆಗೆ ಕನ್ನಡಿಯನ್ನು ಅಳವಡಿಕೆ ಪುಟ ಸಂ. 2



ದುಬಾರೆ ತೂಗು ಸೇತುವೆಗೆ ಅರಣ್ಯ ಸಚಿವರ ಶಂಕುಸ್ಥಾಪನೆ ಪುಟ ಸಂ. 3



1.66 ಕೋಟಿ ರೂ. ಕಾಮಗಾರಿಗೆ ಶಾಸಕ ಗಣೇಶ್ ಪ್ರಸಾದ್ ಚಾಲನೆ ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 165 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಮತ್ತೆ 'ಪವರ್ ಪಾಲಿಟಿಕ್ಸ್'

## ಹೈಕಮಾಂಡ್ ಮಟ್ಟದಲ್ಲಿಯೇ ಎಲ್ಲವೂ ತೀರ್ಮಾನ: ಡಿಕೆಶಿ

**ಬೆಂಗಳೂರು:** ಹೈಕಮಾಂಡ್ ಕರೆದಾಗ ನಾವು ದೆಹಲಿಗೆ ಹೋಗುತ್ತೇವೆ. ಅವರು ಕರೆಯದೇ ನಾವು ಹೋಗುವುದು ಸರಿಯಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಮಾಧ್ಯಮಗಳ ಜೊತೆ ಬುಧವಾರ ಸಿಎಂ, ಡಿಸಿಎಂ ದೆಹಲಿ ಭೇಟಿ ವಿಚಾರದ ಮಾತನಾಡಿ, ಪಂಚ ರಾಜ್ಯಗಳ ಚುನಾವಣೆ ಮುಗಿದಿರುವುದರಿಂದ ಹೈಕಮಾಂಡ್ ನಮ್ಮನ್ನು ಕರೆದು ಮಾತನಾಡಲಿದೆ ಎಂಬ ನಂಬಿಕೆ ಇದೆ. ಅವರು ಖಂಡಿತಾ ಕರೆಯುತ್ತಾರೆ. ಎಲ್ಲವೂ ಹೈಕಮಾಂಡ್ ಮಟ್ಟದಲ್ಲಿಯೇ ತೀರ್ಮಾನ ಆಗಲಿದೆ ಎಂದು ಮಾರ್ಮಿಕವಾಗಿ ಹೇಳಿದರು.

ದಾವಣಗೆರೆಯಲ್ಲಿ ಮುಸ್ಲಿಂ ನಾಯಕರ ಅಮಾನತನ್ನು ವಾಪಸ್ ಪಡೆಯುವ ಸಾಧ್ಯತೆ ಇದೆಯೇ ಎಂಬ ಪ್ರಶ್ನೆಗೆ, ನಾನು ಈ ಬಗ್ಗೆ ಏನೂ ಮಾತನಾಡುವುದಿಲ್ಲ. ಪಕ್ಷ ಈ ತೀರ್ಮಾನ ಮಾಡಿದೆ. ಸಿಎಂ ರಾಜಕೀಯ ಕಾರ್ಯದರ್ಶಿ ಅವರನ್ನು ಕೈಬಿಡುವ ಬಗ್ಗೆ ಮುಖ್ಯಮಂತ್ರಿಯವರು ಮಾತನಾಡಿದ್ದರು. ಮುಖ್ಯಮಂತ್ರಿಗಳಿಗೆ ತಮ್ಮದೇ ಆದ ಮಾಹಿತಿ ಇರುತ್ತದೆ. ಪಕ್ಷದ ಪದಾಧಿಕಾರಿಗಳು ಮಾರ್ಗದರ್ಶನ ಮಾಡಿದ್ದಾರೆ. ಪಕ್ಷ ಅವರಿಗೆ ಕೆಲವು ಜವಾಬ್ದಾರಿ ನೀಡಿತ್ತು. ಅದನ್ನು ಅವರು ಸರಿಯಾಗಿ ನಿಭಾಯಿಸಲಿಲ್ಲ. ಅದಕ್ಕೆ ಅವರನ್ನು ಆ ಸ್ಥಾನದಿಂದ ಇಳಿಸಲಾಯಿತು. ಜಬ್ಬಾರ್ ಅವರು ತಾವಾಗಿಯೇ ರಾಜೀನಾಮೆ ನೀಡಿದ್ದರು. ಅದನ್ನು ಸ್ವೀಕಾರ ಮಾಡಿದ್ದೇವೆ ಅಷ್ಟೇ ಎಂದರು.

ತಮಿಳುನಾಡಿನಲ್ಲಿ ಟಿವಿಕೆಗೆ ಪುಟ 2ಕ್ಕೆ




### ಹೈಕಮಾಂಡ್ ಮಾತನ್ನಷ್ಟೇ ಕೇಳುವೆ: ಸಿಎಂ ಸಿದ್ದರಾಮಯ್ಯ

**ಮೈಸೂರು:** ಯಾರು ಏನೇ ಹೇಳಿದರೂ ನಾನು ಹೈಕಮಾಂಡ್ ಮಾತನ್ನು ಮಾತ್ರವೇ ಕೇಳುವುದು. ಅವರು ಹೇಳಿದರೆ ಐದು ವರ್ಷವೂ ಮುಖ್ಯಮಂತ್ರಿ ಆಗಿರುತ್ತೇನೆ ಎಂದು ಸಿದ್ದರಾಮಯ್ಯ ಹೇಳಿದರು.

ಮೈಸೂರಿನಲ್ಲಿ ಬುಧವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಐದು ವರ್ಷವೂ ಕಾಂಗ್ರೆಸ್ ಸರ್ಕಾರ ಇರುತ್ತದೆ. ಹೈಕಮಾಂಡ್ ನೀವೇ ಸಿಎಂ ಆಗಿರಿ ಎಂದರೆ ಇರುತ್ತೇನೆ. ಎಲ್ಲಾ ತೀರ್ಮಾನವನ್ನೂ ಮಾಡುವುದು ಹೈಕಮಾಂಡ್. ಬೇರೆ ಯಾರೇ ಏನೇ ಹೇಳಿದರೂ ಅವರ ವೈಯಕ್ತಿಕ ಅಭಿಪ್ರಾಯವಷ್ಟೆ ಎಂದರು.

ರಾಹುಲ್ ಗಾಂಧಿ ನನ್ನನ್ನು ಈವರೆಗೂ ನವದೆಹಲಿಗೆ ಕರೆದಿಲ್ಲ. ಅವರಾಗಿಯೇ ಕರೆದರೆ ಹೋಗುತ್ತೇನೆ. ನಾನಾಗಿಯೇ ಹೋಗಬೇಕಾದಲ್ಲಿ ರಾಹುಲ್ ಗಾಂಧಿ ಅವರು ಸಮಯ ಕೊಟ್ಟಾಗ ಹೋಗುತ್ತೇನೆ. ಸಚಿವ ಸಂಪುಟ ಪುನರ್ ರಚನೆಯೋ, ವಿಸ್ತರಣೆಯೋ ಎಂಬುದನ್ನು ಅವರು ಸಮಯ ಕೊಟ್ಟ ಮೇಲೆ ಪುಟ 2ಕ್ಕೆ

### ಆರ್ಟ್ ಆಫ್ ಲಿವಿಂಗ್‌ಗೆ 10ರಂದು ಮೋದಿ ಭೇಟಿ




**ಬೆಂಗಳೂರು:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮೇ 10ರಂದು ಬೆಂಗಳೂರಿಗೆ ಭೇಟಿ ನೀಡಲಿದ್ದಾರೆ. ಕನಕಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರಕ್ಕೆ ಆಗಮಿಸಲಿದ್ದಾರೆ.

ಈ ವರ್ಷ ಆರ್ಟ್ ಆಫ್ ಲಿವಿಂಗ್ ತನ್ನ 45ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿದೆ. ಸಂಸ್ಥೆಯ ಸ್ಥಾಪಕ ಶ್ರೀ ಶ್ರೀ ರವಿಶಂಕರ್ ಅವರು ತಮ್ಮ 70ನೇ ಹುಟ್ಟುಹಬ್ಬವನ್ನೂ ಆಚರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಆಶ್ರಮದಲ್ಲಿ ವಿಶೇಷ ಕಾರ್ಯಕ್ರಮಗಳು ಆಯೋಜಿಸಲಾಗುತ್ತಿವೆ.

ಈ ಕಾರ್ಯಕ್ರಮದ ಅಂಗವಾಗಿ ಪ್ರಧಾನಿ ಮೋದಿ ಅವರು ಆಶ್ರಮಕ್ಕೆ ಭೇಟಿ ನೀಡುತ್ತಿದ್ದಾರೆ. ಆಶ್ರಮದ ಆವರಣದಲ್ಲಿ ನಿರ್ಮಿಸಲಾದ ಹೊಸ ಧ್ಯಾನ ಮಂದಿರವನ್ನು ಉದ್ಘಾಟಿಸಲಿದ್ದಾರೆ. ಈ ಧ್ಯಾನ ಮಂದಿರವು ಯೋಗ ಮತ್ತು ಧ್ಯಾನ ಅಭ್ಯಾಸಗಳಿಗೆ ವಿಶೇಷವಾಗಿ ವಿನ್ಯಾಸಗೊಳಿಸಲಾಗಿದೆ ಎಂದು ತಿಳಿದುಬಂದಿದೆ.

ಆರ್ಟ್ ಆಫ್ ಲಿಂವಿಂಗ್ ಫೌಂಡೇಷನ್ ಕಳೆದ 45 ವರ್ಷಗಳಲ್ಲಿ ಯೋಗ, ಧ್ಯಾನ ಹಾಗೂ ಆಧ್ಯಾತ್ಮಿಕ ಶಿಕ್ಷಣದ ಜೊತೆಗೆ ಸಾಮಾಜಿಕ ಕಾರ್ಯಗಳಲ್ಲಿಯೂ ಮಹತ್ವದ ಪಾತ್ರವಹಿಸಿದೆ. ನದಿ ಪುನರುಜ್ಜೀವನ, ಶಿಕ್ಷಣ ಅಭಿವೃದ್ಧಿ ಮತ್ತು ವಿಪತ್ತು ನಿರ್ವಹಣೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ.

### ಸಿದ್ದರಾಮಯ್ಯ ದೇಶದ ಅತ್ಯಂತ ಹಿರಿಯ ಸಿಎಂ!



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೇಶದ ಅತ್ಯಂತ ಹಿರಿಯ ಸಿಎಂ ಆಗಿ ಹೊರಹೊಮ್ಮಿದ್ದಾರೆ. ಈ ಮೊದಲು 82 ವರ್ಷದ ಪಿಣರಾಯಿ ವಿಜಯನ್ ದೇಶದ ಅತ್ಯಂತ ಹಿರಿಯ ಸಿಎಂ ಆಗಿದ್ದರು. ವಿಧಾನಸಭೆ ಚುನಾವಣೆಯಲ್ಲಿ ಕೇರಳ ಸಿಎಂ ಸೋಲು ಅನುಭವಿಸಿದ್ದರು. ಎರಡನೇ ಸ್ಥಾನದಲ್ಲಿದ್ದ 77 ವರ್ಷದ ಸಿದ್ದರಾಮಯ್ಯ ಈಗ ಹಿರಿಯ ಸಿಎಂ ಆಗಿ ಅಗ್ರಸ್ಥಾನಕ್ಕೇರಿದ್ದಾರೆ.

ಕರ್ನಾಟಕದಲ್ಲಿ ಸುದೀರ್ಘಾವಧಿ ಮುಖ್ಯಮಂತ್ರಿ ಎಂಬ ಪಟ್ಟವನ್ನು ಸಿದ್ದರಾಮಯ್ಯ (77) ಪಡೆದಿದ್ದರು. 2ನೇ ಬಾರಿಗೆ ಕರ್ನಾಟಕದ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯ 2026ರ ಜ.6ರಂದು 2,792 ದಿನಗಳ ಕಾಲ ಸಿಎಂ ಆಗಿದ್ದ ದೇವರಾಜ ಅರಸ್ ದಾಖಲೆಯನ್ನು ಸರಿಗಟ್ಟಿದ್ದರು. ಅದನ್ನು ಮೀರುವ ಮೂಲಕ ರಾಜ್ಯದಲ್ಲಿ ಸುದೀರ್ಘಾವಧಿ ಆಳ್ವಿಕೆ ನಡೆಸಿದವರು ಎಂಬ ಖ್ಯಾತಿಗೆ ಪಾತ್ರರಾಗಿದ್ದಾರೆ.

ಈ ಪಟ್ಟಿಯಲ್ಲಿ ನಂತರದ ಪುಟ 2ಕ್ಕೆ

### ವನ್ಯಜೀವಿಗಳ ಸಂತಾನ ನಿಯಂತ್ರಣ

#### ತಜ್ಞರ ಮಟ್ಟದಲ್ಲಿ ಚರ್ಚೆ ಅಗತ್ಯ: ಸಚಿವ ಈಶ್ವರ್ ಖಂಡ್ರೆ'



**ದುಬಾರೆ:** ವನ್ಯಜೀವಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿರುವುದರಿಂದ ಅಮೂಲ್ಯ ಜೀವ ಹಾನಿ, ಬೆಳೆ ಹಾನಿ ತಪ್ಪಿಸಲು ಆಯ್ದ ವನ್ಯಜೀವಿಗಳ ಸಂತಾನ ನಿಯಂತ್ರಣದ ಸಲಹೆ ಬಂದದೆ. ಈ ಬಗ್ಗೆ ಸಾರ್ವಜನಿಕವಾಗಿ ತಜ್ಞರ ಮಟ್ಟದಲ್ಲಿ ಚರ್ಚೆ ಆಗುವ ಅಗತ್ಯವಿದೆ ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ನೂತನ ತೂಗುಸೇತುವೆ ಮತ್ತು ಅಧಿಕಾರಿಗಳ ವಸತಿಗೃಹಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಆನೆ–ಮಾನವ ಸಂಘರ್ಷ ನಿಯಂತ್ರಿಸಲು ತಜ್ಞರ ಸಮಿತಿ ರಚಿಸಲಾಗಿದೆ. ಅವರು ವರದಿ ನೀಡಿದ್ದಾರೆ. ಕಾಡಿನಂಚಿನ ಜನರು ಕೂಡ ಈ ಬಗ್ಗೆ ಸಲಹೆ ನೀಡಬೇಕು ಎಂದರು. ಪುಟ 2ಕ್ಕೆ

### ಪಂಜಾಬ್‌ನಲ್ಲಿ ಭದ್ರತಾ ನೆಲೆ ಸಮೀಪ 2 ಬಾಂಬ್ ಸ್ಫೋಟ

**ಅಮೃತಸರ:** ಪಂಜಾಬ್‌ನಲ್ಲಿ ಭದ್ರತಾ ನೆಲೆಗಳನ್ನು ಗುರಿಯಾಗಿಸಿಕೊಂಡು ಸತತ ಎರಡು ಬಾಂಬ್ ಸ್ಫೋಟ ಸಂಭವಿಸಿರುವುದು ಭೀತಿ ಸೃಷ್ಟಿಸಿದೆ. ಈ ಘಟನೆಗಳನ್ನು ರಾಜ್ಯವನ್ನು ಅಸ್ಥಿರಗೊಳಿಸುವ ಪ್ರಯತ್ನಗಳು ಎಂದು ವಿರೋಧ ಪಕ್ಷಗಳು ಖಂಡಿಸಿವೆ.

ಜಲಂಧರ್‌ನಲ್ಲಿ ಮಂಗಳವಾರ ರಾತ್ರಿ 8 ಗಂಟೆ ಸುಮಾರಿಗೆ ಗಡಿ ಭದ್ರತಾ ಪಡೆಯ ಪಂಜಾಬ್ ಗಡಿನಾಡಿನ ಪ್ರಧಾನ ಕಚೇರಿಯ ಹೊರಗೆ ಮೊದಲ ಸ್ಫೋಟ ಸಂಭವಿಸಿದೆ. ಆದರೆ ಎರಡನೇ ಸ್ಫೋಟವು ರಾತ್ರಿ 11 ಗಂಟೆ ಸುಮಾರಿಗೆ ಅಮೃತಸರದ ಸೇನಾ ಕಂಟೋನ್ಮೆಂಟ್ ಬಳಿ ಸಂಭವಿಸಿದೆ. ಈ ಸ್ಫೋಟಗಳಲ್ಲಿ ಯಾರಿಗೂ ಯಾವುದೇ ಗಾಯಗಳಾಗಿರುವ ಬಗ್ಗೆ ವರದಿಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

## ವಿಜಯ್–ರಾಜ್ಯಪಾಲರ ಭೇಟಿ: ಸರ್ಕಾರ ರಚನೆಗೆ ಹಕ್ಕು ಮಂಡನೆ



**ಚೆನ್ನೈ:** ತಮಿಳುನಾಡು ವಿಧಾನಸಭೆಯಲ್ಲಿ ದಳಪತಿ ವಿಜಯ್ ಅವರ ಟಿವಿಕೆ ಪಕ್ಷ ಮೊದಲ ಪ್ರಯತ್ನದಲ್ಲೇ 108 ಸ್ಥಾನಗಳನ್ನು ಪಡೆದು ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಮೊದಲ ಬಾರಿ ರಾಜಕೀಯ ಅಖಾಡಕ್ಕೆ ಇಳಿದು ಭರ್ಜರಿ ಜಯಭೇರಿ ಬಾರಿಸಿರುವ ದಳಪತಿ ವಿಜಯ್ ಅವರು ಬುಧವಾರ ತಮಿಳುನಾಡು ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅವರನ್ನು ಭೇಟಿ ಮಾಡಿ, ನೂತನ ಸರ್ಕಾರ ರಚನೆಗೆ ಹಕ್ಕು ಮಂಡಿಸಿದರು.

ಬುಧವಾರ ಮಧ್ಯಾಹ್ನ 3.30ರ ಸುಮಾರಿಗೆ ಲೋಕಭವನಕ್ಕೆ ಆಗಮಿಸಿದ ವಿಜಯ್, ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ಭೇಟಿ ಮಾಡಿ, ಕಾಂಗ್ರೆಸ್ ಹಾಗೂ ಇತರ ಪಕ್ಷಗಳ ಬೆಂಬಲದೊಂದಿಗೆ ಸರ್ಕಾರ ರಚಿಸುವುದಾಗಿ ಮನವಿ ಪತ್ರ ಸಲ್ಲಿಸಿದರು. ಪುಟ 2ಕ್ಕೆ

## ತಮಿಳುನಾಡು: ಟಿವಿಕೆ ಕೈಹಿಡಿದ ಕಾಂಗ್ರೆಸ್

### ದೀರ್ಘಕಾಲದ ಡಿಎಂಕೆ ಜೊತೆಗಿನ ಮೈತ್ರಿಗೆ ಕೋಕ್: ಅಸಮಾಧಾನ



**ಚೆನ್ನೈ:** ತಮಿಳಿಗ ವೆಟ್ರಿ ಕಳಗಂ (ಟಿವಿಕೆ) ಜೊತೆ ಮೈತ್ರಿ ಮಾಡಿಕೊಳ್ಳುವುದಾಗಿ ಬುಧವಾರ ಕಾಂಗ್ರೆಸ್ ಅಧಿಕೃತವಾಗಿ ಘೋಷಿಸಿದೆ. ಈ ಮೂಲಕ ಡಿಎಂಕೆಯೊಂದಿಗಿನ ದೀರ್ಘಕಾಲದ ಮೈತ್ರಿಯನ್ನು ಕಡಿದುಕೊಂಡಿದೆ.

ಈ ಬಗ್ಗೆ ಹೇಳಿಕೆ ಬಿಡುಗಡೆ ಮಾಡಿರುವ ತಮಿಳುನಾಡು ಕಾಂಗ್ರೆಸ್ ಉಸ್ತುವಾರಿ ಗಿರೀಶ್ ಚೋಡಂಕರ್, ಭಾರತದ ಸಂವಿಧಾನದಲ್ಲಿ ನಂಬಿಕೆಯಿಲ್ಲದ ಕೋಮುಶಕ್ತಿಗಳನ್ನು ಈ ಮೈತ್ರಿಯಿಂದ ಹೊರಗಿಡುವ ಷರತ್ತಿನ ಮೇಲೆ ಮೈತ್ರಿ ಒಪ್ಪಂದ ನಡೆದಿದೆ ಎಂದು ತಿಳಿಸಿದರು. ಇದಕ್ಕೆ ಡಿಎಂಕೆ ನಾಯಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಟಿವಿಕೆ ಮುಖ್ಯಸ್ಥ ವಿಜಯ್ ಅವರು ಸರ್ಕಾರ ರಚಿಸಲು ಬೆಂಬಲ ನೀಡುವಂತೆ ಕಾಂಗ್ರೆಸ್ ಪಕ್ಷಕ್ಕೆ ಅಧಿಕೃತವಾಗಿ ವಿನಂತಿಸಿದ್ದರು. ಕಾಂಗ್ರೆಸ್ ಜಾತ್ಯತೀತ, ಪ್ರಗತಿಪರ ಸಿದ್ದಾಂತದ ಮೇಲೆ ನಂಬಿಕೆ ಇಟ್ಟಿರುವ ಪಕ್ಷವಾಗಿದೆ. ತಮಿಳುನಾಡಿನ ಜನರ ತೀರ್ಪನ್ನು ಗೌರವಿಸುವುದು, ಎತ್ತಿಹಿಡಿಯುವುದು ನಮ್ಮ ಸಾಂವಿಧಾನಿಕ ಕರ್ತವ್ಯವಾಗಿದೆ. ಕಾಂಗ್ರೆಸ್ ತಮಿಳುನಾಡು ಘಟಕ ಮತ್ತು ಕಾಂಗ್ರೆಸ್ ಶಾಸಕಾಂಗ ಪಕ್ಷವು (ಸಿಎಲ್‌ಪಿ) ಸರ್ಕಾರ ರಚಿಸಲು ಟಿವಿಕೆಗೆ ಪೂರ್ಣ ಬೆಂಬಲ ನೀಡಲು ನಿರ್ಧರಿಸಿದೆ ಎಂದು ಹೇಳಿದ್ದಾರೆ.

ಟಿವಿಕೆ ಮತ್ತು ಕಾಂಗ್ರೆಸ್ ನಡುವಿನ ಈ ಮೈತ್ರಿಯು ಪೆರಿಯಾರ್ ಅವರ ಸಾಮಾಜಿಕ ನ್ಯಾಯದ ಆದರ್ಶಗಳು ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅವರ ಸಾಂವಿಧಾನಿಕ ಆದರ್ಶಗಳಿಗೆ ಬದ್ಧವಾಗಿ ಕಾರ್ಯನಿರ್ವಹಿಸಲಿದೆ. ಮುಂದಿನ ವರ್ಷಗಳಲ್ಲಿ ತಮಿಳುನಾಡಿನಲ್ಲಿ ಪೆರುಂತಲೈವರ್ ಕಾಮರಾಜರ್ ಅವರ ಸುವರ್ಣ ದಿನಗಳನ್ನು ಮರಳಿ ತರಲು ಶ್ರಮಿಸಲಿದೆ ಎಂದಿದೆ.

**ಟಿವಿಕೆ ಕಚೇರಿಗೆ ಕೈ ಶಾಸಕರ ಭೇಟಿ:** ಪುಟ 2ಕ್ಕೆ

### ವಚನಾನಂದ ಶ್ರೀಗೆ ನಿರೀಕ್ಷಣಾ ಜಾಮೀನು

**ದಾವಣಗೆರೆ:** ಮಕ್ಕಳ ಮೇಲೆ ದೌರ್ಜನ್ಯ ಎಸಗಿರುವ ಆರೋಪ ಹೊತ್ತಿದ್ದ ವಚನಾನಂದ ಶ್ರೀಗೆ ವಿಶೇಷ ಜಿಲ್ಲಾ ನ್ಯಾಯಲಯ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

ದಾವಣಗೆರೆ ಜಿಲ್ಲೆಯ ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ಅವರ ವಿರುದ್ಧ ಮಕ್ಕಳ ಮೇಲೆ ದೌರ್ಜನ್ಯ ಎಸಗಿದ್ದ ಆರೋಪ ಕೇಳಿಬಂದಿತ್ತು. ಈ ಸಂಬಂಧ ಸ್ವಾಮೀಜಿ ಏ.21ರಂದು ವಿಶೇಷ ಜಿಲ್ಲಾ ನ್ಯಾಯಲಯದಲ್ಲಿ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ ಷರತ್ತುಬದ್ಧ ನಿರೀಕ್ಷಣ ಜಾಮೀನು ಮಂಜೂರು ಮಾಡಿದೆ. ಸಾಕ್ಷಿಗಳಿಗೆ ಬೆದರಿಕೆ ಹಾಕಬಾರದು, ನ್ಯಾಯಾಲಯದ ಅನುಮತಿ ಇಲ್ಲದೇ ವ್ಯಾಪ್ತಿ ಬಿಟ್ಟು ಹೋಗಬಾರದು ಎಂದು ಷರತ್ತು ವಿಧಿಸಿದೆ.

ಹರಿಹರ ಮಠದ ಪುಟ 2ಕ್ಕೆ

### ಟಿವಿಕೆಯತ್ತ ಶಾಸಕರ ನಡೆ: ಎಐಎಡಿಎಂಕೆ 2 ಹೋಳು?

**ಚೆನ್ನೈ:** ತಮಿಳುನಾಡಿನ ರಾಜಕೀಯದಲ್ಲಿ ಈಗ ಕ್ಷಿಪ್ರಕ್ರಾಂತಿ ನಿಚ್ಚಳವಾಗಿದೆ. ಜನಪ್ರಿಯ ನಟ ದಿ.ಎಂ.ಜಿ ರಾಮಚಂದ್ರನ್ ಅವರಿಂದ 1972ರಲ್ಲಿ ಸ್ಥಾಪಿತವಾದ ಎಐಎಡಿಎಂಕೆ ಈಗ ಒಡೆದು ಹೋಳಾಗುವ ಸಾಧ್ಯಯತೆ ಇದೆ.

ಮೊದಲ ಚುನಾವಣೆಯಲ್ಲೇ ಸುನಾಮಿ ಎಬ್ಬಿರಿಸುವ ದಳಪತಿ ವಿಜಯ್ ಅವರನ್ನ ಬೆಂಬಲಿಸಲು ಈಗ ಹಲವು ಪಕ್ಷಗಳು ಮುಂದಾಗಿವೆ. ಟಿವಿಕೆ ಬೆಂಬಲಿಸುವ ವಿಚಾರದಲ್ಲಿ ಎಐಎಡಿಎಂಕೆ ಪಕ್ಷದ ಶಾಸಕರ ನಡುವೆ ಭಿನ್ನಮತ ಮೂಡಿದೆ. 30ಕ್ಕೂ ಹೆಚ್ಚು ಶಾಸಕರು ಪಕ್ಷ ತೊರೆಯುವ ಎಚ್ಚರಿಕೆ ನೀಡಿದ್ದಾರೆ.

ಅಣ್ಣಾ ಡಿಎಂಕೆ ಪಕ್ಷದ 47 ಶಾಸಕರಲ್ಲಿ 30ಕ್ಕೂ ಹೆಚ್ಚಿನ ಶಾಸಕರು ಹೊಸ ಸರ್ಕಾರ ರಚನೆಗೆ ಟಿವಿಕೆ ಬೆಂಬಲಿಸುವಂತೆ ವರಿಷ್ಠರಿಗೆ ಒತ್ತಾಯಿಸಿದ್ದಾರೆ. ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳದಿದ್ದರೆ 30ಕ್ಕೂ ಹೆಚ್ಚು ಶಾಸಕರು ಪಕ್ಷ ತೊರೆದು ಸ್ವತಂತ್ರವಾಗಿ ಪುಟ 2ಕ್ಕೆ

### ಇಸ್ರೋ ಕ್ಯಾಂಪಸ್ ಮೇಲೆ ಡ್ರೋನ್: ಆತಂಕ




**ಬೆಂಗಳೂರು:** ದೇಶದ ಅತ್ಯಂತ ಸೂಕ್ಷ್ಮ ಸಂಶೋಧನಾ ಪ್ರದೇಶಗಳಲ್ಲಿ ಒಂದಾದ ಇಸ್ರೋ ಐಸೈಟ್ ಕ್ಯಾಂಪಸ್ ಮೇಲೆ ಅಪರಿಚಿತರಿಂದ ಡ್ರೋನ್ ಹಾರಾಟ ನಡೆದಿರುವುದು ಭದ್ರತಾ ವಲಯದಲ್ಲಿ ಗಂಭೀರ ಆತಂಕಕ್ಕೆ ಕಾರಣವಾಗಿದೆ.

ಮೇ 2ರಂದು ಬೆಳಗ್ಗೆ ಸುಮಾರು 8:16 ಗಂಟೆಯ ವೇಳೆಗೆ, ನೋ ಡ್ರೋನ್ ಝೋನ್ ಎಂದು ಘೋಷಿಸಲ್ಪಟ್ಟ ಈ ಪ್ರದೇಶದ ಮೇಲೆ ಸುಮಾರು 80ರಿಂದ 100 ಅಡಿ ಎತ್ತರದಲ್ಲಿ ಡ್ರೋನ್ ಹಾರಾಟ ಕಂಡುಬಂದಿದೆ.

ಸುಮಾರು 10ರಿಂದ 12 ಸೆಕೆಂಡ್‌ಗಳ ಕಾಲ ಡ್ರೋನ್ ಕ್ಯಾಂಪಸ್ ಮೇಲ್ಭಾಗದಲ್ಲಿ ಹಾರಾಡಿ ನಂತರ ಕಣ್ಮರೆಯಾಗಿದೆ ಎಂದು ಸಿಐಎಸ್‌ಎಫ್ ಅಧಿಕಾರಿಗಳು ತಿಳಿಸಿದ್ದಾರೆ. ಕ್ಯಾಂಪಸ್ ಭದ್ರತೆಯಲ್ಲಿ ನಿಯೋಜಿತವಾಗಿರುವ ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಸಿಬ್ಬಂದಿ ಡ್ರೋನ್ ಹಾರಾಟವನ್ನು ಗಮನಿಸಿ ತಕ್ಷಣವೇ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಎಚ್‌ಎಎಲ್ ಪೊಲೀಸ್ ಠಾಣೆಯಲ್ಲಿ ಅಧಿಕೃತ ದೂರು ದಾಖಲಿಸಲಾಗಿದೆ.

ಇಸ್ರೋ ಐಸೈಟ್ ಕ್ಯಾಂಪಸ್ ಅತ್ಯಂತ ಸೂಕ್ಷ್ಮ ಮತ್ತು ನಿರ್ಬಂಧಿತ ವಲಯವಾಗಿದೆ. ಇಲ್ಲಿ ಯಾವುದೇ ರೀತಿಯ ವೈಮಾನಿಕ ಪುಟ 2ಕ್ಕೆ

### ಐಪಿಎಲ್ ಫೈನಲ್ ಪಂದ್ಯ ಸ್ಥಳಾಂತರ

#### ಶಾಸಕರಿಗೆ ಟಿಕೆಟ್ ವಿತರಣೆಗೆ ಸಂಬಂಧವಿಲ್ಲ: ಡಿಕೆಶಿ



**ಬೆಂಗಳೂರು:** ಶಾಸಕರಿಗೆ ಟಿಕೆಟ್ ವಿತರಣೆ ಮಾಡಿದ್ದಕ್ಕೂ ಐಪಿಎಲ್ ಫೈನಲ್ ಪಂದ್ಯ ಸ್ಥಳಾಂತರಕ್ಕೂ ಸಂಬಂಧವಿಲ್ಲ. ಅಹಮದಾಬಾದ್‌ನಲ್ಲಿ ದೊಡ್ಡ ಕ್ರೀಡಾಂಗಣವಿದೆ. ಹೆಚ್ಚು ಜನ ಸೇರುತ್ತಾರೆ ಎಂಬ ಉದ್ದೇಶದಿಂದ ಐಪಿಎಲ್ ಫೈನಲ್ ಪಂದ್ಯವನ್ನು ಗುಜರಾತ್‌ಗೆ ಸ್ಥಳಾಂತರ ಮಾಡಿರಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗೆ ಬುಧವಾರ ಪ್ರತಿಕ್ರಿಯೆ ನೀಡಿದರು. ಶಾಸಕರಿಗೆ ಐಪಿಎಲ್ ಟಿಕೆಟ್ ಬೇಡಿಕೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ನಡೆಯಬೇಕಿದ್ದ ಐಪಿಎಲ್ ಫೈನಲ್ ಪಂದ್ಯವನ್ನು ಅಹಮದಾಬಾದ್‌ಗೆ ಸ್ಥಳಾಂತರಿಸಲಾಗಿದೆ ಎಂಬ ವಿಚಾರವಾಗಿ ಮಾತನಾಡಿ, ಬೇರೆ ಕಡೆ ಶೇ.50ರಷ್ಟು ಮೀಸಲಿರುತ್ತದೆ ಎಂದು ಹೇಳಿದರು.

ಟಿಕೆಟ್ ವಿಚಾರಕ್ಕೆ ಸ್ಥಳಾಂತರ ನಿರ್ಧಾರ ಮಾಡಿದ್ದೇವೆ ಪುಟ 2ಕ್ಕೆ

### ಐತಿಚಂಡ ರಮೇಶ್ ಉತ್ತಪ್ಪ ಸರ್ವಾಧ್ಯಕ್ಷ

#### ಮಡಿಕೇರಿ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಒಮ್ಮತದ ಆಯ್ಕೆ

ಮಡಿಕೇರಿ: ಕೊಡಗು ಪತ್ರಿಕಾ ಭವನ ಸಭಾಂಗಣದಲ್ಲಿ ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಪಿ. ಕೇಶವ ಕಾಮತ್ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಕಾರ್ಯಕಾರಿ ಮಂಡಳಿ ಸಭೆಯಲ್ಲಿ ಮಡಿಕೇರಿ ತಾಲೂಕು ಸಾಹಿತ್ಯ ಸಮ್ಮೇಳನಾಧ್ಯಕ್ಷರಾಗಿ ಐತಿಚಂಡ ರಮೇಶ್ ಉತ್ತಪ್ಪ ಅವರನ್ನು ಒಮ್ಮತದಿಂದ ಆಯ್ಕೆಮಾಡಲಾಗಿದೆ

ಮಡಿಕೇರಿ ತಾಲ್ಲೂಕಿನ ಕಡಂಗ (ಅರಪಟ್ಟು) ಗ್ರಾಮದಲ್ಲಿ ಮೇ 20, 2026ರಂದು ನಡೆಯಲಿರುವ ಈ ಸಮ್ಮೇಳನಕ್ಕೆ ಸಾಹಿತ್ಯಾಸಕ್ತರಲ್ಲಿ ಈಗಾಗಲೇ ಉತ್ಸಾಹ ಮೂಡಿದೆ.




**ರಮೇಶ್ ಪರಿಚಯ**

ಐತಿಚಂಡ ರಮೇಶ್ ಉತ್ತಪ್ಪ ಅವರು ಕೊಡಗು ಮೂಲದ ಹಿರಿಯ ಪತ್ರಕರ್ತರು ಹಾಗೂ ಹೆಸರಾಂತ ಲೇಖಕರಾಗಿದ್ದಾರೆ. ಮಡಿಕೇರಿ ತಾಲೂಕಿನ ಕರಡ ಗ್ರಾಮದಲ್ಲಿ ಜನಿಸಿದ ಅವರು ಕೊಡಗು ಮತ್ತು ಮೈಸೂರಿನಲ್ಲಿ ವಿದ್ಯಾಭ್ಯಾಸ ಪೂರ್ಣಗೊಳಿಸಿದ್ದು, ಕನ್ನಡ ಜಾನಪದ ಮತ್ತು ಇತಿಹಾಸ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ಪತ್ರಿಕೋದ್ಯಮದ ಮೂಲಕ ವೃತ್ತಿಜೀವನ ಆರಂಭಿಸಿದ ಅವರು ದೀರ್ಘಕಾಲದಿಂದ ಈ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದು, ಪ್ರಸ್ತುತ ಮೈಸೂರಿನ 'ವಿಜಯ ಕರ್ನಾಟಕ' ಪತ್ರಿಕೆಯಲ್ಲಿ ಸ್ಥಾನಿಕ ಸಂಪಾದಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಸಾಹಿತ್ಯ ಕ್ಷೇತ್ರದಲ್ಲಿಯೂ ಮಹತ್ವದ ಕೊಡುಗೆ ನೀಡಿರುವ ರಮೇಶ್ ಉತ್ತಪ್ಪ ಅವರು ಇದುವರೆಗೆ 40ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ವನ್ಯಜೀವಿ ಸಾಹಿತ್ಯದಲ್ಲಿ ವಿಶೇಷ ಆಸಕ್ತಿ ಹೊಂದಿರುವ ಅವರು, ವಿಶೇಷವಾಗಿ ಆನೆಗಳ ಕುರಿತು ಆಳವಾದ ಅಧ್ಯಯನ ನಡೆಸಿ ಸುಮಾರು 10ಕ್ಕೂ ಹೆಚ್ಚು ಪುಸ್ತಕಗಳನ್ನು ರಚಿಸಿದ್ದಾರೆ. ಕೊಡವ ಭಾಷೆಯಲ್ಲಿಯೂ ಹಲವಾರು ಕೃತಿಗಳನ್ನು ನೀಡಿದ್ದಾರೆ. ಪುಟ 2ಕ್ಕೆ

## ಸರ್ಕಾರ ಸಾಮಾಜಿಕ ನ್ಯಾಯದ ಪರ

### ಯಾವುದೇ ಶೋಷಿತ ಸಮುದಾಯಕ್ಕೂ ಅನ್ಯಾಯ ಆಗಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ



**ಮೈಸೂರು:** ಶೋಷಿತ, ಅವಕಾಶ ವಂಚಿತ ಯಾವುದೇ ಸಮುದಾಯಕ್ಕೂ ಅನ್ಯಾಯವಾಗಲು ಬಿಡುವುದಿಲ್ಲ. ನಮ್ಮ ಸರ್ಕಾರ ಸಾಮಾಜಿಕ ನ್ಯಾಯದ ಪರವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತದಿಂದ ಬುಧವಾರ ಏರ್ಪಡಿಸಿದ್ದ ಸಿದ್ಧರಾಮೇಶ್ವರ ಜಯಂತಿಯಲ್ಲಿ ವಿಮರ್ಶಕ ಪ್ರೊ.ಎಸ್.ಜಿ.ಸಿದ್ಧರಾಮಯ್ಯ ಅವರಿಗೆ ಕಾಯಕಯೋಗಿ ಸಿದ್ಧರಾಮೇಶ್ವರ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು. ಎಡಗೈ ಜಾತಿಗಳಿಗೆ ಶೇ.5.25, ಬಲಗೈ ಜಾತಿಗಳಿಗೆ ಶೇ.5.25 ಮತ್ತು ಭೋವಿ, ಕೊರಮ, ಕೊರಚ, ಲಂಬಾಣಿ, ಅಲೆಮಾರಿ ಸಮುದಾಯಗಳಿಗೆ ಶೇ.4.5 ಒಳಮೀಸಲಾತಿ ಹಂಚಿಕೆ ಮಾಡಿ, ಸಚಿವ ಸಂಪುಟದಲ್ಲಿ ಅನುಮೋದಿಸಲಾಗಿದೆ. ಇಲ್ಲಿ ಯಾವುದೇ ಸಮುದಾಯಕ್ಕೂ ಅನ್ಯಾಯವಾಗಿಲ್ಲ. 1931ರ ನಂತರ ಇದೀಗ ಜಾತಿ ಜನಗಣತಿ ನಡೆಯುತ್ತಿದೆ. ಅದರ ವರದಿ ಬಂದ ನಂತರ ಮತ್ತೊಂದು ಬಾರಿ ಚರ್ಚಿಸೋಣ ಎಂದರು. ಪುಟ 2ಕ್ಕೆ

ಮೊದಲ ಪುಟದಿಂದ

## ಸರ್ಕಾರ ಸಾಮಾಜಿಕ ನ್ಯಾಯದ ಪರ

ಬಸವಾದಿ ಶರಣರ ಸಾಮಾಜಿಕ ನ್ಯಾಯದಲ್ಲಿ, ಅಂಬೇಡ್ಕರ್‌ರ ಸಂವಿಧಾನದಲ್ಲಿ ಸರ್ಕಾರವು ನಂಬಿಕೆ ಇಟ್ಟಿದೆ. ಭೋವಿ ಸಮುದಾಯ ಭವನಗಳಿಗೆ ಜಾಗ,

ಅನುದಾನ ಸೇರಿದಂತೆ ಎಲ್ಲ ಬೇಡಿಕೆ ಈಡೇರಿಕೆಗೆ ಸರ್ಕಾರ ಪರಿಶೀಲಿಸಲಿದೆ. ಭೋವಿ ಅಭಿವೃದ್ಧಿ ನಿಗಮಕ್ಕೆ ನೀಡಲಾಗಿರುವ 75 ಕೋಟಿಯನ್ನು ಮೊದಲು ಖರ್ಚು ಮಾಡಿ, ಮತ್ತೆ ಕೊಡೋಣ ಎಂದು ಹೇಳಿದರು.

ಜಾತಿ ವ್ಯವಸ್ಥೆ ಸುಲಭವಾಗಿ ಹೋಗದು. ಜಾತಿ, ವರ್ಗ ರಹಿತ ಸಮಾಜ ನಿರ್ಮಾಣವಾಗಲು ನಾಡಿನ ಸಂಪತ್ತು, ಅಧಿಕಾರ ಸಮಾನವಾಗಿ ಹಂಚಿಕೆಯಾಗಬೇಕು. ಸಾಮಾಜಿಕ ಮತ್ತು ಆರ್ಥಿಕ ಪ್ರಜಾಪ್ರಭುತ್ವದ ತಳಹದಿಯ ಮೇಲೆ ರಾಜಕೀಯ ಸ್ವಾತಂತ್ರ್ಯ ನಿಂತಿದೆ. ಶೋಷಿತ ಸಮುದಾಯಗಳು ಉನ್ನತ ಶಿಕ್ಷಣದ ಜೊತೆಗೆ ವೈಜ್ಞಾನಿಕ, ವೈಚಾರಿಕತೆ ಬೆಳೆಸಿಕೊಳ್ಳಬೇಕು ಎಂದರು.

ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ಎಸ್.ತಂಗಡಗಿ, ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್, ಶಾಸಕರಾದ ಕೆ.ಹರೀಶ್ ಗೌಡ, ಅನಿಲ್ ಚಿಕ್ಕಮಾದು, ವಿಧಾನ ಪರಿಷತ್ ಸದಸ್ಯರಾದ ಯತೀಂದ್ರ ಸಿದ್ದರಾಮಯ್ಯ, ಡಾ.ಡಿ.ತಿಮ್ಮಯ್ಯ, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪ, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎನ್.ರಂಗಸ್ವಾಮಿ, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಪಾಲ್ಗೊಂಡಿದ್ದರು.

## ಮತ್ತೆ 'ಪವರ್ ಪಾಲಿಟಿಕ್ಸ್'

ಕಾಂಗ್ರೆಸ್ ಬೆಂಬಲ ನೀಡಿರುವ ಬಗ್ಗೆ ಮಾತನಾಡಿ, ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಬೇಕು. ಜಾತ್ಯಾತೀತ ಶಕ್ತಿಗಳು ಒಂದಾಗಿ ಇರಬೇಕು ಎಂದು ಈ ತೀರ್ಮಾನ ಮಾಡಲಾಗಿದೆ. ಎಐಡಿಎಂಕೆ, ಬಿಜೆಪಿಯವರು ಎಷ್ಟೇ ಒತ್ತಡ ಹಾಕಿದರು ಟಿವಿಕೆಯವರು ಮೈತ್ರಿ ಮಾಡಿಕೊಳ್ಳಲಿಲ್ಲ. ಜಾತ್ಯಾತೀತ ಶಕ್ತಿ ಉಳಿಯಲು, ತಮಿಳುನಾಡಿನ ಹಿತಕ್ಕಾಗಿ ನಮ್ಮ ಪಕ್ಷ ಈ ತೀರ್ಮಾನ ಮಾಡಿದೆ ಎಂದರು.

## ವನ್ಯಜೀವಿಗಳ ಸಂತಾನ ನಿಯಂತ್ರಣ

ರೈಲ್ವೆ ಬ್ಯಾರಿಕೇಡ್, ಆನೆ ಕಂದಕ ನಿರ್ಮಾಣಕ್ಕೆ ಹಣಕಾಸಿನ ಕೊರತೆ ಇಲ್ಲ. ಅನುದಾನದ ಕೊರತೆ ಇಲ್ಲ. ಹೆಚ್ಚಿನ ಅನುದಾನ ನೀಡುವಂತೆ ಮುಖ್ಯಮಂತ್ರಿಗೆ ಮನವಿ ಮಾಡಲಾಗಿದೆ ಎಂದರು.

ಪ್ರವಾಸಿಗರ ಅನುಕೂಲಕ್ಕಾಗಿ ಮತ್ತು ದುಬಾರೆ ಹಾಡಿಯಲ್ಲಿರುವ 150 ಮನೆಗಳ ನಿವಾಸಿಗಳಿಗೆ ತುರ್ತು ಸಂದರ್ಭದಲ್ಲಿ ನಗರಕ್ಕೆ ಬರಲು ಅನುಕೂಲವಾಗುವಂತೆ 7 ಕೋಟಿ 30 ಲಕ್ಷ ರೂ. ವೆಚ್ಚದಲ್ಲಿ ಗುಣಮಟ್ಟದ ತೂಗು ಸೇತುವೆ ನಿರ್ಮಿಸಲಾಗುತ್ತಿದೆ ಎಂದರು.

ಶಾಸಕ ಡಾ.ಮಂತರ್ ಗೌಡ, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕ ಕುಮಾರ್ ಪುಷ್ಕರ್, ಮನೆಹಳ್ಳಿ ಮಠದ ಶ್ರೀ ಮಹಾಂತ ಶಿವಲಿಂಗ ಸ್ವಾಮೀಜಿ, ಕಲ್ಲಹಳ್ಳಿ ಮಠದ ಶ್ರೀ ರುದ್ರಮುನಿ ಸ್ವಾಮೀಜಿ ಮತ್ತಿತರರು ಭಾಗವಹಿಸಿದ್ದರು.

## ಟಿವಿಕೆ ಕೈಹಿಡಿದ ಕಾಂಗ್ರೆಸ್

ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ 108 ಸ್ಥಾನಗಳನ್ನು ಗೆಲ್ಲುವ ಮೂಲಕ ಏಕೈಕ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಟಿವಿಕೆಗೆ ಕಾಂಗ್ರೆಸ್ ಬೆಂಬಲ ಘೋಷಿಸಿದ ಬೆನ್ನಲ್ಲೇ ಕಾಂಗ್ರೆಸ್ ಶಾಸಕರು ಚೆನ್ನೈನ ಪನ್ನೈಯೂರಿನಲ್ಲಿರುವ ಟಿವಿಕೆ ಪ್ರಧಾನ ಕಚೇರಿಗೆ ಭೇಟಿ ನೀಡಿದರು. ನಟ–ರಾಜಕಾರಣಿ ವಿಜಯ್ ಅವರೊಂದಿಗಿನ ಉನ್ನತ ಮಟ್ಟದ ಸಭೆಗೆ ಕಾಂಗ್ರೆಸ್ ಶಾಸಕರ ನಿಯೋಗ ಆಗಮಿಸಿದೆ.

ಟಿವಿಕೆ ಕಚೇರಿಗೆ ಆಗಮಿಸಿದ ಕಾಂಗ್ರೆಸ್ ಶಾಸಕರಿಗೆ ನಿಯೋಜಿತ ಮುಖ್ಯಮಂತ್ರಿ ವಿಜಯ್ ಅವರು ಹೂಮಾಲೆ ಮತ್ತು ರೇಷ್ಮೆ ಶಾಲುಗಳನ್ನು ಹೊದಿಸಿ ಸ್ವಾಗತಿಸಿದರು. ತಮಿಳುನಾಡು ಕಾಂಗ್ರೆಸ್ ಪ್ರಭಾರಿ ಗಿರೀಶ್ ಚೋಡಂಕರ್ ಸಹಿ ಮಾಡಿದ ಪತ್ರದಲ್ಲಿ, ರಾಜ್ಯದ ಜನತೆ ವಿಜಯ್ ನೇತೃತ್ವದ ಟಿವಿಕೆಗೆ ಸ್ಪಷ್ಟ, ಬಲವಾದ ಮತ್ತು ಭಾರೀ ತೀರ್ಪು ನೀಡಿದ್ದಾರೆ ಎಂದು ಉಲ್ಲೇಖಿಸಲಾಗಿದೆ.

## ಎಐಎಡಿಎಂಕೆ 2 ಹೋಳು?

ಟಿವಿಕೆ ಬೆಂಬಲಿಸುವುದಾಗಿ ಎಡಪ್ಪಾಡಿ ಕೆ.ಪಳನಿಸ್ವಾಮಿಗೆ ಎಚ್ಚರಿಕೆ ನೀಡಿದ್ದಾರೆ.

ಇದರಿಂದಾಗಿ ಬುಧವಾರ ನಡೆಯಬೇಕಿದ್ದ ಎಐಎಡಿಎಂಕೆಯ ಪ್ರಮುಖ ಶಾಸಕರ ಸಭೆಯನ್ನು ಮುಂದೂಡಲಾಗಿದೆ. ಮತ್ತೊಂದು ಕಡೆ ಪಕ್ಷದ ಹಿರಿಯ ನಾಯಕ ಸಿವಿ ಷಣ್ಮುಗಂ ಅತೃಪ್ತ ಶಾಸಕರ ನೇತೃತ್ವ ವಹಿಸಿದ್ದಾರೆ. ಅವರ ನಿವಾಸದಲ್ಲಿ ಪ್ರಮುಖ ಸಭೆ ನಡೆಯುವ ಸಾಧ್ಯತೆಯಿದೆ.

## ವಚನಾನಂದ ಶ್ರೀಗೆ ನಿರೀಕ್ಷಣಾ ಜಾಮೀನು

ಹಾಸ್ಟೆಲ್‌ನಲ್ಲಿದ್ದ ಮಕ್ಕಳ ಮೇಲೆ ಸ್ವಾಮೀಜಿ ಹಾಗೂ ಅವರ ಬೆಂಬಲಿಗರು ದೌರ್ಜನ್ಯವೆಸಗುತ್ತಿದ್ದರು ಎಂದು ಆರೋಪಿಸಿ ಮೂವರು ಮಕ್ಕಳು ದೂರು ನೀಡಿದ್ದರು.

## ಹೈಕಮಾಂಡ್ ಮಾತನ್ನಷ್ಟೇ ಕೇಳುವೆ: ಸಿಎಂ ಸಿದ್ದರಾಮಯ್ಯ

\ ಚರ್ಚಿಸಿ ತೀರ್ಮಾನಿಸುತ್ತೇನೆ. ಯಾವಾಗ ಕರೆಯುತ್ತಾರೆಯೋ ಗೊತ್ತಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

## ವಿಜಯ್–ರಾಜ್ಯಪಾಲರ ಭೇಟಿ: ಸರ್ಕಾರ ರಚನೆಗೆ ಹಕ್ಕು ಮಂಡನೆ

ಸರ್ಕಾರ ರಚನೆ ವಿಷಯದ ಬಗ್ಗೆ ಟಿವಿಕೆ ಸಂಸ್ಥಾಪಕ ವಿಜಯ್ ಅವರು ಹೊಸ ಪತ್ರ ಬರೆದಿದ್ದಾರೆ ಮತ್ತು ಮೇ 7ರಂದು ಬೆಳಗ್ಗೆ 11.30ಕ್ಕೆ ಪ್ರಮಾಣ ವಚನ ಸ್ವೀಕಾರ ಸಮಾರಂಭವನ್ನು ನಡೆಸುವಂತೆ ರಾಜ್ಯಪಾಲರನ್ನು ವಿನಂತಿಸಿದ್ದಾರೆ ಎಂದು ಟಿವಿಕೆ ಮೂಲ ತಿಳಿಸಿದೆ. ಚೆನ್ನೈನ ನೆಹರೂ ಕ್ರೀಡಾಂಗಣದಲ್ಲಿ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಭರ್ಜರಿ ಸಿದ್ಧತೆಗಳು ನಡೆಯುತ್ತಿವೆ ಎಂದು ಪೊಲೀಸರು ತಿಳಿಸಿದ್ದಾರೆ.

# ಅನಧಿಕೃತ ಹೋಂಸ್ಟೇ ಸ್ಥಗಿತಕ್ಕೆ ಸೂಚನೆ

ಬೆಂಗಳೂರು ನಗರ:– ಜಿಲ್ಲೆಯಲ್ಲಿನ ಅನಧಿಕೃತ ಹೋಂಸ್ಟೇಗಳನ್ನು ತಕ್ಷಣ ಸ್ಥಗಿತಗೊಳಿಸುವಂತೆ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಸಹಾಯಕ ನಿರ್ದೇಶಕ ಸೂಚನೆ.


ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳು ದಿನೇ ದಿನೇ ಹೆಚ್ಚಾಗುತ್ತಿದ್ದು ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಅನೇಕ ಹೋಂಸ್ಟೇಗಳು ಕಾರ್ಯ ನಿರ್ವಹಿಸುತ್ತಿವೆ. ಪ್ರವಾಸಿಗರ ಸುರಕ್ಷತೆ, ಗುಣಮಟ್ಟದ ಸೇವೆ, ಕಾನೂನು ಬದ್ಧ ನಿರ್ವಹಣೆ ಹಾಗೂ ಪ್ರವಾಸೋದ್ಯಮ ಕ್ಷೇತ್ರದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) ಅಧಿನಿಯಮ–2015 ರನ್ವಯ ಕಡ್ಡಾಯವಾಗಿ ಹೋಂಸ್ಟೇಗಳು ಅಧಿಕೃತವಾಗಿ ನೋಂದಣಿ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ನೋಂದಣಿ ಪತ್ರ ಪಡೆಯದೇ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಹೋಂಸ್ಟೇ ಮಾಲೀಕರು ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ನಗರ ಜಿಲ್ಲೆ ಇವರಿಗೆ ಅಗತ್ಯ ದಾಖಲೆಗಳಾದ ಗ್ರಾಮ ಪಂಚಾಯಿತಿ ನಿರಾಕ್ಷೇಪಣಾ ಪತ್ರ, ಇ–ಖಾತಾ/ಪಹಣಿ, ಪೊಲೀಸ್ ನಿರಾಕ್ಷೇಪಣ ಪತ್ರ, ತಹಶೀಲ್ದಾರರಿಂದ ಪಡೆದಿರುವ ವಾಸಸ್ಥಳ ದೃಢೀಕರಣ ಪತ್ರ, ಆಧಾರ್ ಕಾರ್ಡ್ ಮಾಲೀಕರ ಭಾವಚಿತ್ರ ಮತ್ತು ಹೋಂ ಯೋಜನೆಯ ಛಾಯಾಚಿತ್ರಗಳನ್ನು ಸಲ್ಲಿಸಿ, ನೋಂದಣಿ ಮಾಡಿಕೊಂಡು ಅಧಿಕೃತವಾಗಿ ನೋಂದಣಿ ಪತ್ರವನ್ನು ಪಡೆದ ನಂತರ ಹೋಂ ಸ್ಟೇಯನ್ನು ನಡೆಸಬೇಕೆಂದು ತಿಳಿಸಿದ್ದಾರೆ.

ಪ್ರವಾಸಿಗರ ಸುರಕ್ಷತಾ ಹಿತದೃಷ್ಟಿಯಿಂದ ಅಧಿಕೃತ ನೋಂದಣಿ ಅಥವಾ ಪರವಾನಗಿ ಪಡೆಯದೆ ಇರುವ ಹೋಂಸ್ಟೇಗಳ ಅನಧಿಕೃತ ಚಟುವಟಿಕೆಗಳನ್ನು ಕೂಡಲೇ ಸ್ಥಗಿತಗೊಳಿಸಲು ಸೂಚಿಸಿದ್ದಾರೆ. ಅಲ್ಲದೆ ಅನಧಿಕೃತವಾಗಿ ಕಾರ್ಯ ನಿರ್ವಹಿಸುತ್ತಿರುವ ಹೋಂಸ್ಟೇ ಹಾಗೂ ರೆಸಾರ್ಟ್ ಗಳಲ್ಲಿ ಕಾನೂನು ಬಾಹಿರ ಚಟುವಟಿಕೆಗಳು ನಡೆಸುತ್ತಿರುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಹೋಂಸ್ಟೇ ಮಾಲೀಕರಿಗೆ ಸೂಚಿಸಿದರು.

ಹೆಚ್ಚಿನ ಮಾಹಿತಿಗಾಗಿ 'ಂಖ್ಯೆ: 08022352929ಗೆ ಸಂಪರ್ಕಿಸಬಹುದಾಗಿದೆ

# ಸ್ವಚ್ಛತೆಗೆ ಮೈಸೂರು ಪಾಲಿಕೆ ಪ್ಲಾನ್



ಮೈಸೂರು: ಎಷ್ಟು ಬಾರಿ ಹೇಳಿದ್ರೂ ಕೇಳ್ತಾನೆ ಇರಲಿಲ್ಲ. ಕಸ ಎತ್ತಿದ್ರೂ, ದಂಡ ಹಾಕಿದ್ರೂ, ಸ್ವಚ್ಛತೆ ಕಾಪಾಡಿ ಅಂತಾ ಸಾವಿರ ಬಾರಿ ಕೂಗಿ ಕೂಗಿ ಹೇಳ್ತಿದ್ರೂ ಮಾಡಿದ್ದೆ ಮಾಡೋ ಮಾರಾಯಾ ಅಂತಿದ್ರೂ... ಅಂತಹ ಪ್ರಮುಖ ಸ್ಥಳಗಳಲ್ಲಿ ಒಂದಾದ ಮೈಸೂರು ಬಸ್ ನಿಲ್ದಾಣದ ಎದುರಿನ ಗೋಡೆಗಳ ಮೇಲೆ ಮೂತ್ರ ವಿಸರ್ಜನೆ ಮಾಡೋದು ನಿಲ್ಲಿಸುತ್ತಿರಲೇ ಇಲ್ಲ. ಇದನ್ನು ನೋಡಿ ಸಾಕಾಗಿದ್ದ ಜನತೆ ಸಹ ಜನರಿಗೆ, ಪಾಲಿಕೆಗೂ ಹಿಡಿಶಾಪ ಹಾಕಿ ಮೂಗುಮುಚ್ಚಿ ನಡೆಯುತ್ತಿದ್ದರು.

ಇದನ್ನು ಗಮನಹರಿಸಿದ ಮಹಾನಗರ ಪಾಲಿಕೆ ಕೊನೆಗೂ ಒಂದು ಮಾಸ್ಟರ್ ಪ್ಲಾನ್ ಮೈಸೂರು ಗ್ರಾಮಾಂತರ ನಿಲ್ದಾಣದ ಇಡೀ ಗೋಡೆಗೆ ಕನ್ನಡಿಯನ್ನು ಅಳವಡಿಸಿದೆ. ಇದರಿಂದಾಗಿ ಮೂತ್ರ ವಿಸರ್ಜನೆ ಮಾಡಲು ಹೋದವರು ತಮ್ಮನ್ನು ತಾವೇ ನೋಡಿಕೊಂಡು ಅಸಹ್ಯ ಎನಿಸಬೇಕೆನ್ನಿಸುವಂತೆ ಮಾಡಿದ್ದಾರೆ. ಆದರೆ, ರಾತ್ರಿ ವೇಳೆ ಇದನ್ನು ಮೀರಿ ಅಲ್ಲೇ ಗಲೀಜು ಮಾಡುತ್ತಾರೋ ಅಥವಾ ಪಾಲಿಕೆ ಪ್ಲಾನ್ ಗೆ ಸಹಕರಿಸಿ ಸ್ವಚ್ಛತೆ ಕಾಪಾಡುತ್ತಾರೋ ಎಂಬುದನ್ನು ಕಾದು ನೋಡಬೇಕಿದೆ. ಇನ್ನೂ ಪ್ರಾಯೋಗಿಕವಾಗಿ ಇಲ್ಲಿ ಮೊಟ್ಟ ಮೊದಲ ಬಾರಿಗೆ ಕನ್ನಡಿ ಅಳವಡಿಸಿದ್ದು, ಇದು ಯಶಸ್ವಿಯಾದರೆ ಇದೇ ಮಾದರಿಯಲ್ಲಿ ನಗರದ ಇತರೆಡೆಯೂ ಕನ್ನಡಿ ಅಳವಡಿಸಲು ಚಿಂತನೆ ನಡೆಸಿದೆ. ಇದು ಯಾವ ರೀತಿ ಪರಿಣಾಮ ಬೀರಲಿದೆ ಎಂಬುದನ್ನು ಕಾದು ನೋಡಬೇಕಿದೆ.

# ಸಾಮಾಜಿಕ ನ್ಯಾಯಕ್ಕೆ ಸರ್ಕಾರ ಬದ್ಧ

## ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ | ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮ

ಮೈಸೂರು: "ರಾಜ್ಯದ ಸಂಪತ್ತು ಮತ್ತು ಆಡಳಿತದ ಅಧಿಕಾರ ಸಮಾಜದ ಎಲ್ಲ ವರ್ಗದವರಿಗೂ ಸಮಾನವಾಗಿ ಹಂಚಿಕೆಯಾಗಬೇಕು. ಸಾಮಾಜಿಕ ನ್ಯಾಯದ ಆಶಯಗಳನ್ನು ಈಡೇರಿಸಲು ನಮ್ಮ ಸರ್ಕಾರ ಸಂಪೂರ್ಣ ಬದ್ಧವಾಗಿದೆ," ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಪಾದಿಸಿದರು.

ನಗರದ ಕರ್ನಾಟಕ ಕಲಾಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತೋತ್ಸವ ಸಮಿತಿ ಆಯೋಜಿಸಿದ್ದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



### ಸಮ ಸಮಾಜ ನಿರ್ಮಾಣದ ಗುರಿ

ಕಾರ್ಯಕ್ರಮದಲ್ಲಿ ಅತ್ಯಂತ ಸಂತೋಷದಿಂದ ಭಾಗವಹಿಸಿರುವುದಾಗಿ ತಿಳಿಸಿದ ಮುಖ್ಯಮಂತ್ರಿಗಳು, "ಎಲ್ಲಿಯವರೆಗೆ ಸಮಾಜದಲ್ಲಿ ಅಸಮಾನತೆ ಇರುತ್ತದೆಯೋ, ಅಲ್ಲಿಯವರೆಗೆ ತಳ ಸಮುದಾಯಗಳಿಂದ ಹಕ್ಕುಗಳಿಗಾಗಿ ಬೇಡಿಕೆಗಳು ಬರುತ್ತಲೇ ಇರುತ್ತವೆ. ಈ ನಾಡಿನ ಸಂಪತ್ತು ಮತ್ತು ಅಧಿಕಾರದಲ್ಲಿ ಪ್ರತಿಯೊಬ್ಬರಿಗೂ ಸಮಾನ ಪಾಲು ಸಿಗಬೇಕು ಎನ್ನುವುದೇ ನಮ್ಮ ಸರ್ಕಾರದ ಮೂಲ ಉದ್ದೇಶ. 'ಎಲ್ಲರಿಗೂ ಸಮಪಾಲು, ಸಮಬಾಳು' ಎಂಬ ತತ್ವವನ್ನು ನಾವು ಅನುಷ್ಠಾನಕ್ಕೆ ತರುತ್ತಿದ್ದೇವೆ," ಎಂದರು.

### ವೈಚಾರಿಕತೆ ಮತ್ತು ಶಿಕ್ಷಣದ ಮಹತ್ವ

ಸಮಾಜದ ವರ್ಗ ವ್ಯವಸ್ಥೆ ಮತ್ತು ಜಾತಿ ಪದ್ಧತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, "ಎಲ್ಲಾ ಸಾಮಾಜಿಕ ಹೋರಾಟಗಾರರ ಗುರಿ ಒಂದೇ ಆಗಿದೆ. ಅದು ಸಮಾಜದಲ್ಲಿ ವೈಜ್ಞಾನಿಕ ಮನೋಭಾವ ಮತ್ತು ವೈಚಾರಿಕತೆಯನ್ನು ಬೆಳೆಸಿ ವರ್ಗ ವ್ಯವಸ್ಥೆಯನ್ನು ನಿರ್ಮೂಲನೆ ಮಾಡುವುದು. ಇಂದಿಗೂ ಜಾತಿ ವ್ಯವಸ್ಥೆ ಅಸ್ತಿತ್ವದಲ್ಲಿರುವುದು ದುರದೃಷ್ಟಕರ. ಡಾ. ಬಿ.ಆರ್. ಅಂಬೇಡ್ಕರ್ ಅವರು ಹೇಳಿದಂತೆ, ಜಾತಿ ಪದ್ಧತಿಯ ನಿರ್ಮೂಲನೆಗೆ ರಾಜಕೀಯ ಸ್ವಾತಂತ್ರ್ಯ ಮತ್ತು ಶಿಕ್ಷಣ ಅತ್ಯಗತ್ಯ. ಪ್ರತಿಯೊಬ್ಬರಿಗೂ ಶಿಕ್ಷಣ ಸಿಕ್ಕಾಗ ಮಾತ್ರ ಅವರು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಪ್ರಗತಿ ಹೊಂದಲು ಸಾಧ್ಯ," ಎಂದು ತಿಳಿಸಿದರು.

### ಸಂವಿಧಾನ ಮತ್ತು ಗ್ಯಾರಂಟಿ ಯೋಜನೆಗಳು

ಅಂಬೇಡ್ಕರ್ ಅವರ ಕೊಡುಗೆಗಳನ್ನು ಸ್ಮರಿಸಿದ ಸಿದ್ದರಾಮಯ್ಯನವರು, "ಇಂದು 'ಜೈ ಭೀಮ್' ಎನ್ನುವ ಘೋಷಣೆ ಎಲ್ಲೆಡೆ ಮೊಳಗುತ್ತಿದೆ. ಸಂವಿಧಾನ ಜಾರಿಗೆ ಬರುವ ಮುನ್ನ ಮನುಶಾಸ್ತ್ರದ ಆಧಾರದಲ್ಲಿ ಆಡಳಿತ ನಡೆಸಲಾಗುತ್ತಿತ್ತು, ಆದರೆ ಇಂದು ನಾವು ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ನಡೆಯುತ್ತಿದ್ದೇವೆ. ನಮ್ಮ ರಾಜ್ಯದ 7 ಕೋಟಿ ಜನರಿಗೂ ಯಾವುದೇ ತಾರತಮ್ಯವಿಲ್ಲದೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಇದು ನಾವು ಸಾಮಾಜಿಕ ನ್ಯಾಯಕ್ಕೆ ನೀಡುತ್ತಿರುವ ಗೌರವ. ಮನುಷ್ಯ ಮನುಷ್ಯನನ್ನು ಪ್ರೀತಿಸಬೇಕು ಎಂಬ ಅಂಬೇಡ್ಕರ್ ಅವರ ಸಂದೇಶವೇ ನಮಗೆ ಮಾರ್ಗದರ್ಶನ," ಎಂದರು.

### ಕಾಯಕ ಸಂಸ್ಕೃತಿಗೆ ಒತ್ತು

ಶ್ರೀ ಶಿವಯೋಗಿ ಸಿದ್ಧರಾಮೇಶ್ವರರ ತತ್ವಗಳನ್ನು ಉಲ್ಲೇಖಿಸಿದ ಅವರು, "ಜೀವನದಲ್ಲಿ ಕಾಯಕ ಮಾಡಿ ಸಂಪಾದಿಸಬೇಕು ಮತ್ತು ಆ ಸಂಪಾದನೆಯನ್ನು ಎಲ್ಲರೊಂದಿಗೆ ಹಂಚಿಕೊಳ್ಳಬೇಕು ಎಂಬುದು ಸಿದ್ಧರಾಮೇಶ್ವರರ ಬೋಧನೆ. 'ಕಾಯಕವೇ ಕೈಲಾಸ' ಎಂದು ನಂಬಿ ಕರ್ಮಪಥದಲ್ಲಿ ಸಾಗಿದ ಅವರ ತತ್ವಗಳನ್ನು ನಾವು ಅಳವಡಿಸಿಕೊಳ್ಳಬೇಕು. ಪ್ರತಿಯೊಬ್ಬರೂ ಉತ್ಪಾದನಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಕಾಯಕಯೋಗಿಗಳಾಗಬೇಕು," ಎಂದು ಕರೆ ನೀಡಿದರು.

### ಸಚಿವ ಶಿವರಾಜ್ ತಂಗಡಗಿ ಅವರ ಮಾತುಗಳು

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ ಮಾತನಾಡಿ, "ಭೋವಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪುತ್ತಿವೆ ಎಂದರೆ ಅದಕ್ಕೆ ಸಿದ್ದರಾಮಯ್ಯನವರ ದೂರದೃಷ್ಟಿಯೇ ಕಾರಣ. ಸಮಾಜದ ಸಮಸ್ಯೆಗಳಿಗೆ ಮುಖ್ಯಮಂತ್ರಿಗಳ ಸಮ್ಮುಖದಲ್ಲೇ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಮೈಸೂರಿಗೆ ಸ್ಥಳಾಂತರಿಸಲಾಯಿತು. ಸಮಾಜದ ಯುವಕರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಅನ್ನಭಾಗ್ಯದಂತಹ ಯೋಜನೆಗಳಿಂದ ಇಂದು ಬಡವರ ಹಸಿವು ನೀಗಿದೆ," ಎಂದರು. ಇದೇ ವೇಳೆ ಅವರು ರಾಜ್ಯ ಮಟ್ಟದ ಪ್ರಥಮ 'ಸಿದ್ಧರಾಮೇಶ್ವರ ಪ್ರಶಸ್ತಿ'ಯನ್ನು ಹಿರಿಯ ಸಾಹಿತಿ ಪ್ರೊ. ಎಸ್.ಜಿ. ಸಿದ್ದರಾಮಯ್ಯ ಅವರಿಗೆ ನೀಡಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು.

### ಧಾರ್ಮಿಕ ಗುರುಗಳ ಆಶೀರ್ವಚನ

**ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಯವರು ಮಾತನಾಡಿ, ಸಿದ್ಧರಾಮೇಶ್ವರರು ಕೇವಲ ಒಬ್ಬ ಶರಣರಲ್ಲ, ಅವರು ಈ ನಾಡಿನ ಕಾಯಕ ಯೋಗಿ. ಸಮಾಜದ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕೊಡುಗೆ ಅಪಾರವಾಗಿದ್ದು, ಅವರು ಕಟ್ಟಕಡೆಯ ವ್ಯಕ್ತಿಯ ಧ್ವನಿಯಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಶ್ಲಾಘಿಸಿದರು.**

### ಪ್ರಶಸ್ತಿ ಪ್ರದಾನ ಮತ್ತು ಗಣ್ಯರ ಉಪಸ್ಥಿತಿ

ಇದೇ ಸಂದರ್ಭದಲ್ಲಿ 2025–26ನೇ ಸಾಲಿನ 'ಕಾಯಕ ಯೋಗಿ ಸಿದ್ಧರಾಮೇಶ್ವರ ಪ್ರಶಸ್ತಿ'ಯನ್ನು ತುಮಕೂರು ಜಿಲ್ಲೆಯ ಖ್ಯಾತ ಸಾಹಿತಿ ಪ್ರೊ. ಎಸ್.ಜಿ. ಸಿದ್ದರಾಮಯ್ಯ ಅವರಿಗೆ ಪ್ರದಾನ ಮಾಡಲಾಯಿತು. ಇದೇ ವೇಳೆ 'ಸಿದ್ಧರಾಮ ಬೆಳ್ಳಿಕಿರಣ' ಪುಸ್ತಕವನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಸಚಿವರಾದ ಕೆ. ವೆಂಕಟೇಶ್, ಶಾಸಕರಾದ ಕೆ. ಹರೀಶ್ ಗೌಡ, ಅನಿಲ್ ಚಿಕ್ಕಮಾಧು, ಡಾ. ಡಿ. ತಿಮ್ಮಯ್ಯ, ಡಾ. ಯತೀಂದ್ರ ಸಿದ್ದರಾಮಯ್ಯ, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ರಾಮಪ್ಪ, ವಿವಿಧ ಪ್ರಾಧಿಕಾರಗಳ ಅಧ್ಯಕ್ಷರುಗಳಾದ ಡಾ. ಮಾನಸ, ಆಯುಬ್ ಖಾನ್, ಹೆಚ್.ಡಿ. ಗಣೇಶ್, ಎಸ್. ರಂಗಸ್ವಾಮಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಮೊದಲ ಪುಟದಿಂದ

## ಇಸ್ರೋ ಕ್ಯಾಂಪಸ್ ಮೇಲೆ ಡ್ರೋನ್ ಹಾರಾಟ: ಆತಂಕ

ಚಟುವಟಿಕೆಗಳಿಗೆ ಅನುಮತಿಯನ್ನು ನಿರಾಕರಿಸಲಾಗಿದೆ. ಇಂತಹ ಪ್ರದೇಶದಲ್ಲಿ ಡ್ರೋನ್ ಹಾರಾಟ ನಡೆದಿರುವುದು ಭದ್ರತೆ ಹಾಗೂ ರಾಷ್ಟ್ರದ ಪ್ರಮುಖ ವೈಜ್ಞಾನಿಕ ಆಸ್ತಿಗಳ ಸುರಕ್ಷತೆಗೆ ಗಂಭೀರ ಅಪಾಯವೆಂದು ಪರಿಗಣಿಸಲಾಗಿದೆ. ಅಪರಿಚಿತರು ಕಾನೂನು ಉಲ್ಲಂಘಿಸಿ ಅಥವಾ ಉದ್ದೇಶಪೂರ್ವಕವಾಗಿ ಡ್ರೋನ್ ಹಾರಿಸಿದ್ದು, ಎಚ್‌ಎಎಲ್ ಪೊಲೀಸರು ಡ್ರೋನ್ ಹಾರಿಸಿದವರ ಪತ್ತೆಗೆ ಬಲೆ ಬೀಸಿದ್ದಾರೆ.

## ಐಪಿಎಲ್ ಫೈನಲ್ ಪಂದ್ಯ ಸ್ಥಳಾಂತರ

ಎಂದು ಬಿಸಿಸಿಐ ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯಿಸಿ, ಅವರು ಈ ರೀತಿ ಹೇಳಿಕೆ ನೀಡಲಿ, ನಾನು ಅದಕ್ಕೆ ಸರಿಯಾದ ಉತ್ತರ ಕೊಡುತ್ತೇನೆ ಎಂದು ಎಚ್ಚರಿಕೆ ನೀಡಿದರು.

## ಸಿದ್ದರಾಮಯ್ಯ ದೇಶದ ಹಿರಿಯ ಸಿಎಂ!

ಸ್ಥಾನಗಳಲ್ಲಿ ಆಂಧ್ರಪ್ರದೇಶ ಸಿಎಂ ಚಂದ್ರಬಾಬು ನಾಯ್ಡು (75), ಮಿಜೋರಂನ ಲಾಲ್ ದುಹೋಮಾ (74), ನಾಗಾಲ್ಯಾಂಡ್‌ನ ನೆಫ್ಯು ರಿಯೋ (74), ಪುದುಚೇರಿಯ ರಂಗಸ್ವಾಮಿ (74) ಇದ್ದಾರೆ. ಅರುಣಾಚಲ ಪ್ರದೇಶದ ಪೇಮಾ ಖಂಡು (46) ಅವರು ದೇಶದ ಅತ್ಯಂತ ಕಿರಿಯ ಸಿಎಂ ಆಗಿದ್ದಾರೆ. ಇನ್ನೂ ರಾಜ್ಯ ಆಳಿದ ಅತಿ ಹಿರಿಯ ನಾಯಕ ಎಂಬ ಖ್ಯಾತಿ ತಮಿಳುನಾಡು ಮಾಜಿ ಸಿಎಂ ದಿ.ಕರುಣಾನಿಧಿ (92) ಅವರಿಗಿದೆ

## ಐತಿಚಂಡ ರಮೇಶ್ ಉತ್ತಪ್ಪ ಸರ್ವಾಧ್ಯಕ್ಷ

ಅವರ ಪ್ರಮುಖ ಕೃತಿಗಳಲ್ಲಿ 'ಅಭಿಮನ್ಯು ದಿ ಗ್ರೇಟ್', ಮೈಸೂರು ದಸರಾ ಅಂಬಾರಿ ಆನೆ ಅಭಿಮನ್ಯುವಿನ ಕುರಿತಾದ ಕೃತಿ; 'ಆನೆ ಲೋಕದ ವಿಸ್ಮಯ' (ಇಂಗ್ಲಿಷ್ನಲ್ಲಿ 'ಖಿಜ ಖಿಚಿಟಇುಟಿರ ಇಟಜಖಿಚಿಟಿಣ'ಹೆಸರಿನಲ್ಲಿ ಅನುವಾದಗೊಂಡಿದೆ); 'ಕುಶಾ ಕಿ ಕಹಾನಿ', ದುಬಾರೆ ಆನೆ ಶಿಬಿರದ ಕುಶ ಆನೆಯ ಕಥೆ ಹಾಗೂ 'ಸಾವಿನ ಸತ್ಯ', ದಸರಾ ಆನೆ ಅರ್ಜುನನ ಸಾವಿನ ತನಿಖಾ ವರದಿ ಒಳಗೊಂಡ ಕೃತಿ ಪ್ರಮುಖವಾಗಿವೆ. ಇದಲ್ಲದೆ, ಅವರ 'ಕೊಡಗಿನ ಆಟಿ ತಿಂಗಳ ಆಚರಣೆಯ ಅಚ್ಚರಿಗಳು' ಎಂಬ ಲೇಖನವು ಆದಿಚುಂಚನಗಿರಿ ವಿಶ್ವವಿದ್ಯಾಲಯದ ಬಿ.ಎಸ್ಸಿ ಪಠ್ಯಪುಸ್ತಕದಲ್ಲಿಯೂ ಸೇರಿಸಲಾಗಿದೆ. ಸಾಹಿತ್ಯ ಹಾಗೂ ಪತ್ರಿಕೋದ್ಯಮ ಕ್ಷೇತ್ರಗಳಲ್ಲಿ ವಿಶಿಷ್ಟ ಸಾಧನೆ ಮಾಡಿದ ರಮೇಶ್ ಉತ್ತಪ್ಪ ಅವರ ಆಯ್ಕೆ ಸಮ್ಮೇಳನದ ಗೌರವವನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ಸಾಹಿತ್ಯ ವಲಯದಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ.

## ಎಫ್‌ಆರ್‌ಪಿ ದರ ನ್ಯಾಯ ಸಮ್ಮತವಲ್ಲ

ಮೈಸೂರು: ಕೇಂದ್ರ ಸರ್ಕಾರ ಘೋಷಣೆ ಮಾಡಿರುವ ಬಗ್ಗೆ 3650 ಕಬ್ಬಿನ ಎಫ್.ಆರ್.ಪಿ ದರ ಕಬ್ಬು ಬೆಳೆಗಾರ ರೈತರಿಗೆ ನ್ಯಾಯ ಸಮ್ಮತವಲ್ಲ ಎಂದು ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ತಿಳಿಸಿದರು.



ಕೇಂದ್ರ ಸಚಿವ ಸಂಪುಟ ನನ್ನ ತೀರ್ಮಾನಿಸಿ ಘೋಷಣೆ ಮಾಡಿರುವ 2026–27ನೇ ಸಾಲಿಗೆ 10.25 ಸಕ್ಕರೆ ಇಳುವರಿ ಟನ್ ಕಬ್ಬಿಗೆ 3650 ರೂ ರೈತರ ಉತ್ಪಾದನ ವೆಚ್ಚಕಿಂತ ಕಡಿಮೆಯಾಗಿದೆ. ಕರ್ನಾಟಕ ಸರ್ಕಾರ 4450 ರೂ. ನಿಗದಿ ಮಾಡಬೇಕೆಂದು ವರದಿ ನೀಡಿದೆ. ಇದನ್ನು ಗಮನಿಸಿ ಹೆಚ್ಚುವರಿ ಬೆಲೆ ನಿಗದಿ ಮಾಡಬೇಕಾಗಿತ್ತು. ಇದು ರೈತರನ್ನು ಕಬ್ಬು ಬೆಳೆಯಿಂದ ಒಕ್ಕಲಿಬಸುವ ಕಾರ್ಯವಾಗಿದೆ. ಕೂಡಲೇ ಎಫ್‌ಆರ್‌ಪಿ ದರ ಪುನರ್ ಪರಿಸಿಲಿಸಿ ಟನ್ ಕಬ್ಬಿಗೆ 4500 ರೂ ನಿಗದಿಗೊಳಿಸಬೇಕು. ಕಬ್ಬಿನಿಂದ ಸಕ್ಕರೆ ಎಥನಾಲ್, ವಿದ್ಯುತ್, ಕಾಂಪೋಸ್ಟ್ ಗೊಬ್ಬರ ಇನ್ನು ಇತರ ಉತ್ಪನ್ನಗಳನ್ನು ಉತ್ಪಾದಿಸುವ ಸಕ್ಕರೆ ಕಾರ್ಖಾನೆಗಳು ರೈತರಿಗೆ ನಿರಂತರವಾಗಿ ವಂಚನೆ ಮಾಡುತ್ತಿವೆ. ಸರ್ಕಾರದ ಆದೇಶಗಳನ್ನು ವಾಮ ಮಾರ್ಗದಲ್ಲಿ ನಿರ್ಲಕ್ಷಿಸುತ್ತಿವೆ. ಕಬ್ಬಿನ ಹಣ ಪಾವತಿ ಸಕಾಲಕ್ಕೆ ಸಮರ್ಪಕವಾಗಿ ಮಾಡುತ್ತಿಲ್ಲ. ಇಂತಹ ವಿಚಾರದಲ್ಲಿ ಕಾನೂನು ಉಲ್ಲಂಗಿಸುವ ಸಕ್ಕರೆ ಕಾರ್ಖಾನೆ ಮಾಲೀಕರಿಗೆ ಶಿಕ್ಷೆ ನೀಡುವ ಕಠಿಣ ಕಾಯ್ದೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

### ಜಿಲ್ಲಾಧಿಕಾರಿ ಶ್ರೀರೂಪ ಹೇಳಿಕೆ

# ಸ್ಪರ್ಧಾತ್ಮಕ ಪರೀಕ್ಷೆಗಳಲಲ್ಲಿ ಪ್ರಗತಿ ಸಾಧಿಸಲು ಅಭ್ಯುದಯ ನೆರವು

ಚಾಮರಾಜನಗರ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆತ್ಮವಿಶ್ವಾಸ, ಧೈರ್ಯದಿಂದ ಎದುರಿಸಿ ಪ್ರಗತಿ ಸಾಧಿಸಲು 'ಅಭ್ಯುದಯ' ಕಾರ್ಯಕ್ರಮ ವಿದ್ಯಾರ್ಥಿಗಳಿಗೆ ಪೂರ್ಣಪ್ರಮಾಣದಲ್ಲಿ ನೆರವಾಗಲಿದೆ ಎಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಕೆ.ಡಿ.ಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಚಾಮರಾಜನಗರ ವಿಶ್ವವಿದ್ಯಾಲಯ ಹಾಗೂ ಇಂಡಿಯಾ ಫಾರ್ ಐ.ಎ.ಎಸ್ ಅಕಾಡೆಮಿ ಸಹಯೋಗದಲ್ಲಿ ಜಿಲ್ಲೆಯ ಪದವಿ ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಅರಿವು ಮತ್ತು ತಯಾರಿಯನ್ನು ಉತ್ತೇಜಿಸಲು 'ಅಭ್ಯುದಯ' ಶೀರ್ಷಿಕೆಯಡಿ ಏರ್ಪಡಿಸಲಾಗಿದ್ದ ಜಾಗೃತಿ ಹಾಗೂ ಮಾರ್ಗದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಚಾಮರಾಜನಗರ ಜಿಲ್ಲೆಯ ಇತಿಹಾಸದ ಪುಟಗಳಲ್ಲಿ ಸುವರ್ಣಾಕ್ಷರಗಳಿಂದ ಬರೆದಿಡುವ ದಿನವಾಗಿದೆ. ಅಭ್ಯುದಯ ಎಂದರೇ ಪ್ರಗತಿ, ಸಮೃದ್ಧಿ. ವಿದ್ಯಾರ್ಥಿಗಳು ಸಾಮಾನ್ಯವಾಗಿ ಪದವಿ ಬಳಿಕ ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳಲಿದ್ದು, ಇದು ಉತ್ತಮ ಹಾಗೂ ಉನ್ನತ ಉದ್ಯೋಗಾವಕಾಶಗಳನ್ನು ಪಡೆಯಲು ವಿಳಂಬವಾಗಲಿದೆ. ಇದಕ್ಕೆ ಪರ್ಯಾಯವಾಗಿ ಪದವಿಪೂರ್ವ ಹಂತದಲ್ಲಿಯೇ ಪರಿಶ್ರಮದ ವಿಧಾನಗಳು, ಜಾಗೃತಿ ಹಾಗೂ ಮಾರ್ಗದರ್ಶನ ಕಾರ್ಯಕ್ರಮ




ಹಮ್ಮಿಕೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ಮೊದಲ ಹೆಜ್ಜೆ ಇಡಲಾಗಿದೆ. ಇದರ ಸದ್ಬಳಕೆಯಾಗಬೇಕು ಎಂದರು.

ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಸಾಕಷ್ಟು ಪ್ರತಿಭಾವಂತ ವಿದ್ಯಾರ್ಥಿಗಳಿದ್ದಾರೆ. ಅವರಿಗೆ ಸೂಕ್ತ, ಕ್ರಮಬದ್ಧವಾದ ಮಾರ್ಗದರ್ಶನದ ಕೊರತೆಯಿದೆ. ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಹಿಂದೆ ದೆಹಲಿ, ಚೆನ್ನೈನಂತಹ ದೊಡ್ಡದೊಡ್ಡ ನಗರಗಳಿಗೆ ತೆರಳಬೇಕಾಗಿತ್ತು. ಈಗ ಜಿಲ್ಲಾಡಳಿತ ನಿಮ್ಮ ಮನೆ ಬಾಗಿಲಿನಲ್ಲಿಯೇ ಈ ಸದಾವಕಾಶ ಒದಗಿಸಿದೆ. ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಅರಿವು ಮತ್ತು ಮಾರ್ಗದರ್ಶನ ಪಡೆದು ಜಿಲ್ಲೆಯ ಪ್ರತಿಹಳ್ಳಿಗೂ ಒಬ್ಬರು ಅಥವಾ ಇಬ್ಬರು ಉನ್ನತ ಹುದ್ದೆ ಪಡೆದರೆ ಆಯಾ ಗ್ರಾಮೀಣ ಪ್ರದೇಶಗಳ ಚಿತ್ರಣವೇ ಬದಲಾಗಲಿದೆ. ಇದು ಜಿಲ್ಲೆಯ ಅಭಿವೃದ್ಧಿಗೂ ಪೂರಕವಾಗಿದೆ ಎಂದು ಹೇಳಿದರು.

ಪದವಿಪೂರ್ವ ವಿದ್ಯಾರ್ಥಿಗಳನ್ನು ಪ್ರಾಥಮಿಕ ಹಂತದಿಂದಲೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ಮಾಡಲು ಈಗಾಗಲೇ ಚಿಂತನೆ ನಡೆಸಲಾಗಿದ್ದು, ಈ ಸಂಬಂಧ ಜಿಲ್ಲೆಯ 20 ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಭೆ ಕರೆದು ಚರ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯ ಕಟ್ಟಿಕೊಡುವ ಸದುದ್ದೇಶದೊಂದಿಗೆ ಪದವಿಪೂರ್ವ ಹಂತದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಮಾರ್ಗದರ್ಶನಕ್ಕಾಗಿ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ತಿಳಿಸಿದರು. ಇಂಡಿಯಾ ಫಾರ್ ಐ.ಎ.ಎಸ್ ಅಕಾಡಮಿಯ ಅಧ್ಯಕ್ಷರಾದ ನಿವೃತ್ತ ಐ.ಎ.ಎಸ್ ಅಧಿಕಾರಿ ಹಾಗೂ ಸರ್ಕಾರದ ನಿವೃತ್ತ ಅಪರ ಕಾರ್ಯದರ್ಶಿಗಳಾದ ಸಿ.ಎಸ್. ಕೇದಾರ್ ಅವರು ಸ್ವತಹ ತಮ್ಮ ಅನುಭವಗಳನ್ನು ಹಂಚಿಕೊಂಡರು. ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಆರ್. ಗಂಗಾಧರ್ ಅವರು ಮಾತನಾಡಿ ಸರ್ಕಾರಿ ಶಾಲೆಯ ಮಕ್ಕಳಿಗೆ ಪಿ.ಯು.ಸಿ ಅಥವಾ ಪದವಿ ನಂತರ ವಿಷಯವಾರು ಆಯ್ಕೆ ಕಠಿಣವಾಗುತ್ತಿದೆ. ಅದಕ್ಕೆ ಸ್ಪರ್ಧಾತ್ಮಕ ಪರೀಕ್ಷೆಗಳ ಅರಿವಿನ ಕೊರತೆಯು ಕಾರಣವಾಗಿದೆ. ಇದರಿಂದ ಸಾಕಷ್ಟು ಮಂದಿ ನಿರುದ್ಯೋಗಿಗಳಾಗಿದ್ದಾರೆ. ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ಅವಶ್ಯವಿದೆ ಎಂದರು. ಇದೇ ವೇಳೆ ಜಿಲ್ಲೆಯ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಪರೀಕ್ಷೆಗಳ ಯಶಸ್ಸಿಗೆ ನೆರವಾಗುವ ಕುರಿತ ಕರಾರು ಪತ್ರಕ್ಕೆ ಜಿಲ್ಲಾಧಿಕಾರಿಗಳಾದ ಶ್ರೀರೂಪ ಹಾಗೂ ಇಂಡಿಯಾ ಫಾರ್ ಐ.ಎ.ಎಸ್ ಅಕಾಡಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ್ ಅವರು ಸಹಿ ಮಾಡಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಇಂಡಿಯಾ ಫಾರ್ ಐ.ಎ.ಎಸ್ ಅಕಾಡಮಿಯ ನಾರಾಯಣಪ್ರಸಾದ್, ಸಂಪನ್ಮೂಲ ವ್ಯಕ್ತಿ ದೀಪಕ್, ವಿಷಯ ಪರಿವೀಕ್ಷಕರಾದ ಅಂಥಾಲಿ, ಕನಕ್ಷಾ, ಇದ್ದರು.

# ಹರದನಹಳ್ಳಿಯಲ್ಲಿ ಸಂಭ್ರಮದ 'ಗುರುವಂದನಾ' ಕಾರ್ಯಕ್ರಮ



ಚಾಮರಾಜನಗರ: "ಶಿಕ್ಷಣದ ಜೊತೆಗೆ ಸಂಸ್ಕಾರ, ಪರಂಪರೆ ಮತ್ತು ಜೀವನದ ಮೌಲ್ಯಗಳನ್ನು ತಿಳಿಸಿ ಕೊಡುವ ಗುರುಗಳಿಗೆ ಸಮಾಜದಲ್ಲಿ ಇಂದಿಗೂ ಅತ್ಯುನ್ನತ ಗೌರವವಿದೆ," ಎಂದು ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರು ಹಾಗೂ ಸಂಸ್ಕೃತಿ ಚಿಂತಕ ಸುರೇಶ್ ಎನ್. ಋಗ್ವೇದಿ ತಿಳಿಸಿದರು.

ತಾಲ್ಲೂಕಿನ ಹರದನಹಳ್ಳಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ 1999ರ ಸಾಲಿನ ಹಳೆಯ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ 'ಗುರುವಂದನಾ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಸಾಂಸ್ಕೃತಿಕ ಮೌಲ್ಯಗಳ ನೆಲೆವೀಡು ಹರದನಹಳ್ಳಿ**

ಹರದನಹಳ್ಳಿಯ ಐತಿಹಾಸಿಕ ಮತ್ತು ಸಾಂಸ್ಕೃತಿಕ ಹಿನ್ನೆಲೆಯನ್ನು ಸ್ಮರಿಸಿದ ಋಗ್ವೇದಿ ಅವರು, "ಈ ಗ್ರಾಮಕ್ಕೆ ಸುದೀರ್ಘ ಇತಿಹಾಸವಿದೆ. ಇಲ್ಲಿನ ಜನರ ರಕ್ತದಲ್ಲೇ ಗುರುಪರಂಪರೆಯ ಭಕ್ತಿ ಮತ್ತು ಸಾಂಸ್ಕೃತಿಕ ಮೌಲ್ಯಗಳಿವೆ. ಶ್ರೀ ದಿವ್ಯಲಿಂಗೇಶ್ವರ, ಶ್ರೀ ವೇಣುಗೋಪಾಲಸ್ವಾಮಿ ಹಾಗೂ ಯಡಿಯೂರು ಸಿದ್ಧಲಿಂಗೇಶ್ವರರ ಗುರುಪರಂಪರೆಯ ಪ್ರಭಾವ ಈ ಮಣ್ಣಿನ ಮೇಲಿದೆ. 1999ರಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಇಂದು ವಿವಿಧ ವೃತ್ತಿಗಳಲ್ಲಿ ನೆಲೆಸಿದ್ದರೂ, ತಮ್ಮ 17 ಮಂದಿ ಗುರುಗಳನ್ನು ಹುಡುಕಿ ತಂದು ಗೌರವಿಸಿರುವುದು ಶ್ಲಾಘನೀಯ," ಎಂದರು.

**ವಿದ್ಯಾರ್ಥಿ ಜೀವನದ ಸ್ನೇಹವೇ ಶಕ್ತಿ**


ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ 80 ವರ್ಷದ ಹಿರಿಯ ನಿವೃತ್ತ ಶಿಕ್ಷಕ ವೆಂಕಟ ರಮಣಗೌಡ, "ನಮಗೆ ಬೋಧಿಸಿದ ಶಿಕ್ಷಕರನ್ನು ಸ್ಮರಿಸುವುದು ಮತ್ತು ಗೌರವಿಸುವುದು ದೊಡ್ಡ ಕಾರ್ಯ. ನಿಮ್ಮ ಈ ಶ್ರಮಕ್ಕೆ ನಮ್ಮ ಆಶೀರ್ವಾದ ಸದಾ ಇರುತ್ತದೆ," ಎಂದು ಹಾರೈಸಿದರು.

ಚಾಮರಾಜನಗರ ಡಯಟ್ನ ನಿವೃತ್ತ ಹಿರಿಯ ಉಪನ್ಯಾಸಕ ಟಿ.ವಿ. ಸಿದ್ದರಾಜಾಚಾರಿ ಮಾತನಾಡಿ, "ಹರದನಹಳ್ಳಿಯ ವಿದ್ಯಾರ್ಥಿಗಳ ಭಕ್ತಿ ಮತ್ತು ಸರಳತೆ ಹೆಮ್ಮೆ ತರುವಂತದ್ದು. ಅನೇಕರು ಉನ್ನತ ಹುದ್ದೆಗಳಲ್ಲಿದ್ದರೂ ಗುರುಗಳನ್ನು ಮರೆತಿಲ್ಲದಿರುವುದು ಸಂತಸದ ವಿಷಯ," ಎಂದರು. ಗಣಿತ ಶಿಕ್ಷಕ ಮಂಜುನಾಥ್ ಮಾತನಾಡಿ, ಈ ಕಾರ್ಯಕ್ರಮವು ಶಿಕ್ಷಕರೆಲ್ಲರೂ ಒಂದೆಡೆ ಸೇರಲು ಮತ್ತು ಹಳೆಯ ವಿದ್ಯಾರ್ಥಿಗಳ ಸಾಧನೆಯನ್ನು ಕಂಡು ಸಂಭ್ರಮಿಸಲು ವೇದಿಕೆಯಾಯಿತು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

**ಗುರುಗಳಿಗೆ ಭಕ್ತಿಪೂರ್ವಕ ಸನ್ಮಾನ**

ಕಾರ್ಯಕ್ರಮದಲ್ಲಿ ಹಿರಿಯ ಶಿಕ್ಷಕರಾದ: ಹನುಮಂತ ನಾಯಕ, ಹೊಂಗನೂರು ನಂಜಯ್ಯ, ಉತ್ತುವಳ್ಳಿ ರಂಗಸ್ವಾಮಿ, ರಾಮಸಮುದ್ರದ ವೆಂಕಟೇಶ್. ಟೈಟಸ್, ಮಲ್ಲಿಕಾರ್ಜುನ್, ಜಗದೀಶ್ ಕುಮಾರ್. ಶಿಕ್ಷಕಿಯರಾದ ರಾಜೇಶ್ವರಿ, ನಾಗರತ್ನ ಪಾರ್ವತಿ, ಪುಟ್ಟನಂಜಮ್ಮ, ನಾಗರತ್ನಮ್ಮ, ನಳಿನಿ ಸೇರಿದಂತೆ ಒಟ್ಟು 17 ಶಿಕ್ಷಕರನ್ನು ವಿದ್ಯಾರ್ಥಿಗಳು ಭಕ್ತಿಪೂರ್ವಕವಾಗಿ ಸನ್ಮಾನಿಸಿದರು.

ಈ ಸಮಾರಂಭದಲ್ಲಿ ಹಳೆಯ ವಿದ್ಯಾರ್ಥಿಗಳಾದ ಲತಾ, ಬಸವರಾಜು, ವಿಶಾಲಾಕ್ಷಿ, ಲಕ್ಷ್ಮಮ್ಮ, ಗಿರಿಗೌಡ, ಮಹೇಶ್, ಇಮ್ರಾನ್ ಪಾಷಾ, ಜಹೀರ್, ಸುಜಾತ, ಮಮತಾ, ಭಾನುಮತಿ, ರಂಗಪ್ಪ, ಸುರೇಶ, ರಾಘವೇಂದ್ರ ಸೇರಿದಂತೆ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಶಾಲಾ ದಿನಗಳ ನೆನಪುಗಳನ್ನು ಹಂಚಿಕೊಂಡರು.



## ಕೃಷ್ಣ ವಂದನ

ಸ್ನೇಹಾ ಆನಂದ್



### ಹೇ ಕೃಷ್ಣಾ!

ಕೃಷ್ಣ ನಿನ್ನ ಸೇವೆಯಲಿ ಕಷ್ಟವನು ಕಳೆಯುವೆ,
ಕೃಷ್ಣ ನಿನ್ನ ಭಕ್ತಿಯಲಿ ಭವಸಾಗರವ ದಾಟುವೆ!

ಕರಿರಾಜ ಕರೆಯಲು ತ್ವರಿತದಂದಿಲಿ ಬಂದೆ,
ದ್ರೌಪದಿಯು ಮೊರೆಯಿಡಲು ಭರದಿಂದಲಿ ನೀ ಪೋದೆ,
ಪುಟ್ಟ ಭಕ್ತನ ಬೇಡಿಕೆಯ ಮೆಚ್ಚಿ ಕಂಬದೊಳು ಕಾಣಿಸಿದೆ,
ಬೆಟ್ಟವನು ಕಿರುಬೆರಳಲಿ ಹೊತ್ತ ಮಾಯಾವಿ ನೀ ಎನಿಸಿದೆ!

ಪದುಮಾಕ್ಷ ನೀನೆನಲು ಪುಣ್ಯವ ಗಳಿಸಿದೆನು,
ಪಾಹಿ ಪಾಹಿ ಎನಲು ಪಾಪಗಳ ಪರಿಹರಿಸಿದೆ ನೀನು,
ದೇವಕಿ ನಂದನ ನೀನೆಂದರೆ ದಯವ ನೀನಿಟ್ಟೆ,
ಯಶೋದೆಯ ಕಂದನೆಂದರೆ ಕರುಣೆಯ ಕೊಟ್ಟೆ!

ವಿಷದ ಹಾಲನು ಉಂಡು ಶ್ಯಾಮ ನೀನೆಂದನಿಸಿದೆ,
ಮಾವ ಕಂಸನ ಸಂಹರಿಸಿ ಮಾಧವನೆನಿಸಿದೆ,
ಮಹಾಭಾರತ ಯುದ್ಧಕೆ ಸಾರಥಿಯು ನೀನಾದೆ,
ಹೇಮಗೀರೀಶನೇ ನಿನ್ನ ಎಷ್ಟು ಹೊಗಳಿದರೂ ದಣಿಯದಾದೆ

# ದುಬಾರೆ ತೂಗು ಸೇತುವೆಗೆ ಶಂಕುಸ್ಥಾಪನೆ

## ವನ್ಯಜೀವಿ ಸಂಘರ್ಷ ತಡೆಗೆ ಮಾಸ್ಟರ್ ಪ್ಲಾನ್ । ಸಚಿವ ಈಶ್ವರ ಖಂಡ್ರೆ ಮಾಹಿತಿ

ಮಡಿಕೇರಿ: ಕೊಡಗು ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣ ಹಾಗೂ ಆನೆ ಶಿಬಿರ ಹೊಂದಿರುವ ದುಬಾರೆಯಲ್ಲಿ ದಶಕಗಳ ಕಾಲದ ಬೇಡಿಕೆಯಾಗಿದ್ದ ನೂತನ ತೂಗು ಸೇತುವೆ ನಿರ್ಮಾಣಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಅವರು ಬುಧವಾರ ಅಧಿಕೃತವಾಗಿ ಶಂಕುಸ್ಥಾಪನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ವನ್ಯಜೀವಿಗಳ ಸಂರಕ್ಷಣೆಯ ಜೊತೆಗೆ ಮಾನವ ಮತ್ತು ವನ್ಯಜೀವಿಗಳ ನಡುವಿನ ಸಂಘರ್ಷವನ್ನು ತಡೆಗಟ್ಟಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು. ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಾಣವಾಗಲಿರುವ ಈ ಸೇತುವೆಯು ಸ್ಥಳೀಯ ಬುಡಕಟ್ಟು ಕುಟುಂಬಗಳು ಮತ್ತು ಪ್ರವಾಸಿಗರಿಗೆ ವರದಾನವಾಗಲಿದೆ.

**ಸ್ಥಳೀಯರ ಮತ್ತು ಪ್ರವಾಸಿಗರ ದಶಕಗಳ ಬೇಡಿಕೆಗೆ ಕೊನೆಗೂ ಚಾಲನೆ**

ದುಬಾರೆಯ ಕಾವೇರಿ ಹೊಳೆಯಲ್ಲಿ ಸುಮಾರು 7.3 ಕೋಟಿ ರೂಪಾಯಿ ವೆಚ್ಚದಲ್ಲಿ ಈ ಗುಣಮಟ್ಟದ ತೂಗು ಸೇತುವೆಯನ್ನು ನಿರ್ಮಿಸಲಾಗುತ್ತಿದೆ. ಇದು ಕೇವಲ ಪ್ರವಾಸಿಗರಿಗಷ್ಟೇ ಅಲ್ಲದೆ, ದುಬಾರೆ ಹಾಡಿಯಲ್ಲಿ ವಾಸಿಸುತ್ತಿರುವ ಸುಮಾರು 150ಕ್ಕೂ ಹೆಚ್ಚು ಕುಟುಂಬಗಳ ದೈನಂದಿನ ಜೀವನಕ್ಕೆ ಅತ್ಯಗತ್ಯವಾಗಿದೆ. ಸದ್ಯಕ್ಕೆ ಇಲ್ಲಿನ ನಿವಾಸಿಗಳು ತುರ್ತು ಸಂದರ್ಭಗಳಲ್ಲಿ ಅಥವಾ ವೈದ್ಯಕೀಯ ಚಿಕಿತ್ಸೆಗಾಗಿ ನಗರಕ್ಕೆ ಬರಬೇಕಾದರೆ ಜೀವದ ಹಂಗು ತೊರೆದು ಹೊಳೆ ದಾಟಬೇಕಿದೆ ಅಥವಾ ಮೀಸಲು ಅರಣ್ಯದ ಒಳಗೆ 10 ಕಿಲೋಮೀಟರ್‌ಗಳಷ್ಟು ದೀರ್ಘ ಪ್ರಯಾಣ ಮಾಡಬೇಕಿದೆ. ಮಳೆಗಾಲದಲ್ಲಿ ಈ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುತ್ತಿದ್ದು, ಈ ತೂಗು ಸೇತುವೆ ನಿರ್ಮಾಣದಿಂದ ಈ ಎಲ್ಲಾ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಿಗಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

**ಪರಿಸರ ಸಂರಕ್ಷಣೆ ಮತ್ತು ಜಾಗತಿಕ ತಾಪಮಾನದ ಸವಾಲು**

ಕೊಡಗು ಜಿಲ್ಲೆಯು ಜಗತ್ತಿನ ಪ್ರಮುಖ ಜೀವವೈವಿಧ್ಯತೆಯ ತಾಣವಾಗಿದ್ದು, ಪಶ್ಚಿಮಘಟ್ಟದ ರಕ್ಷಣೆ ನಮ್ಮೆಲ್ಲರ ಹೊಣೆ ಎಂದು ಈಶ್ವರ ಖಂಡ್ರೆ ಅವರು ಹೇಳಿದರು. ಇತ್ತೀಚಿನ ವರ್ಷಗಳಲ್ಲಿ ಬೆಂಗಳೂರಿನಂತಹ ನಗರಗಳಲ್ಲಿ ತಾಪಮಾನ ಏರಿಕೆಯಾಗುತ್ತಿರುವುದು ಅರಣ್ಯ ನಾಶದ ನೇರ ಪರಿಣಾಮವಾಗಿದೆ. ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಅಪಾಯವನ್ನು ನಾವು ಎದುರಿಸುತ್ತಿದ್ದೇವೆ. ಪರಿಸರ ಸಮತೋಲನವನ್ನು ಕಾಪಾಡುವಲ್ಲಿ ವನ್ಯಜೀವಿಗಳ ಪಾತ್ರ ಬಹಳ ದೊಡ್ಡದಿದೆ. ಮಾಜಿ ಪ್ರಧಾನಿ ಇಂದಿರಾಗಾಂಧಿಯವರು ಜಾರಿಗೆ ತಂದ ವನ್ಯಜೀವಿ ಸಂರಕ್ಷಣಾ ಕಾಯಿದೆಗಳಿಂದಾಗಿ ಇಂದು ಅಲ್ಪಸ್ವಲ್ಪ ಕಾಡು ಉಳಿದಿದೆ ಎಂದು ಸ್ಮರಿಸಿದ ಸಚಿವರು, ಅರಣ್ಯ ಅಧಿಕಾರಿಗಳು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ ಅವರಿಗೆ ಅರಣ್ಯ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಬೇಕು ಎಂದು ಕಿವಿಮಾತು ಹೇಳಿದರು.



### ಆನೆ–ಮಾನವ ಸಂಘರ್ಷ ನಿಯಂತ್ರಣಕ್ಕೆ ವೈಜ್ಞಾನಿಕ ಚಿಂತನೆ

ವನ್ಯಜೀವಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದು ಅರಣ್ಯ ಇಲಾಖೆಗೆ ಹೊಸ ಸವಾಲನ್ನು ಒಡ್ಡಿದೆ. ಈ ಬಗ್ಗೆ ಮಾತನಾಡಿದ ಸಚಿವರು, ಮಾನವ ಜೀವ ಮತ್ತು ಬೆಳೆ ಹಾನಿ ತಪ್ಪಿಸಲು ಆಯ್ದ ಪ್ರದೇಶಗಳಲ್ಲಿ ವನ್ಯಜೀವಿಗಳ ಸಂತಾನ ನಿಯಂತ್ರಣ ಮಾಡುವ ಬಗ್ಗೆ ತಜ್ಞರಿಂದ ಸಲಹೆಗಳು ಬಂದಿವೆ ಎಂದರು. ಈ ಕುರಿತು ಸಾರ್ವಜನಿಕ ವಲಯದಲ್ಲಿ ಮತ್ತು ತಜ್ಞರ ಮಟ್ಟದಲ್ಲಿ ಗಂಭೀರ ಚರ್ಚೆ ನಡೆಯುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು. ಆನೆ–ಮಾನವ ಸಂಘರ್ಷ ನಿಯಂತ್ರಿಸಲು ಈಗಾಗಲೇ ತಜ್ಞರ ಸಮಿತಿ ರಚಿಸಲಾಗಿದ್ದು, ಅವರ ವರದಿಯ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು. ರೈಲ್ವೆ ಬ್ಯಾರಿಕೇಡ್ ಮತ್ತು ಆನೆ ಕಂದಕ ನಿರ್ಮಾಣಕ್ಕೆ ಅನುದಾನದ ಕೊರತೆಯಿಲ್ಲ ಎಂದು ಸ್ಪಷ್ಟಪಡಿಸಿದ ಸಚಿವರು, ಕಾಡಂಚಿನ ಜನರು ವನ್ಯಜೀವಿಗಳೊಂದಿಗೆ ಸಹಬಾಳ್ವೆ ನಡೆಸಬೇಕೆಂದು ಕರೆ ನೀಡಿದರು.

### ಇಲಾಖಾ ಬಲವರ್ಧನೆ, ಸೌಲಭ್ಯ ವಿತರಣೆ

ಇದೇ ಕಾರ್ಯಕ್ರಮದಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಗಳ ಅನುಕೂಲಕ್ಕಾಗಿ ಕುಶಾಲನಗರದಲ್ಲಿ 90 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ವಸತಿ ಗೃಹಗಳನ್ನು ಉದ್ಘಾಟಿಸಲಾಯಿತು. ಅಲ್ಲದೆ, ಕೊಡಗು ಫೌಂಡೇಶನ್ ಯೋಜನೆಯಡಿ ಆನೆಗಳ ಸಾಗಣೆಗೆ ಬಳಸುವ 29 ಲಕ್ಷ ಮೌಲ್ಯದ ಹೊಸ ಲಾರಿ ಹಾಗೂ ಸಂಘರ್ಷ ನಿಯಂತ್ರಣಕ್ಕಾಗಿ 37.20 ಲಕ್ಷ ರೂಪಾಯಿ ವೆಚ್ಚದ ನಾಲ್ಕು ಬೊಲೆರೊ ಕ್ಯಾಂಪರ್ ವಾಹನಗಳಿಗೆ ಸಚಿವರು ಹಸಿರು ನಿಶಾನೆ ತೋರಿದರು. ಜನಸಂಪರ್ಕ ಕಾರ್ಯಕ್ರಮದ ಅಂಗವಾಗಿ ಕಾಡಂಚಿನ ಗ್ರಾಮಗಳ ನಿವಾಸಿಗಳಿಗೆ ಜೇನು ಪೆಟ್ಟಿಗೆ, ಮಹಿಳೆಯರಿಗೆ ಹೊಲಿಗೆ ಯಂತ್ರ ಹಾಗೂ ಸರ್ಕಾರಿ ಶಾಲೆಗಳಿಗೆ ಇಂಟರ್ ಆಕ್ಟಿವ್ ಪ್ಯಾನಲ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಶಾಸಕ ಡಾ. ಮಂತರ್ ಗೌಡ, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮೀನಾಕ್ಷಿ ನೇಗಿ ಹಾಗೂ ವಿವಿಧ ಮಠಾಧೀಶರು ಉಪಸ್ಥಿತರಿದ್ದರು. ಶಾಸಕ ಮಂತರ್ ಗೌಡ ಅವರು ಮಾತನಾಡಿ, ಬೆಳೆ ಹಾನಿಗೆ ಶೀಘ್ರ ಪರಿಹಾರ ನೀಡುವಂತೆ ಮತ್ತು ತೋಟಗಳಲ್ಲಿ ಬೀಡುಬಿಟ್ಟಿರುವ ಆನೆಗಳನ್ನು ಸ್ಥಳಾಂತರಿಸಲು ಕ್ರಮ ಕೈಗೊಳ್ಳುವಂತೆ ಸಚಿವರಿಗೆ ಮನವಿ ಮಾಡಿದರು.



## ನಿಮಾನ್ಸ್ ಸ್ಥಳಾಂತರಕ್ಕೆ ಸಿಎಂಗೆ ರೈತರ ಮನವಿ



ಮೈಸೂರು: ತಾಲ್ಲೂಕಿನ ಗುಡುಮಾದನಹಳ್ಳಿಯಲ್ಲಿ ವಸ್ತಿ ಭೂಮಿಯಲ್ಲಿ ನಿಮಾನ್ಸ್ ಕಟ್ಟಡವನ್ನು ಕಟ್ಟುವುದು ಬೇಡ ಮತ್ತು ಆ ಭೂಮಿಯನ್ನು ಸುಮಾರು 70 ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ರೈತರಿಗೆ ಅನ್ಯಾಯ ಮಾಡುವುದು ಬೇಡ ಎಂದು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ರೈತರ ಮತ್ತು ಭೂಮಿಯ ತೊಂದರೆಯ ಬಗ್ಗೆ ಮನವರಿಕೆ ಮಾಡಿ ಮನವಿ ಪತ್ರ ಸಲ್ಲಿಸಲಾಯಿತು.

ಮುಖ್ಯಮಂತ್ರಿಗಳು ನಮ್ಮ ಮನವಿಯನ್ನು ಸ್ವೀಕರಿಸಿ ಜಿಲ್ಲಾಧಿಕಾರಿಗಳಿಗೆ ರೈತ ಮುಖಂಡರು ಮತ್ತು ರೈತರು ಬೇರೆ ಸರ್ಕಾರಿ ಜಾಗಗಳಿವೆ ಎಂದು ಹೇಳುತ್ತಿದ್ದಾರೆ ಆ ಜಾಗ ಹುಡುಕಿ ನನಗೆ ವರದಿ ಕೊಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚಿದರು. ಜಿಲ್ಲಾಧಿಕಾರಿಗಳು ರೈತ ಮುಖಂಡರ ಜೊತೆಗೂಡಿ ಸರ್ವೆ ಮಾಡುತ್ತೇನೆಂದು ಒಪ್ಪಿಕೊಂಡರು. ಜಲಂದೋಲನ ಮಹಾ ಮೈತ್ರಿಯ ಸಂಚಾಲಕರು ಉಗ್ರ ನರಸಿಂಹೇ ಗೌಡ, ಸವಿತಾಮಲ್ಲೇಶ್, ಹೊಸಕೋಟೆ ಬಸವರಾಜು,ಪಿ ಮರಂಕಯ್ಯ ಮಂಡಕಳ್ಳಿಮಹೇಶ, ಪ್ರೇಮ್ ರಾಜ್, ಮಹೇಶ್, ರಘು, ಶ್ರೀಕಂಠ ಅಣ್ಣೇಗೌಡ, ಪ್ರಕಾಶ್, ಗೀತಾ, ಮಹಾದೇವಿ, ಲಕ್ಷ್ಮಮ್ಮ ಸಾಕಮ್ಮ ಅನೇಕರು ಭಾಗವಹಿಸಿದ್ದರು.



## ಕರ್ನಾಟಕ ಬಿಜೆಪಿ ಸಂಭ್ರಮಾಚರಣೆ ಯಾಕೇ?: ಮಹೇಶ್

ಮೈಸೂರು: ಕರ್ನಾಟಕದ ಎರಡು ಕ್ಷೇತ್ರಗಳಿಗೆ ನಡೆದ ಉಪ ಚುನಾವಣೆಯಲ್ಲಿ ಸೋಲು ಅನುಭವಿಸಿದರೂ ಕರ್ನಾಟಕದ ಬಿಜೆಪಿ



ನಾಯಕರು ಸಂಭ್ರಮಾಚರಣೆ ಮಾಡಿ ಅಪಹಾಸ್ಯಕ್ಕೆ ಗುರಿಯಾಗಿದ್ದಾರೆ ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರ ಕೆ.ಮಹೇಶ್ ಹೇಳಿದ್ದಾರೆ.

ಪಂಚರಾಜ್ಯಗಳಲ್ಲಿ 3 ರಾಜ್ಯಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿದೆ. 2028ರಲ್ಲಿ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎನ್ನುತ್ತಿರುವುದು ಹಗಲು ಕನಸು ಕಾಣುತ್ತಿರುವಂತಿದೆ. ಕರ್ನಾಟಕದ ಎರಡು ಕ್ಷೇತ್ರದಲ್ಲೂ ಸೋತರೂ ಸಂಭ್ರಮಾಚರಣೆ ಮಾಡುತ್ತಿರುವುದು ನಾಚಿಕೆಗೇಡು. ಅಲ್ಲದೇ ಕಾಂಗ್ರೆಸ್ ನಾಯಕರ ಟೀಕೆಯೂ ಖಂಡನೀಯ. ಪಶ್ಚಿಮ ಬಂಗಾಳದ ಬಿಜೆಪಿ ಗೆಲುವಿಗೆ ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ ಗಂಭೀರ ಆರೋಪಗಳನ್ನು ಮಾಡುತ್ತಿದ್ದಾರೆ. ನಾನಾ ತಂತ್ರಗಳನ್ನು ಬಳಸಿ ಗೆಲುವು ಸಾಧಿಸಲಾಗಿದೆ. ಇದು ಪ್ರಜಾಪ್ರಭುತ್ವದ ಗೆಲುವಲ್ಲ, ಪ್ರಜಾಪ್ರಭುತ್ವ ಸೋಲು. ತಮಿಳುನಾಡು, ಕೇರಳದಲ್ಲಿ ಬಿಜೆಪಿ ಯಾವ ಸ್ಥಾನದಲ್ಲಿದೆ? ಬಿಜೆಪಿ ನಾಯಕರು ಆತ್ಮವಲೋಕನ ಮಾಡಿಕೊಳ್ಳಬೇಕು ಎಂದು ನುಡಿದಿದ್ದಾರೆ.

ಚುನಾವಣೆಯಲ್ಲಿ ಸೋಲು–ಗೆಲುವು ಸಹಜ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ತೀರ್ಪನ್ನು ಸಮನಾಗಿ ಸ್ವೀಕರಿಸಬೇಕು. ಮತ–ಧರ್ಮಗಳ ಹೆಸರಿನಲ್ಲಿ ಸಮಾಜವನ್ನು ವಿಘಟಿಸಿ ಅಧಿಕಾರವನ್ನು ಪಡೆಯುವುದು ದೇಶಕ್ಕೆ ಮಾರಕವಾದದ್ದು. ಪಂಚ ರಾಜ್ಯಗಳ ಚುನಾವಣೆಯಲ್ಲಿ ಎಲ್ಲ ಪಕ್ಷಗಳಿಗೂ ಜನರು ತಕ್ಕ ಉತ್ತರ ನೀಡಿದ್ದಾರೆ ಎಂಬುದನ್ನು ಅರಿಯಬೇಕು ಎಂದು ಹೇಳಿದ್ದಾರೆ.

# ಮೇ9ರ ಸಂಜೆ 5ಕ್ಕೆ ಸಿತಾರ್ ಸಂಭ್ರಮ




ಮೈಸೂರು: ಕುವೆಂಪುನಗರ ಕಲಾ ಸಂವಹನ ಟ್ರಸ್ಟ್ ವತಿಯಿಂದ ಮೇ 9 ರ ಸಂಜೆ 5ಕ್ಕೆ ನಗರದ ಕಲಾ ಮಂದಿರದಲ್ಲಿ ಮೈಸೂರು ಸಿತಾರ್ ಸಂಭ್ರಮ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಟ್ರಸ್ಟ್ನ ಪದಾಧಿಕಾರಿ ಅರ್ಚನಾ ನಾಯಕ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂತಾರಾಷ್ಟ್ರೀಯ ಖ್ಯಾತಿಯ ಉಸ್ತಾದ್ ಡಾ. ಮೊಹಸಿನ್ ಖಾನ್ ಅವರು ನಗರದಲ್ಲಿ ಸಿತಾರ್ ಕಲಿಕೆ ತರಬೇತಿ ಆರಂಭಿಸಿ ಒಂದು ವರ್ಷ ತುಂಬಿದ ನೆನಪಿನಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಸಿಎಂ ಸಿದ್ದರಾಮಯ್ಯ ಉದ್ಘಾಟಿಸುವರು, ಸಚಿವ ಡಾ.ಎಚ್.ಸಿ. ಮಹದೇವಪ್ಪ ಅಧ್ಯಕ್ಷತೆ ವಹಿಸುವರು, ಸ್ವಾಮಿ ಕೃತಾತ್ಮಾನಂದ ಸಾನ್ನಿಧ್ಯ ವಹಿಸುವರು, ಎಚ್.ಆರ್. ಲೀಲಾವತಿ, ಡಾ.ಎಂ. ಜಗನ್ನಾಥ ಶೆಣೈ ಇನ್ನಿತರರು ಉಪಸ್ಥಿತರಿರುವರೆಂದರು.

ನಂತರ ಪಂಡಿತ್ ವೆಂಕಟೇಶ್‌ಕುಮಾರ್ ಗಾಯನ, ಸಿತಾರ್ ಸಮೂಹ ವಾದನವಾದ ಸಿತಾರ್ ಸಿಂಚನ, ಉಸ್ತಾದ್ ಮೊಹಸಿನ್ ಖಾನ್‌ರಿಂದ ಸಿತಾರ್ ವಾದನ, ಸಾಥ್ ಸಂಗೀತ್ ಕಾರ್ಯಕ್ರಮ ಜರುಗಲಿವೆ ಎಂದು ಮಾಹಿತಿ ನೀಡಿದರು. ಟ್ರಸ್ಟ್ ಕಾರ್ಯದರ್ಶಿ ಉಸ್ತಾದ್ ಡಾ. ಮೊಹಸಿನ್ ಖಾನ್, ಡಾ. ಶಭಾನ ಮೈಸೂರು, ಡಾ.ಸಿ.ಎಸ್. ಅರುಣ್ ಇದ್ದರು.

# ವಚನ ಗಾಯನ ಕಾರ್ಯಕ್ರಮ

ಚಾಮರಾಜನಗರ, ಕೆಸ್ತೂರಿನ ಶ್ರೀ ಬಸವೇಶ್ವರ ಸಾಂಸ್ಕೃತಿಕ ಕಲಾ ಸಂಘದಿಂದ ಬಸವ ಜಯಂತಿ ಅಂಗವಾಗಿ ಕೊಳ್ಳೇಗಾಲ ತಾಲೂಕಿನ ಚಿಲಕವಾಡಿ ಬೆಟ್ಟದಲ್ಲಿರುವ ಶ್ರೀ ಗುರುರಾಮಲಿಂಗೇಶ್ವರ ಮಠದಲ್ಲಿ ವಚನ ಗಾಯನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಶ್ರೀಮಠದ ಅಧ್ಯಕ್ಷರಾದ ಶ್ರೀ ಇಮ್ಮಡಿ ಗುರುಲಿಂಗಸ್ವಾಮೀಜಿಗಳ ನೇತೃತ್ವದಲ್ಲಿ ನಡೆದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶ್ರೀಗಳು, ಬಸವಾದಿ ಶರಣ ವಚನಾಮೃತಗಳು ಬದುಕಿಗೆ ದಾರಿ ದೀಪವಾಗಿದೆ. 12ನೇ ಶತಮಾನದಲ್ಲಿ ಲಿಂಗಾಯತ ಧರ್ಮ ಸ್ಥಾಪನೆ ಮಾಡಿದ ಬಸವಣ್ಣ, ವಚನಗಳ ಮೂಲಕ ಧರ್ಮ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದರು. ಬಸವಾಧಿ ಶರಣರು ಸ್ವರಚಿತ ವಚನಗಳು ಇಂದಿಗೂ ಸಹ ಹೆಚ್ಚು ಪ್ರಸ್ತುತತೆಯನ್ನು ಪಡೆದುಕೊಂಡಿವೆ. ಶರಣರ ಅನುಭಾವದ ನುಡಿಗಳೇ ವಚನಗಳಾಗಿವೆ. ಇಂಥ ವಚನ ಗಾಯನವನ್ನು ಕೆಸ್ತೂರಿನ ಶ್ರೀ ಬಸವೇಶ್ವರ ಸಾಂಸ್ಕೃತಿಕ ಕಲಾ ಸಂಘದವರು ಬಹಳ



ಯಶಸ್ವಿಯಾಗಿ ನಡೆಸಿಕೊಟ್ಟಿದ್ದಾರೆ. ಇಂಥ ಕಾರ್ಯಕ್ರಮಗಳು ಗ್ರಾಮಾಂತರ ಪ್ರದೇಶಗಳಲ್ಲಿ ಹೆಚ್ಚು ಹೆಚ್ಚು ನಡೆಯಬೇಕು. ವಚನಗಳ ಬಗ್ಗೆ ಯುವ ಪೀಳಿಗೆಗೆ ಅರಿವು ಮೂಡಿಸುವ ಕೆಲಸವಾಗಬೇಕು. ಈ ಕಾರ್ಯದಲ್ಲಿ ಸಂಘವು ಯಶಸ್ವಿಯಾಗಲಿ ಎಂದು ಶುಭ ಕೋರಿದರು.

ಕಲಾವಿದರಾದ ಎಂ. ಪರಶಿವಪ್ಪ, ಮಹದೇವಸ್ವಾಮಿ, ಬಸವಣ್ಣ, ಕೆ. ಶಾಂತಮೂರ್ತಿ, ಹಾರ್ಮೋನಿಯಂ ಮಹದೇವಸ್ವಾಮಿ, ಕೊಮಾರನಪುರ, ಕ್ಯಾಸಿಯೋ ಮಲ್ಲಿಕಾರ್ಜುನ ಬೀರಾಹಳ್ಳಿ, ಕೆ.ಎಸ್. ಪುಟ್ಟಣ್ಣ ಕೆಸ್ತೂರು, ಘಟಂ ಕೆ.ಎಸ್.ನಾಗರಾಜು, ಕಾರ್ಯಕ್ರಮ ನಡೆಸಿಕೊಟ್ಟರು. ಗ್ರಾಮಸ್ಥರು ಹಾಗೂ ಶ್ರೀ ಮಠದ ಭಕ್ತರು ಉಪಸ್ಥಿತರಿದ್ದರು.

**ಪಂಚ ರಾಜ್ಯಗಳ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಗೆಲುವು ಹಿನ್ನೆಲೆ**

# ಚಾಮರಾಜನಗರ ಜಿಲ್ಲೆಯಲ್ಲಿ ಬಿಜೆಪಿ ಕಾರ್ಯಕರ್ತರ ವಿಜಯೋತ್ಸವ

ಚಾಮರಾಜನಗರ, ಪಂಚ ರಾಜ್ಯಗಳ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿ ಅಧಿಕಾರಕ್ಕೇರುವುತ್ತಿರುವ ಹಿನ್ನೆಲೆಯಲ್ಲಿ ?ಲ ನಗರದಲ್ಲಿ ಬಿಜೆಪಿ ವತಿಯಿಂದ ವಿಜಯೋತ್ಸವ ಆಚರಣೆ ಮಾಡಿ, ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ನಗರದ ಶ್ರೀಚಾಮರಾಜೇಶ್ವರ ಉದ್ಯಾನವನ ಮುಂಭಾಗದಲ್ಲಿ ಜಮಾಯಿಸಿದರು. ಅಲ್ಲಿಂದ ಮೆರವಣಿಗೆಯಲ್ಲಿ ತೆರಳಿ ಭುವನೇಶ್ವರಿ ವೃತ್ತಕ್ಕೆ ತಲುಪಿದರು. ದಾರಿಯುತ್ತಕ್ಕೂ ಬಿಜೆಪಿ ಬಾವುಟಹಿಡಿದು, ಬಿಜೆಪಿ, ಪ್ರಧಾನಿ ನರೇಂದ್ರ ಮೋದಿ, ಅಮಿತಾ ಪರವಾದ ಘೋಷಣೆಗಳನ್ನು ಕೂಗಿದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ವೃಷಬೇಂದ್ರಪ್ಪ ಮಾತನಾಡಿ, ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸುವ ಮೂಲಕ ಬಿಜೆಪಿ ಅಧಿಕಾರ ಹಿಡಿದಿರುವುದು ತುಂಬಾ ಸಂತಸವಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನಪರ ಆಡಳಿತ ಒಪ್ಪಿರುವ ಪಶ್ಚಿಮ




ಬಂಗಾಳ, ಅಸ್ಸಾಂ, ಪುದುಚೇರಿ ರಾಜ್ಯಗಳಲ್ಲಿ ಜನರು ಬಿಜೆಪಿಗೆ ಮತ ಹಾಕುವ ಮೂಲಕ ಅಧಿಕಾರಕ್ಕೆ ತಂದಿದ್ದಾರೆ. ಈ ಮೂರು ರಾಜ್ಯ ಫಲಿತಾಂಶ ಕರ್ನಾಟಕ ರಾಜ್ಯದ ಮುಂದಿನ ಚುನಾವಣೆಯ ದಿಕ್ಸೂಚಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ಯುವ ಮೋರ್ಚಾದ ಅಧ್ಯಕ್ಷ ಸೂರ್ಯಕುಮಾರ್ ಮಾತನಾಡಿ, ದೇಶದ ಜನ ಹಿಂದುತ್ವ ಕಡೆ ಸಾಗುತ್ತಿದ್ದಾರೆ ಎನ್ನುವುದಕ್ಕೆ ಪಂಚ ರಾಜ್ಯಗಳ ಚುನಾವಣೆ ಫಲಿತಾಂಶ ಸಾಕ್ಷಿಯಾಗಿದೆ. ಪಶ್ಚಿಮ ಬಂಗಾಳದಲ್ಲಿ ಮಮತ ಬ್ಯಾನರ್ಜಿ ವಿರುದ್ದ ಬಿಜೆಪಿಗೆ ದೊಡ್ಡ ಗೆಲುವು ಬಂದಿದೆ. ಅದೇ ಅಸ್ಸಾಂ, ಪುದುಚೇರಿಯಲ್ಲಿ ಬಿಜೆಪಿ ಅಧಿಕಾರ ಹಿಡಿದಿದೆ. ತಮಿಳುನಾಡಿನಲ್ಲಿ ಹಿಂದುತ್ವದ ವಿರುದ್ದ ಇದ್ದ ಡಿಎಂಕೆಗೆ ಸೋಲಿನ ರುಚಿ ತೋರಿಸಿದ್ದಾರೆ. ದೇಶದ ಜನರು ಸುಭದ್ರ ಆಡಳಿತ, ರಕ್ಷಣೆಗೆ ಹೆಚ್ಚು ಒತ್ತು ನೀಡಿದ್ದಾರೆ ಎಂದರು.

ಚುಡಾ ಮಾಜಿ ಅಧ್ಯಕ್ಷ ಎಸ್. ಬಾಲಸುಬ್ರಮಣ್ಯ ಮಾತನಾಡಿ, ದೇಶದ ಸುಭದ್ರ ಹಾಗೂ ಹಿಂದು ರಾಷ್ಟ್ರವನ್ನಾಗಿಸುವ ಬಿಜೆಪಿ ಆಶಯಕ್ಕೆ ತಕ್ಕಂತೆ ಪಂಚ ರಾಜ್ಯ ಚುನಾವಣೆ ಫಲಿತಾಂಶ ಬಂದಿದೆ. ಪಶ್ಚಿಮ ಬಂಗಾಳದ ಮತದಾರರು 15 ವರ್ಷಗಳ ಮಮತಾ ಅವರ ಆಡಳಿತವನ್ನ ಕೊನೆಗಾಣ ಸಿದ್ದಾರೆ. ಹಿಂದು ವಿರೋಧಿ ನಿಲುವು ಹೊಂದಿದ್ದ ಟಿಎಂಸಿಗೆ ಮಣ್ಣು ಮುಕ್ಕಿಸಿದ್ದಾರೆ. ಆದೇ ತಮಿಳುನಾಡು ಡಿಎಂಕೆಗೆ ಅಲ್ಲಿನ ಹಿಂದು ಮತದಾರರು ಸ್ಪಷ್ಟ ಸಂದೇಶ ನೀಡಿದ್ದಾರೆ. ಇನ್ನು ಅಸ್ಸಾಂ, ಪುದುಚೇರಿ ಬಿಜೆಪಿಗೆ ಮತದಾರರು ಜಯ ಎಂದಿದ್ದಾರೆ. ಒಟ್ಟಾರೆ, ದೇಶದ ಜನರು ಹಿಂದುತ್ವದ ಪರವಾಗಿದ್ದಾರೆ ಎಂಬುದು ಸಾಬೀತಾಗಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ನಗರ ಮಂಡಲ ಅಧ್ಯಕ್ಷ ಶಿವರಾಜ್, ಗ್ರಾಮಾಂತರ ಮಂಡಲ ಅಧ್ಯಕ್ಷ ಕಾಡಹಳ್ಳಿ ಕುಮಾರ್, ರಾಜ್ಯ ಕಾರ್ಯಕಾರಿಣಿ ಸದಸ್ಯ ಡಾ.ಎ. ಆರ್.ಬಾಬು, ನೂರೊಂದುಶೆಟ್ಟಿ, ಚೂಡಾ ಮಾಜಿ ಅಧ್ಯಕ್ಷ ಬಾಲಸುಬ್ರಹ್ಮಣ್ಯಂ, ಉಪಾಧ್ಯಕ್ಷ ಶಿವುವಿರಾಟ್, ಸಾಹಿತಿ ಮಂಜುಕೋಡಿಉಗನೆ, ಎಪಿಎಂಸಿ ಮಾಜಿ ಅಧ್ಯಕ್ಷ ಮನೋಜ್ ಪಟೇಲ್, ಯುವಮೋರ್ಚಾದ ಪ್ರಧಾನ ಕಾರ್ಯದರ್ಶಿ ಆನಂದ್ ಭಗೀರಥ, ಬಂಗಾರ ನಾಯಕ, ಶಿವಣ್ಣ, ಮಂಜು, ಕೂಸಣ್ಣ, ಮಹೇಶ್, ಕೇಬಲ್ ರಂಗಸ್ವಾಮಿ, ಶೇಷಪ್ಪಪಾಸ್ವಾನ್, ವಿ.ಶ್ರೀನಿವಾಸ ಪ್ರಸಾದ್, ಸೋಮವಾರಪೇಟೆ ಗುರು, ಪೊ?ಟೋಕೃಷ್ಣ, ಭೋಗಾಪುರ ಕುಮಾರ್, ಕೃಷ್ಣಪ್ಪ, ಪ್ರವೀಣ್ ನಾಯಕ್, ಕೃಷ್ಣಕುಮಾರ್, ಚಂದ್ರಶೇಖರ್, ರಾಮಸಮುದ್ರದ ಪರಶಿವು ಮೊದಲಾದವರು ಹಾಜರಿದ್ದರು.

# ಪ್ರತಿ ವರ್ಷ ಮಾಧ್ಯಮ ಪ್ರಶಸ್ತಿ ನೀಡಲು ಸುತ್ತೂರು ಶ್ರೀಗಳಿಗೆ ಮನವಿ




ಚಾಮರಾಜನಗರ, ಸುತ್ತೂರು ಶ್ರೀಮಠದಿಂದ ನೀಡಲಾಗುವ ಜಗದ್ಗುರು ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿಯನ್ನು ಪ್ರತಿವರ್ಷವೂ ಚಾಮರಾಜನಗರ ಜಿಲ್ಲೆಗೆ ಪ್ರತ್ಯೇಕವಾಗಿ ನೀಡುವಂತೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚಾಮರಾಜನಗರ ಜಿಲ್ಲಾ ಘಟಕದ ವತಿಯಿಂದ ಸುತ್ತೂರು ಶ್ರೀಗಳಾದ ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳಿಗೆ ಮನವಿ ಸಲ್ಲಿಸಲಾಯಿತು.

ನಗರದಲ್ಲಿ ನಡೆದ ಶರಣ ಸಾಹಿತ್ಯ ಕಾರ್ಯಕ್ರಮದಲ್ಲಿ ಸ್ವಾಮೀಜಿಗಳು ಭಾಗವಹಿಸಿದ್ದ ವೇಳೆ, ಸಂಘದ ಪದಾಧಿಕಾರಿಗಳು ಮನವಿ ಪತ್ರವನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪದಾಧಿಕಾರಿಗಳು, ಚಾಮರಾಜನಗರ ಜಿಲ್ಲೆ ಪತ್ರಿಕೋದ್ಯಮ ಕ್ಷೇತ್ರದಲ್ಲಿ ತನ್ನದೇ ಆದ ಗುರುತನ್ನು ಹೊಂದಿದ್ದು, ಅನೇಕ ಹಿರಿಯ ಪತ್ರಕರ್ತರು ಹಲವು ವರ್ಷಗಳಿಂದ ಸಮಾಜಮುಖಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ತಿಳಿಸಿದರು. ಆದ್ದರಿಂದ ಜಿಲ್ಲೆಯ ಪತ್ರಕರ್ತರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷವೂ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಚಾಮರಾಜನಗರ ಜಿಲ್ಲೆಗೆ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಆರ್.ಎನ್. ಸಿದ್ದಲಿಂಗಸ್ವಾಮಿ, ನ್ಯೂಸ್ 18 ಹಿರಿಯ ವರದಿಗಾರ ಎಸ್.ಎಂ. ನಂದೀಶ್, ಪತ್ರಕರ್ತರಾದ ರಾಜು, ಲಿಂಗಪ್ಪ, ಹೊಮ್ಮನಂಜುಂಡನಾಯಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೇ10ರಂದು ಉಚಿತ ಕೃತಕ ಕೈ-ಕಾಲು ಜೋಡಣಾ ಶಿಬಿರ

**ಡಾ.ನಾಗಾರ್ಜುನ್ ಹೇಳಿಕೆ**



ಚಾಮರಾಜನಗರ : ರೋಟರಿ ಸಂಸ್ಥೆ ವತಿಯಿಂದ ಉಚಿತ ಕೃತಕ ಕೈ-ಕಾಲು ಜೋಡಣಾ ಶಿಬಿರವು ಮೇ.10 ರಂದು ನಡೆಯಲಿದೆ ಎಂದು ರೋಟರಿ ಸಂಸ್ಥೆಯ ಜಿಲ್ಲಾ ಮಾಜಿ ಗೌರರ್ ಡಾ.ನಾಗಾರ್ಜುನ್ ತಿಳಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಅಂದು ನಗರದ ಬಿ.ರಾಚಯ್ಯ ಜೋಡಿರಸ್ತೆಯಲ್ಲಿರುವ ರೋಟರಿ ಭವನದಲ್ಲಿ ಬೆಳಿಗ್ಗೆ 9-30 ಕ್ಕೆ ಉಚಿತ ಕೃತಕ ಕೈ-ಕಾಲು ಜೋಡಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಈಗಾಗಲೇ 100 ಮಂದಿ ನೋಂದಾಯಿಸಿಕೊಂಡಿದ್ದಾರೆ. ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಯ ದಿವ್ಯಾಂಗರು ಶಿಬಿರ ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ರೋಟರಿ ಸಂಸ್ಥೆಯು ಅಂತಾರಾಷ್ಟ್ರೀಯ ಸೇವಾ ಸಂಸ್ಥೆಯಾಗಿದ್ದು, ಸಮಾಜಮುಖಿ ಕಾರ್ಯಗಳನ್ನು ನಡೆಸುತ್ತಿದ್ದು, ಜನರಿಗೆ ನೆರವಾಗುವ ಕಾರ್ಯಕ್ರಮ ಮಾಡುತ್ತಾ ಬರಲಾಗಿದೆ. ಅಂಗವಿಕಲ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ವಿಚಾರಿಸಿದಾಗ... ಜಿಲ್ಲೆಯಲ್ಲಿ ಕೈ ಕಾಲು ತೊಂದರೆಯುಳ್ಳ ವಿಕಲಚೇನರು ಇದ್ದಾರೆ ಎಂದು ಮಾಹಿತಿ ನೀಡಿದರು.

ಶಿಬಿರದಲ್ಲಿ ಕೈ-ಕಾಲು ಅಳತೆ ಪಡೆದು ಜೂನ್ ತಿಂಗಳ ಮೊದಲ ವಾರದಲ್ಲಿ ಕೃತಕ ಕೈ-ಕಾಲು ಜೋಡಣೆ ಮಾಡಲಾಗುವುದು ಎಂದರು.

ರೋಟರಿ ಅಧ್ಯಕ್ಷ ಕಾಗಲವಾಡಿ ಚಂದ್ರು ಮಾತನಾಡಿ, ನನ್ನ ಒಂದು ವರ್ಷದ ಅವಧಿಯ 300ನೇ ಕಾರ್ಯಕ್ರಮ ಉಚಿತ ಕೃತಕ ಕೈ-ಕಾಲು ಜೋಡಣಾ ಶಿಬಿರವಾಗಿದೆ. ಜಿಲ್ಲೆಯಲ್ಲಿ ಕೈ-ಕಾಲು ತೊಂದರೆಯುಳ್ಳುವರು ಶಿಬಿರದ ಸದುಪಯೋಗಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು. ರೋಟರಿ ಸಂಸ್ಥಾಪಕ ಸದಸ್ಯ ಜಿ.ಆರ್. ಅಶ್ವಥನಾರಾಯಣ್ ಮಾತನಾಡಿ, ರೋಟರಿ ಸಂಸ್ಥೆಯು ಜಿಲ್ಲೆಯಲ್ಲಿ ಸಾಮಾಜಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ಮಾಡುತ್ತಾ ಬಂದಿದೆ. 10 ಕೃತಕ ಕಾಲು ವೈಯುಕ್ತಿಕವಾಗಿ ನೀಡಲಾಗಿದೆ ಎಂದರು.

ರೋಟರಿ ಸಂಸ್ಥೆ ಸಂಸ್ಥಾಪಕ ಸದಸ್ಯ ಸಿ.ವಿ.ಶ್ರೀನಿವಾಸಶೆಟ್ಟಿ ಮಾತನಾಡಿ, ರೋಟರಿ ಸಂಸ್ಥೆಯು ಪ್ರತಿತಿಂಗಳು ಭಾನುವಾರ ಉಚಿತ ಕಣ್ಣಿನ ತಪಾಸಣಾ ಶಿಬಿರ ಮಾಡಿಕೊಂಡು ಬರಲಾಗಿದ್ದು ಮೇ. 10 ರಂದು ಉಚಿತ ಕೈ-ಕಾಲು ಜೋಡಣಾ ಶಿಬಿರವನ್ನು ಹಮ್ಮಿಕೊಂಡಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ರೋಟರಿ ಮಾಜಿ ಅಧ್ಯಕ್ಷ ಚಂದ್ರಪ್ರಭಜೈನ್, ಸಂಸ್ಥೆಯ ಮುಂದಿನ ಸಾಲಿನ ಅಧ್ಯಕ್ಷ ಅಬ್ದುಲ್ಅಜೀಜ್ ದೀನಾ, ಕಾರ್ಯದರ್ಶಿ ಅಂಕಶೆಟ್ಟಿ ಹಾಜರಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# 1.66 ಕೋಟಿ ರೂ. ಕಾಮಗಾರಿಗೆ ಶಾಸಕ ಗಣೇಶ್ ಪ್ರಸಾದ್ ಚಾಲನೆ



ಚಾಮರಾಜನಗರ: ತಾಲೂಕಿನ ಹರವೆ ಹೋಬಳಿ ವ್ಯಾಪ್ತಿಯ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಅಭಿವೃದ್ಧಿಗೆ ಹೊಸ ಆಯಾಮ ದೊರೆತಿದೆ. ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಬೆಟ್ಟದಪುರ, ಸಾಗಡೆ, ಕೂಟೇಗೌಡನಹುಂಡಿ ಹಾಗೂ ಕೆಂಗಾಕಿ ಗ್ರಾಮಗಳ ಕೃಷಿ ಪಥಗಳ ಸುಧಾರಣೆಗಾಗಿ ಕಾವೇರಿ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರದಿಂದ (ಕಾಡಾ) 1.66 ಕೋಟಿ ರೂ.ಗಳ ಅನುದಾನ ಬಿಡುಗಡೆಯಾಗಿದ್ದು, ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಅವರು ವಿವಿಧ ಕಾಮಗಾರಿಗಳಿಗೆ ಇಂದು ಗುದ್ದಲಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವಿಶೇಷ ಕಾಳಜಿಯಿಂದಾಗಿ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಹರಿದುಬರುತ್ತಿದೆ. ವಿಶೇಷವಾಗಿ ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ ಅವರು ಈ ಭಾಗದ ರೈತರ ಸಮಸ್ಯೆಗಳಿಗೆ ಸ್ಪಂದಿಸಿ 1.66 ಕೋಟಿ ರೂ. ವೆಚ್ಚದ ಯೋಜನೆಗಳಿಗೆ ಮುತುವರ್ಜಿ ವಹಿಸಿದ್ದಾರೆ. ರೈತರ ಅನುಕೂಲಕ್ಕಾಗಿ ಕೈಗೆತ್ತಿಕೊಂಡಿರುವ ಈ ರಸ್ತೆಗಳು ಕೃಷಿ ಉತ್ಪನ್ನಗಳ ಸಾಗಾಟಕ್ಕೆ ಮಹತ್ವದ ಪಾತ್ರ ವಹಿಸಲಿವೆ ಎಂದು ಹರ್ಷ ವ್ಯಕ್ತಪಡಿಸಿದರು.

ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಮಾತನಾಡಿ, ರೈತರ ಮನವಿ ಹಾಗೂ ಶಾಸಕರ ಸೂಚನೆಯ ಮೇರೆಗೆ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಜಂಗಲ್ ಕಟ್ಟಿಂಗ್ ಹಾಗೂ ಒತ್ತುವರಿ ತೆರವುಗೊಳಿಸಿ ರಸ್ತೆಗಳ ಅಭಿವೃದ್ಧಿ ಮಾಡಲಾಗುತ್ತಿದ್ದು, ಗುಣಮಟ್ಟದ ಕೆಲಸ ನಡೆಯಲು ರೈತರು ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು. ಜಿ.ಪಂ. ಮಾಜಿ ಸದಸ್ಯ ಕೆರೆಹಳ್ಳಿ ನವೀನ್ ಮಾತನಾಡಿ, ಕ್ಷೇತ್ರದಲ್ಲಿ ಗ್ಯಾರಂಟಿ ಯೋಜನೆಗಳ ಜಾರಿಯ ನಡುವೆಯೂ ಸಾವಿರಾರು ಕೋಟಿ ರೂಪಾಯಿಗಳ ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ. ಈಗಾಗಲೇ 110 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸಾಕಾರಗೊಂಡಿದ್ದು, ಹರವೆ ಭಾಗದಲ್ಲಿ ಎರಡನೇ ಹಂತದ ಕೆರೆ ತುಂಬಿಸುವ ಯೋಜನೆಯನ್ನು ಶಾಸಕರು ಶೀಘ್ರವೇ ಅನುಷ್ಠಾನಗೊಳಿಸಬೇಕೆಂದು ಮನವಿ ಮಾಡಿದರು.

### ಅನುದಾನ ಹಂಚಿಕೆಯ ವಿವರ ಹೀಗಿದೆ

ಕ್ಷೇತ್ರ ವ್ಯಾಪ್ತಿಯಲ್ಲಿ ಹಂಚಿಕೆಯಾದ ಅನುದಾನದಲ್ಲಿ ಬೆಟ್ಟದಪುರದಿಂದ ಹೊಸಹಳ್ಳಿ ಕಟ್ಟೆಯವರೆಗೆ 54 ಲಕ್ಷ ರೂ. ಹಾಗೂ ಅಲ್ಲಿನ ಸರ್ಕಾರಿ ಶಾಲೆಯಿಂದ ಗುರುಬಸಪ್ಪ ಅವರ ಜಮೀನಿನವರೆಗೆ 26 ಲಕ್ಷ ರೂ. ವೆಚ್ಚ ಮಾಡಲಾಗುತ್ತಿದೆ. ಸಾಗಡೆ ಗ್ರಾಮದ ಬಿಳಿಗಿರಿನಾಯಕರ ಜಮೀನಿನಿಂದ ಚಿಕ್ಕಯ್ಯನ ಕಾಲುವೆಯವರೆಗೆ 24 ಲಕ್ಷ ರೂ., ಕೂಟೇಗೌಡನಹುಂಡಿಯ ಮರಿಗೌಡನ ಜಮೀನಿನಿಂದ ಶಿವೇಗೌಡನ ಜಮೀನಿನವರೆಗೆ 15 ಲಕ್ಷ ರೂ. ಮತ್ತು ಕೆಂಗಾಕಿ ಗ್ರಾಮದ ಎರಡು ರಸ್ತೆಗಳಿಗೆ ತಲಾ 15 ಲಕ್ಷ ಹಾಗೂ 14 ಲಕ್ಷ ರೂ.ಗಳನ್ನು ನಿಗದಿಪಡಿಸಲಾಗಿದೆ. ಇದರೊಂದಿಗೆ ಸಾಗಡೆ ಗ್ರಾಮದ ವಿವಿಧ ಕೃಷಿ ರಸ್ತೆಗಳಿಗೆ ಕ್ರಮವಾಗಿ 10 ಲಕ್ಷ ಹಾಗೂ 8 ಲಕ್ಷ ರೂಪಾಯಿಗಳನ್ನು ವಿನಿಯೋಗಿಸಲಾಗುತ್ತಿದೆ.

### ಗ್ರಾಮಸ್ಥರ ಮತ್ತು ಮುಖಂಡರ ಉಪಸ್ಥಿತಿ

ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ನಾಗರತ್ನ, ರೇಖಾ, ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರಾದ ಶಿವಕುಮಾರ್ ಹಾಗೂ ಮಹೇಶ್ ಭಾಗವಹಿಸಿದ್ದರು. ಅಲ್ಲದೆ ಮುಖಂಡರಾದ ಕಾಡಪ್ಪ, ಸೋಮಶೇಖರ್, ನಾಗೇಂದ್ರ, ಶೋಭಾ ಮಹೇಶ್, ನಂಜುಂಡನಾಯಕ, ಬಂಗಾರನಾಯಕ ಸೇರಿದಂತೆ ಬಸವಶೆಟ್ಟಿ, ಪಟೇಲ್ ಸುರೇಶ್ ಹಾಗೂ ನಟರಾಜು ಮೊದಲಾದ ಪ್ರಮುಖರು ಹಾಜರಿದ್ದು ಅಭಿವೃದ್ಧಿ ಕಾರ್ಯಗಳಿಗೆ ಸಾಕ್ಷಿಯಾದರು.

# ಇಲಾಖೆಗಳಲ್ಲಿ ಪ್ರಗತಿ ಸಾಧಿಸಿ

## ಜವಾಬ್ದಾರಿಯುತವಾಗಿ ಕೆಲಸ ಮಾಡಿ | ಶಾಸಕ ಹೆಚ್.ಟಿ.ಮಂಜು ಸೂಚನೆ



ಕೆ.ಆರ್.ಪೇಟೆ: "ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಕೆಲಸ ಮಾಡಬೇಕು. ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸಿ ಇಲಾಖಾವಾರು ಪ್ರಗತಿ ಸಾಧಿಸಬೇಕು," ಎಂದು ಶಾಸಕ ಹೆಚ್.ಟಿ. ಮಂಜು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪಟ್ಟಣದ ಹೊರವಲಯದ ಚಿಕ್ಕೋನಹಳ್ಳಿ ರೇಷ್ಮೆ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿವಿಧ ಇಲಾಖೆಗಳ (ಕೆ.ಡಿ.ಪಿ) ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

### ಗೈರಾದ ಅಧಿಕಾರಿಗಳಿಗೆ ನೋಟಿಸ್

ಕೆಲವು ಇಲಾಖೆಗಳ ಪ್ರಗತಿ ಕುಂಠಿತವಾಗಿರುವುದಕ್ಕೆ ಅತೃಪ್ತಿ ವ್ಯಕ್ತಪಡಿಸಿದ ಶಾಸಕರು, ಮುಂದಿನ ಸಭೆಯೊಳಗೆ ಶೇ.100 ರಷ್ಟು ಪ್ರಗತಿ ಸಾಧಿಸಬೇಕು ಎಂದು ಗುರಿ ನೀಡಿದರು. ಅಲ್ಲದೆ, ಸಭೆಗೆ ಗೈರಾಗಿ ತಮ್ಮ ಪರವಾಗಿ ಕಿರಿಯ ಅಧಿಕಾರಿಗಳನ್ನು ಕಳುಹಿಸಿದ ಹಿರಿಯ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡುವಂತೆ ತಾಲ್ಲೂಕು ಪಂಚಾಯತ್ ಇಓ ಸುಷ್ಮಾ ಅವರಿಗೆ ಸೂಚಿಸಿದರು.

**ಸಭೆಯಲ್ಲಿ ಉಪಸ್ಥಿತರಿದ್ದವರು:**

ತಹಸೀಲ್ದಾರ್ ಡಾ.ಎಸ್.ಯು. ಅಶೋಕ್, ತಾ.ಪಂ. ಆಡಳಿತಾಧಿಕಾರಿ ಬಾಬಾಸಾಬ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಎ.ಬಿ. ಕುಮಾರ್, ಇಓ ಕೆ. ಸುಷ್ಮಾ, ಯೋಜನಾಧಿಕಾರಿ ಎಂ. ಶ್ರೀನಿ ವಾಸ್, ಕೆ.ಡಿ.ಪಿ ಸದಸ್ಯರಾದ ಬೀರುವಳ್ಳಿ ಆಕಾಶ್, ಇಲ್ಯಾಸ್‌ಪಾಷಾ, ಬೂಕನಕೆರೆ ಮಲ್ಲಿಕಾರ್ಜುನ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಭೆಯ ಪ್ರಮುಖಾಂಶಗಳು

**ಅಕ್ರಮ ಮದ್ಯ ಮಾರಾಟಕ್ಕೆ ಬ್ರೇಕ್**

ತಾಲ್ಲೂಕಿನ ಮೂಡನಹಳ್ಳಿ ಮತ್ತು ದೊಡ್ಡಸೋಮನಹಳ್ಳಿ ಸೇರಿದಂತೆ ವಿವಿಧೆಡೆ ಅಕ್ರಮ ಮದ್ಯ ಮಾರಾಟದಿಂದ ಗ್ರಾಮದ ಶಾಂತಿ ಕೆಡುತ್ತಿದೆ ಎಂದು ಮಹಿಳೆಯರು ದೂರು ನೀಡುತ್ತಿದ್ದಾರೆ. ಅಬಕಾರಿ ಅಧಿಕಾರಿಗಳು ಕೂಡಲೇ ಕಾರ್ಯಪ್ರವೃತ್ತರಾಗಿ ಅಕ್ರಮ ಮಾರಾಟಕ್ಕೆ ಕಡಿವಾಣ ಹಾಕಬೇಕು ಎಂದು ಸೂಚಿಸಿದರು.

**ಆರ್.ಟಿ.ಓ ಕಚೇರಿಯಲ್ಲಿ ಮಧ್ಯವರ್ತಿಗಳ ಹಾವಳಿ**

ನಾಗಮಂಗಲ ಆರ್.ಟಿ.ಓ ಕಚೇರಿಯಲ್ಲಿ ಮಧ್ಯವರ್ತಿಗಳಿಲ್ಲದೆ ಯಾವುದೇ ಕೆಲಸ ಆಗುತ್ತಿಲ್ಲ ಎಂಬ ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಹೊರರಾಜ್ಯದ ವಾಹನಗಳಿಗೆ ಎಫ್.ಸಿ ನೀಡುವಾಗ ವಿಳಂಬ ಮಾಡದೆ, ನೇರವಾಗಿ ಕಚೇರಿಗೆ ಬರುವ ಸಾರ್ವಜನಿಕರ ಕೆಲಸಗಳನ್ನು ಮಾಡಿಕೊಡಬೇಕು ಎಂದು ನಿರ್ದೇಶನ ನೀಡಿದರು.

**ರೈತರ ಒಕ್ಕಲೆಬ್ಬಿಸಿದರೆ ಎಚ್ಚರಿಕೆ**

ಅರಣ್ಯ ಇಲಾಖೆ ಅಧಿಕಾರಿಗಳು ರೈತರ ಭೂಮಿಯನ್ನು ತಮ್ಮದೆಂದು ದಬ್ಬಾಳಿಕೆ ಮಾಡುವುದನ್ನು ಸಹಿಸುವುದಿಲ್ಲ. ಜಂಟಿ ಸರ್ವೆ ಮಾಡದೆ ರೈತರನ್ನು ಒಕ್ಕಲೆಬ್ಬಿಸಲು ಯತ್ನಿಸಿದರೆ ರೈತರ ಪರವಾಗಿ ಹೋರಾಟಕ್ಕಿಳಿಯುವುದಾಗಿ ಎಚ್ಚರಿಸಿದರು. ಕೆರೆಗಳ ಹೂಳೆತ್ತುವ ಕಾರ್ಯಕ್ಕೂ ಅಡ್ಡಿಪಡಿಸಬಾರದೆಂದು ತಾಕೀತು ಮಾಡಿದರು.

**ಜೆಜೆಎಂ ಯೋಜನೆಯಲ್ಲಿ ನಿರ್ಲಕ್ಷ್ಯ**

ಜೆಜೆಎಂ ಕಾಮಗಾರಿ ಪೂರ್ಣಗೊಳ್ಳುವ ಮೊದಲೇ ಗ್ರಾಮ ಪಂಚಾಯಿತಿಗಳು 'ಚಾರ್ಜ್' ತೆಗೆದುಕೊಳ್ಳುತ್ತಿರುವುದು ಗಮನಕ್ಕೆ ಬಂದಿದೆ. ಕೆಲಸ ಅರ್ಧಕ್ಕೆ ನಿಂತು ಜನರಿಗೆ ತೊಂದರೆಯಾದರೆ ಸಂಬಂಧಪಟ್ಟ ಪಿಡಿಓ ಹಾಗೂ ಇಂಜಿನಿಯರ್‌ಗಳನ್ನೇ ಹೊಣೆಗಾರರನ್ನಾಗಿ ಮಾಡಿ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

**ರೈತರಿಗೆ ಪರಿಹಾರ ಕೊಡಿಸಿ**

ಬಣ್ಣೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಜಮೀನು ಕಳೆದುಕೊಂಡ ರೈತರಿಗೆ ಮೆಘಾ ಫುಡ್‌ಪಾರ್ಕ್‌ನಿಂದ ಬರಬೇಕಾದ ಪರಿಹಾರ ಕೊಡಿಸುವಲ್ಲಿ ಕಂದಾಯ ಮತ್ತು ಸರ್ವೆ ಇಲಾಖೆ ಅಧಿಕಾರಿಗಳು ವಿಳಂಬ ಮಾಡುತ್ತಿದ್ದಾರೆ. ಅರ್ಹ ದಾಖಲೆ ಹೊಂದಿರುವ ರೈತರಿಗೆ ಕೂಡಲೇ ಸಹಕರಿಸಿ ನ್ಯಾಯ ಒದಗಿಸಬೇಕು ಎಂದು ತಿಳಿಸಿದರು.

**ಮನ್‌ಮುಲ್ ವಿಸ್ತರಣಾಧಿಕಾರಿಗೆ ವಾರ್ನಿಂಗ್:**

ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧಿಕಾರಿಗಳು ಮನ್‌ಮುಲ್ ನಿರ್ದೇಶಕರ ತಾಳಕ್ಕೆ ತಕ್ಕಂತೆ ಕುಣಿಯಬಾರದು. ಸರ್ಕಾರದ ಸೌಲಭ್ಯಗಳನ್ನು ಪಾರದರ್ಶಕವಾಗಿ ಹಂಚಬೇಕು. ನಿಯಮ ಮೀರಿ ನಡೆದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

# ಅಕ್ರಮ ಪಡಿತರ ಅಕ್ಕಿ ವಶ




ಗಂಡ್ಲುಪೇಟೆ: ತಾಲ್ಲೂಕಿನ ಆಹಾರ ಇಲಾಖೆಯ ಶಿರಸ್ತೆದಾರರು ನೀಡಿದ ದೂರಿನ ಮೇರೆಗೆ, ಬೆಗೂರು ಪೊಲೀಸ್ ಠಾಣಾ ವ್ಯಾಪ್ತಿಯ ಕೋಟೆಕೆರೆ ಗ್ರಾಮದ ರಸ್ತೆಯಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಆರೋಪಿ ಮೇಲೆ ದಾಳಿ ಮಾಡಿ ಮಹಮ್ಮದ್ ಅಶ್ರಾರ್ ಬಿನ್ ಮಹಮ್ಮದ್ ಅಕ್ಟರ್ 26 ವರ್ಷ. ಮರದ ವ್ಯಾಪಾರ, 2 ನೇ ವಾರ್ಡ್, ಜಾಕೀರ ಹುಸೇನ ನಗರ, ಗುಂಡ್ಲುಪೇಟೆ ಟೌನ್ ಎಂಬುವವನನ್ನು ಮತ್ತು ಕೆಎ-04-ಎಂಎಲ್-3555 ರ ಟಾಟಾ ಇಂಡಿಕಾ ಕಾರನ್ನು ವಶಕ್ಕೆ ಪಡೆದು ಅದರಲ್ಲಿದ್ದ ಪಡಿತರ ಅಕ್ಕಿ ಸುಮಾರು 20,162=00 ಮೌಲ್ಯದ 13 ಪ್ಲಾಸ್ಟಿಕ್ ಚೀಲಗಳಲ್ಲಿದ್ದ ಒಟ್ಟು 5 ಕ್ವಿಂಟಲ್ 93 ಕೆ.ಜಿ.ಅಕ್ಕಿಯನ್ನು ವಶಕ್ಕೆ ಪಡೆದುಕೊಂಡು, ಬೇಗೂರು ಪೊಲೀಸ್ ಠಾಣಾ ಮೊ ನಂ:101/2026 ರಲ್ಲಿ ಪ್ರಕರಣ ದಾಖಲಿಸಿ ಮುಂದಿನ ಕ್ರಮಕೈಗೊಂಡಿರುತ್ತದೆ.

ಈ ದಾಳಿ ಕಾರ್ಯಕ್ಕೆ ಪೊಲೀಸ್ ಅಧೀಕ್ಷಕರಾದ ಮುತ್ತುರಾಜು ರವರು ಪ್ರಶಂಸನೆ ವ್ಯಕ್ತಪಡಿಸಿ, ಮುಂದಿನ ದಿನಗಳಲ್ಲಿಯೂ ಸಹ ಇನ್ನೂ ಹೆಚ್ಚಿನ ಅಕ್ರಮಗಳನ್ನು ಪತ್ತೆ ಹಚ್ಚಿ ನಿಗ್ರಹಿಸುವಂತೆ ಸೂಚನೆಗಳನ್ನು ನೀಡಿರುತ್ತಾರೆ.

# ಜೀವನ ಕಥೆ ಹೇಳುವ ವಿಶ್ವೇಶ್ವರಿ ಕೃತಿ ಬಿಡುಗಡೆ




ಮೈಸೂರು: ಡಾ.ಎನ್.ವಾಸಯ್ಯ ಅವರ ಸಂಪಾದಕತ್ವದಲ್ಲಿ ಪ್ರಕಟಣೆಗೊಂಡಿರುವ ಇನ್ಫೋಸಿಸ್ ನಾರಾಯಣಮೂರ್ತಿ ಪತ್ನಿ ಹಾಗೂ ಕನ್ನಡದ ಪ್ರಮುಖ ಲೇಖಕಿಯರಲ್ಲಿ ಒಬ್ಬರಾದ ಡಾ.ಸುಧಾಮೂರ್ತಿ ಕುರಿತ ವಿಶ್ವೇಶ್ವರಿ ಕೃತಿಯನ್ನು ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಭಾರತೀಯ ಭಾಷಾ ಸಂಸ್ಥಾನದ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕ ಪ್ರೊ.ನೀಲಗಿರಿ ಎಂ.ತಳವಾರ್ ಬಿಡುಗಡೆಗೊಳಿಸಿದರು.

ಈ ವೇಳೆ ಮಾತನಾಡಿ, ಸುಧಾ ಮೂರ್ತಿ ಅವರ ವ್ಯಕ್ತಿತ್ವ ಹಾಗೂ ಸಾಹಿತ್ಯ ಕುರಿತ 26 ಲೇಖನಗಳನ್ನು ಈ ಕೃತಿ ಒಳಗೊಂಡಿದೆ. ಹೆಸರಾಂತ ಉದ್ಯಮಿ, ಸಾಹಿತಿ ಆಗಿದ್ದರೂ ಅವರ ಸ್ವಭಾವ ಚಳಿ, ಮಳೆ, ಮಂಜು, ಕುದಿಸುವ ಬಿಸಿಲು ಇದ್ದರೂ ಸಹಾ ನಗು ನಗುತ ಇರುವೆನು ಎಂಬ ಬೇಂದ್ರ ಅವರ ನುಡಿಯಂತಿದೆ. ಸುಧಾಮೂರ್ತಿ ಅವರು ನಾರಾಯಣ ಮೂರ್ತಿ ಅವರಿಗೆ ಭರವಸೆಯ ಬೆಳಕಾಗಿ ನಿಂತವರು. ಸ್ತ್ರೀ ವಾದಿ ಎಂಬ ಹಣೆಪಟ್ಟಿ ಕಟ್ಟಿಕೊಳ್ಳದೆಯೇ ಸ್ತ್ರೀಯರ ಪರ ನಿಂತವರು ಇವರಾಗಿದ್ದಾರೆ. ನಾಡಿನ ಪ್ರಮುಖ ಲೇಖಕಿಯರಲ್ಲೂ ಒಬ್ಬರಾಗಿದ್ದಾರೆ. ಹೀಗಾಗಿ ಇವರ ಪರಿಚಯದ ಈ ಕೃತಿ ಓದುವುದು ಉಪಯುಕ್ತವಾದುದಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮುಡಾ ಮಾಜಿ ಅಧ್ಯಕ್ಷ ಎಚ್.ವಿ. ರಾಜೀವ್ ಮಾತನಾಡಿ, ಸುಧಾಮೂರ್ತಿ ಕನ್ನಡಿಗರ ಹೆಮ್ಮೆ, ಎಷ್ಟು ಎತ್ತರಕ್ಕೆ ಬೆಳೆಯಬಹುದು ಎಂಬುದಕ್ಕೆ ಸಾಕ್ಷಿಯಾಗಿರುವ ಇವರು ಎಲ್ಲರಿಗೂ ಆಶಾವಾದವಾಗಿದ್ದಾರೆ. ಅಷ್ಟು ಎತ್ತರಕ್ಕೆ ಬೆಳೆದರೂ ಸಹಾ ಸಾಮಾನ್ಯರಲ್ಲಿ ಸಾಮಾನ್ಯರು ಎಂಬಂತಿದ್ದಾರೆ. ಸರ್ಕಾರವನ್ನು ಟೀಕಿಸುವವರು ಹಲವರು, ಆದರೆ ಸಮಾಜಕ್ಕೆ ನಾನೇನು ಮಾಡಬಲ್ಲೆ ಎಂದು ಪ್ರಶ್ನಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡುವವರು ಕಡಿಮೆ. ಇವರ ಸಾಲಿಗೆ ಸುಧಾಮೂರ್ತಿ ನಿಲ್ಲುವವರಾಗಿದ್ದು, ಇವರ ಸಮಾಜಮುಖಿ ಕಾರ್ಯಗಳು ಅಸಂಖ್ಯ ಎಂದರು.

ಕೃತಿ ಕುರಿತ ಭಾರತೀಯ ಭಾಷಾ ಸಂಸ್ಥಾನದ ಹಿರಿಯ ಫೆಲೋ ಡಾ. ಮಾಲಿನಿ ಅಭ್ಯಂಕರ್ ಮಾತನಾಡಿ, ಶ್ರೀಮಂತಿಕೆಯ ಇರುವಿಕೆ ಲವಲೇಶವೂ ಸುಳಿಯದಂತೆ ನೋಡಿ ಕೊಂಡು ಸಾಗುತ್ತಿರುವ ಸುಧಾಮೂರ್ತಿ ನಾಡು, ವಿಶ್ವಕ್ಕೆ ಆದರ್ಶ ಮಹಿಳೆಯಾಗಿದ್ದಾರೆ. ಹೀಗಾಗಿ ವಿಶ್ವೇಶ್ವರಿ ಎಂಬ ಶೀರ್ಷಿಕೆ ಕೃತಿಗೆ ಸಕಾಲಿಕವಾದುದಾಗಿದೆ. ವ್ಯಕ್ತಿತ್ವ ಹಾಗೂ ಸಾಹಿತ್ಯ ಕುರಿತ ಈ ಕೃತಿ ಯುವ ಪೀಳಿಗೆಗೆ ಬೆಳಕು ನೀಡಬಹುದಾಗಿದೆ ಎಂದರು. ಕೃತಿಯ ಸಂಪಾದಕ ಡಾ. ಎನ್.ವಾಸಯ್ಯ, ಎಂ.ಚಂದ್ರಶೇಖರ್ ಇದ್ದರು.

# ಆರಿಎಂಬ್ರಾಯ್ಡರಿ ತರಬೇತಿ ಕಾರ್ಯಕ್ರಮ




ಗುಂಡ್ಲುಪೇಟೆ:- ತಾಲೂಕಿನ ಅಂತಾರಾಷ್ಟ್ರೀಯ ಮಾನವ ಅಭಿವೃದ್ಧಿ ಮತ್ತು ಏಳಿಗೆ ಸಂಸ್ಥೆ ಮತ್ತು ನಬಾರ್ಡ್ ಚಾಮರಾಜನಗರ ಇವರ ಸಹಯೋಗದಲ್ಲಿ ಹರವೆ ಗ್ರಾಮದಲ್ಲಿ ಕೌಶಲ್ಯ ಅಭಿವೃದ್ಧಿ ಯೋಜನೆ ಯಡಿಯಲ್ಲಿ ಆರಿ ಎಂಬ್ರಾಯ್ಡರಿ ತರಬೇತಿಯ ಉದ್ಘಾಟನಾ ಕಾರ್ಯಕ್ರಮ ನಡೆಸಲಾಯಿತು

ಈ ಕಾರ್ಯಕ್ರಮವನ್ನು ಕುರಿತು ಮಾತನಾಡಿದ ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಸುರೇಖಾ ರವರು ಐಊಆಗಂ ಸಂಸ್ಥೆ ಹಾಗೂ ನಬಾರ್ಡ್ ಸಹಯೋಗದಲ್ಲಿ ಮಹಿಳೆಯರಿಗೆ ಹಲವಾರು ಕೌಶಲ್ಯತರಬೇತಿಗಳನ್ನು ನೀಡಲಾಗುತ್ತಿದ್ದು ಈ ಮೂಲಕ ಅವರ ಜೀವನ ರೂಪಿಸಿಕೊಳ್ಳಲು ಬ್ಯಾಂಕ್ ಗಳು ಸಹ ಹೆಚ್ಚಿನ ನೆರವು ನೀಡಲು ಸಿದ್ದವಿದ್ದು ಸಮರ್ಪಕ ವಾಗಿ ಬಳಸಿಕೊಳ್ಳಲು ಸಲಹೆ ನೀಡಿದರು

ರೀಜನಲ್ ಮ್ಯಾನೇಜರ್.ತ್ರಿವೇಣಿ ರವರು ಮಹಿಳೆಯರಲ್ಲಿ ಆತ್ಮ ವಿಶ್ವಾಸ ಹೆಚ್ಚಿ ಅವರ ಜೀವನ ಮಟ್ಟ ಸುಧಾರಿಸುತ್ತದೆ, ಈ ನಿಟ್ಟಿನಲ್ಲಿ ಸಂಸ್ಥೆಯು ನಿರಂತರವಾಗಿ ಯೋಜನೆ ರೂಪಿಸಿ ಅನುಷ್ಠಾನ ಗೊಳಿಸುತ್ತಿದೆ, ಈ ಭಾಗದ ಮಹಿಳೆಯರು ಹೆಚ್ಚಿನ ರೀತಿಯಲ್ಲಿ ತೊಡಗಿಸಿ ಕೊಳ್ಳಬೇಕು ಎಂದು ತಿಳಿಸಿದರು

ನಬಾರ್ಡ್ ಆಆಓ ಹಿತಾ ಸುವರ್ಣ ರವರು ಈ ಭಾಗದಲ್ಲಿ ಸಮುದಾಯದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲು ಹಲವು ಯೋಜನೆಗಳನ್ನು ಅನುಷ್ಠಾನ ಗೊಳಿಸುತ್ತಿದೆ, ಇದರ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು

ಕಾರ್ಯಕ್ರಮದಲ್ಲಿ ಐಊಆಗಂ ಸಂಸ್ಥೆಯ ಕಲಾವತಿ,ರವರು ಸಂಸ್ಥೆಯ ಕಾರ್ಯ ಚಟುವಟಿಕೆ ಗಳ ಬಗ್ಗೆ ತಿಳಿಸಿದರು ಕರ್ನಾಟಕ ಗ್ರಾಮೀಣ ಬ್ಯಾಂಕ್ ವ್ಯವಸ್ಥಾಪಕ. ಸಾಯಿರಾಂ ಹಾಗೂ ತರಬೇತು ದಾರರು ಪಲ್ಲವಿ ಸಂಸ್ಥೆಯ ಸಿಬ್ಬಂದಿ ವರ್ಗದವರು ಇತರರು ಉಪಸ್ಥಿತರಿದ್ದರು

**ಶಾಸಕ ಸಿ.ಪುಟ್ಟರಂಗಶೆಟ್ಟಿ ಪರಿಶೀಲನೆ**

# ನೀರಿನ ಸಮಸ್ಯೆ: ಶಾಸಕರ ಭೇಟಿ, ಪರಿಶೀಲನೆ



ಚಾಮರಾಜನಗರ, ನಗರದ ವಿವಿಧ ಬಡಾವಣೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವ ಹಿನ್ನೆಲೆಯಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ನಗರದ ರಾಮಸಮುದ್ರ, ಗಾಳಿಪುರ, ಸೋಮವಾರ ಪೇಟೆಯ ಬಡಾವಣೆಗಳಿಗೆ ಭೇಟಿ ನೀಡಿದ ಅವರು ನಿವಾಸಿಗಳಿಂದ ನೀರಿನ ಸಮಸ್ಯೆ ಬಗ್ಗೆ ಮಾಹಿತಿ ಪಡೆದರು. ಕೊಳವೆ ಬಾವಿ ಕೊರೆಸಿರುವ ರಾಮಸಮುದ್ರ ವ್ಯಾಪ್ತಿಯ 30 ನೇ ವಾರ್ಡ್, ಗಾಳಿಪುರ ಬಡಾವಣೆಯ 2ನೇ ವಾರ್ಡ್ ಮತ್ತು ಸೋಮವಾರಪೇಟೆಗಳಿಗೆ ನೀಡಿ ಹೊಸದಾಗಿ ಕೊರೆಸಿರುವ ಬೋರ್ ವೆಲ್ ಗಳಿಂದ ನೀರು ಬರುವುದನ್ನು ಖಚಿತ ಪಡಿಸಿಕೊಂಡರು.

ಈ ವೇಳೆ ಮಾತನಾಡಿದ ಶಾಸಕ ಸಿ.ಪುಟ್ಟರಂಗಶೆಟ್ಟಿ, ಕೊಳವೆಬಾವಿ ಕೊರೆಸಿರುವ ಕಡೆ ಕುಡಿಯುವ ನೀರು ಸಿಗುತ್ತಿದ್ದು ಕೂಡಲೇ ಹೊಸ. ಪೈಪ್‌ಲೈನ್ ಕಾಮಗಾರಿ ಕೈಗೊಂಡು ಮೋಟಾರ್ ಅಳವಡಿಸಿ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡುವಂತೆ ಸೂಚಿಸಿದರು. ಎಂದು ಅಧಿಕಾರಿಗಳಿಗೆ ಸೂಚಿಸಿದರು.

ರಾಮಸಮುದ್ರದಲ್ಲಿ ಮೇ8ರಿಂದ 11ರವರೆಗೆ ರಾಮ ಲಿಂಗ ಚೌಡೇಶ್ವರಿ ಅಮ್ಮನವರ 47 ನೇ ವರ್ಧಂತೋತ್ಸವ ಶಾಸಕ ಪುಟ್ಟರಂಗಶೆಟ್ಟಿ ಅವರಿಗೆ ನಿವಾಸಿ ಗಳಿಂದ ಮನವಿ ಸಲ್ಲಿಕೆ. ನಗರಸಭೆ ವ್ಯಾಪ್ತಿಯ ರಾಮಸಮುದ್ರದಲ್ಲಿ ಮೇ8ರಿಂದ 11ರವರಗೆ ರಾಮ ಲಿಂಗ ಚೌಡೇಶ್ವರಿ ಅಮ್ಮನವರ 47 ನೇ ವರ್ಧಂತೋತ್ಸವ ಹಾಗೂ ಕತ್ತಿಹಬ್ಬ ನಡೆಯಲಿದ್ದು. ಇಂದು ಭೇಟಿನೀಡಿದ್ದ ಶಾಸಕ ಪುಟ್ಟರಂಗಶೆಟ್ಟಿಗೆ ನಿವಾಸಿಗಳು ಮನವಿ ಸಲ್ಲಿಸಿದರು.

4ದಿನಗಳ ಕಾಲ ರಾಮಲಿಂಗ ಚೌಡೇಶ್ವರಿ ಅಮ್ಮನವರ 47 ನೇ ವರ್ಧಂತೋತ್ಸವ ಹಾಗೂ ಕತ್ತಿಹಬ್ಬ ನಡೆಯಲಿದ್ದು, ಮೆಟ್ಲಿಂಗ್ ಹಾಕಿಬಿಟ್ಟಿರುವ ರಸ್ತೆಗೆ ಡಾಂಬರು ಹಾಕಿಸಬೇಕು, ಕಸವಿಲೇವಾರಿಗೆ ಕ್ರಮವಹಿಸಬೇಕು, ಚರಂಡಿಹೂಳೆತ್ತಲು ಸಮರ್ಪಕ ಕುಡಿಯುವ ನೀರು ಪೂರೈಸಲು ನಗರಸಭೆ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಶಾಸಕರಲ್ಲಿ ನಿವಾಸಿಗಳು ಮನವಿ ಮಾಡಿದರು. ನಗರಸಭೆ ಮಾಜಿ ಉಪಾಧ್ಯಕ್ಷ ರಾಜಪ್ಪ, ಮಾಜಿಸದಸ್ಯ ಪುಟ್ಟಸ್ವಾಮಿ, ಕುಮಾರ್, ಉಮೇಶ್, ಕರುಣಾಕರ್, ನಂಜುಂಡ, ಶಿವಮೂರ್ತಿ, ನಗರಸಭೆ ಆಯುಕ್ತ ಪರಶುರಾಂ ಛಲವಾದಿ, ಆರೋಗ್ಯ ನಿರೀಕ್ಷಕ ಮಂಜು, ನಿವಾಸಿಗಳು ಹಾಜರಿದ್ದರು.

# ನಗರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೊಂದರೆ ಇಲ್ಲ : ಡೀಸಿ

## ನೀರು ಮಿತವಾಗಿ ಬಳಸಲು ಸಾರ್ವಜನಿಕರಿಗೆ ಸೂಚನೆ



**ಮಂಡ್ಯ:** ಪ್ರಸ್ತುತ ಬೇಸಿಗೆ ಕಾಲದಲ್ಲಿಯೂ ಮಂಡ್ಯ ನಗರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಯಾವುದೇ ಕೊರತೆ ಇಲ್ಲ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ನಗರಸಭೆಯ ಧರಣಪ್ಪ ಸಭಾಂಗಣದಲ್ಲಿ ನಡೆದ ಕುಡಿಯುವ ನೀರಿನ ಸ್ಥಿತಿಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಗರಸಭಾ ವ್ಯಾಪ್ತಿಯಲ್ಲಿ ಒಟ್ಟು 585 ಕೊಳವೆಬಾವಿಗಳಿದ್ದು, ಅವುಗಳ ನೀರಿನ ಗುಣಮಟ್ಟ ಹಾಗೂ ಇಳುವರಿಯನ್ನು ನಿಯಮಿತವಾಗಿ ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ನಗರಸಭೆಯ 12 ವಾರ್ಡ್‌ಗಳಿಗೆ ಪ್ರತಿದಿನ ನೀರು ಪೂರೈಕೆ ಮಾಡಲಾಗುತ್ತಿದ್ದು, ಉಳಿದ 23 ವಾರ್ಡ್‌ಗಳಿಗೆ ದಿನಬಿಟ್ಟು ದಿನ ನೀರು ಪೂರೈಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಎಲ್ಲಾ 23 ವಾರ್ಡ್‌ಗಳಿಗೂ ಪ್ರತಿದಿನ ನೀರು ಪೂರೈಸುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಬೇಸಿಗೆ ಹಿನ್ನೆಲೆಯಲ್ಲಿ ತಾಪಮಾನ ಹೆಚ್ಚುತ್ತಿರುವುದರಿಂದ ಸಾರ್ವಜನಿಕರು ನೀರನ್ನು ಮಿತವಾಗಿ ಬಳಸಬೇಕು ಹಾಗೂ ಅನವಶ್ಯಕವಾಗಿ ನೀರು ವ್ಯರ್ಥವಾಗದಂತೆ ಜಾಗರೂಕರಾಗಬೇಕು ಎಂದು ಮನವಿ ಮಾಡಿದರು.

ನಗರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಉನ್ನತೀಕರಣ ಕಾಮಗಾರಿಗಳಿಗೆ ನಗರಸಭೆಯಿಂದ 25% ಅನುದಾನ ನೀಡುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ನಗರದಲ್ಲಿನ ವಾಣಿಜ್ಯ ಮಳಿಗೆಗಳ ನಿರ್ಮಾಣ ಈಗಾಗಲೇ ಪೂರ್ಣಗೊಂಡಿದ್ದು, ಒಟ್ಟು 126 ಅಂಗಡಿ ಮಳಿಗೆಗಳನ್ನು ನಿರ್ಮಿಸಲಾಗಿದೆ. 2022ರಲ್ಲಿ ವ್ಯಾಪಾರ ನಡೆಸುತ್ತಿದ್ದ ಮಾಲೀಕರ ದಾಖಲಾತಿಗಳನ್ನು ಪರಿಶೀಲಿಸಿ, ಆದ್ಯತೆ ಆಧಾರದ ಮೇಲೆ ಅಂಗಡಿ ಮಳಿಗೆಗಳನ್ನು ಹಂಚಿಕೆ ಮಾಡುವುದಾಗಿ ತಿಳಿಸಿದರು.

ನಗರಸಭಾ ವ್ಯಾಪ್ತಿಯಲ್ಲಿ ಅನುಮತಿ ಇಲ್ಲದೆ ಅಳವಡಿಸಿರುವ ಅನಧಿಕೃತ ಜಾಹೀರಾತುಗಳನ್ನು ತೆರವುಗೊಳಿಸಲು ಸೂಚಿಸಲಾಗಿದ್ದು, ಅಧಿಕೃತವಾಗಿ ಗುರುತಿಸಲಾದ ಸ್ಥಳಗಳಲ್ಲಿ ಮಾತ್ರ ಜಾಹೀರಾತು ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಅಲ್ಲದೆ, ವಿವಿಧ ನಿಧಿಗಳ ಅಡಿಯಲ್ಲಿ ನಗರಸಭಾ ವ್ಯಾಪ್ತಿಯ ರಸ್ತೆ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ನಡೆಯುತ್ತಿದ್ದು, ಶೀಘ್ರದಲ್ಲೇ ಅವುಗಳನ್ನು ಪೂರ್ಣಗೊಳಿಸಲಾಗುತ್ತದೆ. ಮುಂದಿನ ದಿನಗಳಲ್ಲಿ ಪಾದಚಾರಿ ಮಾರ್ಗ (ಫುಟ್‌ಪಾತ್) ಹಾಗೂ ಸೈಕಲ್ ನಿಲ್ದಾಣಗಳ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ, 2026ರ ಜನಗಣತಿ ಕಾರ್ಯದ ಮೊದಲ ಹಂತವಾದ ಮನೆಗಳ ಪಟ್ಟಿಮಾಡುವ ಕಾರ್ಯವನ್ನು ಅವಧಿಗಿಂತ ಮುಂಚಿತವಾಗಿ ಪೂರ್ಣಗೊಳಿಸಿದ ಮೇಲ್ವಿಚಾರಕರು ಹಾಗೂ ಗಣತಿದಾರರನ್ನು ಜಿಲ್ಲಾಧಿಕಾರಿ ಅಭಿನಂದಿಸಿದರು.

ಸಭೆಯಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ. ರವಿಕುಮಾರ್ ಗೌಡ, ನಗರಸಭಾ ಆಯುಕ್ತ ಪಂಪಶ್ರೀ ಯು.ಪಿ., ನಗರಸಭಾ ಪ್ರಾಧಿಕಾರ ಮೂಡ ಅಧ್ಯಕ್ಷ ಬಿ.ಪಿ. ಪ್ರಕಾಶ್, ಮಂಡ್ಯ ವಿಶ್ವವಿದ್ಯಾಲಯದ ಕುಲಸಚಿವ ಕೃಷ್ಣಕುಮಾರ್, ಜಿಲ್ಲಾ ಕೋಶ ಯೋಜನಾಧಿಕಾರಿ ನರಸಿಂಹಮೂರ್ತಿ, ಅಭಿಯಂತರ ಪ್ರತಾಪ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ರಸ್ತೆ ಸುರಕ್ಷತೆ ಸುಧಾರಿಸಲು–ಅಪಘಾತಗಳನ್ನು ಕಡಿಮೆ ಮಾಡಲು ಅಗತ್ಯ ಕ್ರಮ: ಡಾ ಕುಮಾರ



**ಮಂಡ್ಯ:** ರಸ್ತೆ ಸುರಕ್ಷತೆಯನ್ನು ಸುಧಾರಿಸಲು ಮತ್ತು ಅಪಘಾತಗಳನ್ನುರಸ್ತೆ ಸುರಕ್ಷತೆಯನ್ನು ಸುಧಾರಿಸಲು ಮತ್ತು ಅಪಘಾತಗಳನ್ನು ಕಡಿಮೆ ಮಾಡುವ ಮಾಡುವ ಉದ್ದೇಶದಿಂದ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಐಐಟಿ ಮದ್ರಾಸ್ ನಲ್ಲಿ ರಸ್ತೆ ಸುರಕ್ಷತೆಯ ಶ್ರೇಷ್ಠತಾ ಕೇಂದ್ರವನ್ನು ಸ್ಥಾಪಿಸಿದ್ದು ಡೇಟಾ ವಿಶ್ಲೇಷಣೆಯ ಮೂಲಕ ರಸ್ತೆ ಅಪಘಾತಗಳ ಕಾರಣಗಳನ್ನು ಪತ್ತೆ ಹಚ್ಚಿ ರಸ್ತೆ ಅಪಘಾತಗಳನ್ನು ಕಡಿಮೆಮಾಡಲು ಅಗತ್ಯ ವಹಿಸುತ್ತದೆ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಆದ್ಯತೆಗಳ ಕುರಿತು ಐಐಟಿ ಮದ್ರಾಸ್ ನಲ್ಲಿ ರಸ್ತೆ ಸುರಕ್ಷತೆಯ ಶ್ರೇಷ್ಠತಾ ಕೇಂದ್ರದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಮಂಡ್ಯ ಜಿಲ್ಲೆಯಲ್ಲಿ 4 ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗುತ್ತವೆ. ಈ ಸ್ಥಳಗಳಲ್ಲಿ ಕಪ್ಪು ಸ್ಥಳಗಳನ್ನು (ಃಟಚಿಛಿಞ ¸ ಠಿಂಣ) ಗುರುತಿಸಿ, ಅಪಘಾತಗಳನ್ನು ತಡೆಗಟ್ಟಲು ಇಂತಹ ಕೇಂದ್ರಗಳ ಸಂಶೋಧನೆಗಳನ್ನು ಬಳಸಿಕೊಂಡು ಅಪಘಾತಗಳನ್ನುರಸ್ತೆ ಸುರಕ್ಷತೆಯನ್ನು ಸುಧಾರಿಸಲು ಮತ್ತು ಅಪಘಾತಗಳನ್ನು ಕಡಿಮೆ ಮಾಡಲು ಅಗತ್ಯ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ರಸ್ತೆ ಸುರಕ್ಷತೆಯ ಶ್ರೇಷ್ಠತಾ ಕೇಂದ್ರವು ಡೇಟಾ–ಆಧಾರಿತ ನಿರ್ಧಾರಗಳನ್ನು ತೆಗೆದುಕೊಳ್ಳಲು ಆರೋಗ್ಯ, ಪೊಲೀಸ್ ಹಾಗೂ ಲೋಕೋಪಯೋಗಿ ಇಲಾಖೆಯ ಇಂಜಿನಿಯರ್ ಗಳಿಗೆ ಮೇ 16 ರಂದು ಮಿಮ್ಸ್ ಸಭಾಂಗಣದಲ್ಲಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳತ್ತದೆ. ಈ ಸಂಬಂಧ ಲೋಕಾಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತತರು ಅಗತ್ಯ ಕ್ರಮವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಐಐಟಿ ಮದ್ರಾಸ್ ನಲ್ಲಿ ರಸ್ತೆ ಸುರಕ್ಷತೆಯ ಶ್ರೇಷ್ಠತಾ ಕೇಂದ್ರದ ವ್ಯವಸ್ಥಾಪಕರಾದ ಡಾ ರೋಷನ್ ಅವರು ಮಾತನಾಡಿದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಹೆಚ್ಚಿನ ಮರಣ ಸಂಭವಿಸುವ ಕಾರಿಡಾರ್‌ಗಳನ್ನು ಸರ್ಕಾರ ಗುರುತಿಸಿದೆ ಮತ್ತು ನಮ್ಮ ಕಂಪನಿಯಿಂದ ಅಪಘಾತಗಳನ್ನು ಕಡಿಮೆ ಮಾಡಲು ಸ್ಥಳದ ಅವಶ್ಯಕತೆಗಳ ಆಧಾರದ ಮೇಲೆ ವಿವಿಧ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಡೇಟಾ ವಿಶ್ಲೇಷಣೆಯ ಮೂಲಕ ರಸ್ತೆ ಅಪಘಾತಗಳ ಕಾರಣಗಳನ್ನು ಪತ್ತೆ ಹಚ್ಚುವುದು. ರಸ್ತೆ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸಲು ರಸ್ತೆ ಸುರಕ್ಷತಾ ಪ್ರಚಾರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ ಶೋಭಾರಾಣಿ, ಲೋಕೊಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರಾದ ಪುರುಷೋತ್ತಮ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೈಸೂರು ಉದ್ದೇಶಿತ ಮೇಲ್ಸೇತುವೆ ಪ್ರದೇಶಕ್ಕೆ ಈಶ್ವರ ಖಂಡ್ರೆ ಭೇಟಿ




**ಮೈಸೂರು:** ಮೈಸೂರಿನ ಸಿದ್ದಿಕಿ ನಗರ, ಮಣಿಪಾಲ್ ಆಸ್ಪತ್ರೆ ವೃತ್ತದ ಬಳಿ ರಾ.ಹೆ.275ರಲ್ಲಿ ಉದ್ದೇಶಿತ ಮೇಲ್ಸೇತುವೆ ಸ್ಥಳಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ಖುದ್ದು ಭೇಟಿ ನೀಡಿ ವೀಕ್ಷಿಸಿದರು.

ಮೇಲ್ಸೇತುವೆ ಕಾಮಗಾರಿಗೆ ಬನ್ನಿಮಂಟಪ ರಸ್ತೆ, ನಂಜನಗೂಡು ರಸ್ತೆ, ಫೌಂಟನ್ ರಸ್ತೆ, ಹುಣಸೂರು ರಸ್ತೆಗಳ ವಿಭಜಕದೊಳಗೆ ಬೆಳೆಸಲಾಗಿರುವ ಮತ್ತು ಎಡ ಮತ್ತು ಬಲಬದಿಯ ಕೆಲವು ಮರ ಸೇರಿ ಒಟ್ಟು 347 ಮರಗಳು ಅಡ್ಡಿಯಾಗಿದೆ ಎಂದು ಅಂದಾಜಿಸಲಾಗಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದರು.

ಬೀಟೆ, ರೈನ್ ಟ್ರೀ, ಹೊಂಗೆ, ಆಕಾಶ ಮಲ್ಲಿಗೆ, ಗಸಗಸೆ, ಮಹಾಗನಿ, ಮಾವು, ಬೇವು ಸೇರಿದಂತೆ ವಿವಿಧ ಮರಗಳನ್ನು ಕಾಮಗಾರಿಗಾಗಿ ತೆಗೆಯಬೇಕಾಗುತ್ತದೆ. ಹೀಗಾಗಿ ಎಷ್ಟು ಮರಗಳನ್ನು ಉಳಿಸಬಹುದು, ಬೀಟೆ, ಇತ್ಯಾದಿ ಮರಗಳನ್ನು ಸ್ಥಳಾಂತರಿಸಲು ಸಾಧ್ಯವೇ ಎಂಬ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸುವಂತೆ ಸಚಿವರು ಸೂಚಿಸಿದರು.

ಈ ಭೇಟಿಯ ವೇಳೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಪರಮೇಶ್, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಂಕರೇಗೌಡ ಮತ್ತಿತರರು ಹಾಜರಿದ್ದರು.

# ಬಿಜೆಪಿಗೆ ಭಾರಿ ಜಯ: ಕಾರ್ಯಕರ್ತರಿಗೆ ಹೊಸ ಉತ್ಸಾಹ : ಎಸ್ ಜೆ ಆನಂದ್



**ಮಂಡ್ಯ :** ಎರಡು ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಬಿಜೆಪಿ ಅಭೂತ ಪೂರ್ವ ಜಯ ಸಾಧಿಸಿರುವುದು ಕಾರ್ಯಕರ್ತರಿಗೆ ಹೊಸ ಹುಮ್ಮಸ್ಸು ತಂದುಕೊಟ್ಟಂತಾಗಿದೆ ಎಂದು ಜಿಲ್ಲಾ ಬಿಜೆಪಿ ಮುಖಂಡ, ಸಾಮಾಜಿಕ ಕಾರ್ಯಕರ್ತ ಎಸ್ ಜೆ ಆನಂದ್ ಬಣ್ಣಿಸಿದ್ದಾರೆ

ಈ ಕುರಿತು ಹೇಳಿಕೆ ನೀಡಿರುವ ಆನಂದ್ ಪ್ರಧಾನ ಮಂತ್ರಿ ಮೋದಿ ಹಾಗೂ ಗೃಹ ಮಂತ್ರಿ ಅಮಿತ್ ಶಾ ನೇತೃತ್ವದಲ್ಲಿ ನಡೆದ ಚುನಾವಣಾ ಹಣಾಹಣಿಯಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದೆ. ಈ ಗೆಲುವಿನ ಹಿಂದೆ ನಮ್ಮ ಪಕ್ಷದ ನಾಯಕರ ಶ್ರಮ ಮಾದರಿಯಾಗಿದೆ ಎಂದಿದ್ದಾರೆ.

ಕರ್ನಾಟಕದಲ್ಲೂ ಕೂಡ 2028ರ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಗಾಲ ಮಾದರಿಯ ಗೆಲುವಿನ ರೀತಿ ಅಧಿಕಾರಕ್ಕೆ ತಂದು ರಾಜ್ಯದಲ್ಲಿ ಕಾಂಗ್ರೆಸ್ ಬೇರನ್ನು ಬುಡ ಸಮೇತ ಕಿತ್ತು ಹಾಕಬೇಕು. ಆ ನಿಟ್ಟಿನಲ್ಲಿ ನಾಯಕರು , ಕಾರ್ಯಕರ್ತರು ಒಮ್ಮತವಾಗಿ ಈಗಿನಿಂದಲೇ ಕೆಲಸ ಮಾಡಬೇಕಿದೆ ಎಂದು ಆನಂದ್ ಸಲಹೆ ನೀಡಿದ್ದಾರೆ.

## ಮೇಕ್ ಇನ್ ಇಂಡಿಯಾದಿಂದ ದೇಶ ಅಭಿವೃದ್ಧಿ: ಗೆಹ್ಲೋಟ್

# ಉದ್ಯೋಗ ಹುಡಕಬೇಡಿ; ಉದ್ಯೋಗ ಸೃಷ್ಟಿಸಿ

**ಶಿವಮೊಗ್ಗ:** ಕೇವಲ ಉದ್ಯೋಗಾಕಾಂಕ್ಷಿ ಗಳಾಗುವುದಕ್ಕಿಂತ ಅವಕಾಶಗಳ ಸೃಷ್ಟಿಕರ್ತರಾಗಬೇಕು. ಸ್ಟಾರ್ಟ್‌ಅಪ್ ಸಂಸ್ಕೃತಿ, ನಾವೀನ್ಯತೆ ಹಾಗೂ ಉದ್ಯಮಶೀಲತೆಯ ಮೂಲಕ ವೈಯಕ್ತಿಕವಾಗಿ ಹಾಗೂ ಸಮಾಜಕ್ಕಾಗಿ ಹೊಸ ಅವಕಾಶಗಳನ್ನು ನಿರ್ಮಿಸಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲ ಯದ 35ನೇ ಘಟಿಕೋತ್ಸವದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸಿನ ಹೊಸ ಎತ್ತರಗಳನ್ನು ಸಾಧಿಸಿ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಹೇಳಿದರು. ಏಕೀಕೃತ ಭಾರತ, ಶ್ರೇಷ್ಠ ಭಾರತ, ಅಭಿವೃದ್ಧಿ ಹೊಂದಿದ ಭಾರತ ಎಂಬ ಗುರಿಗಳನ್ನು ಸಾಧಿಸಲು ಮೇಕ್ ಇನ್ ಇಂಡಿಯಾ ಮತ್ತು ವೋಕಲ್ ಫಾರ್ ಲೋಕಲ್ ಅಭಿಯಾನಗಳಿಗೆ ಕೈಜೋಡಿಸುವ ಅಗತ್ಯವಿದೆ ಎಂದರು.

ಇಂದಿನ ಸ್ಪರ್ಧಾತ್ಮಕ ಮತ್ತು ವೇಗವಾಗಿ ಬದಲಾಗುತ್ತಿರುವ ಜಗತ್ತಿನಲ್ಲಿ ನಿರಂತರ ಕಲಿಕೆಯ ಮನೋಭಾವ, ನವೀನ ಚಿಂತನೆ ಮತ್ತು ಸಾಮಾಜಿಕ ಜವಾಬ್ದಾರಿಯುತ ದೃಷ್ಟಿಕೋನ ಅತ್ಯಗತ್ಯ. ಜ್ಞಾನ ಮತ್ತು ಕೌಶಲ್ಯಗಳನ್ನು ನಿರಂತರವಾಗಿ ನವೀಕರಿಸಿಕೊಂಡು ಕಾಲದ ಅಗತ್ಯಗಳಿಗೆ ತಕ್ಕಂತೆ ತಮ್ಮನ್ನು ತಾವು ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶ ಅಭಿವೃದ್ಧಿ ಹೊಂದಿದ ಭಾರತ2047 ಗುರಿಯತ್ತ ಸಾಗುತ್ತಿದೆ. ಈ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ಯುವಕರ ಪಾತ್ರ ನಿರ್ಣಾಯಕ. ಭಾರತವನ್ನು ಸ್ವಾವಲಂಬಿ, ಆರ್ಥಿಕವಾಗಿ ಬಲಿಷ್ಠ ಹಾಗೂ ಜಾಗತಿಕ ಮಟ್ಟದಲ್ಲಿ ಮುಂಚೂಣಿಗೆ ತರುವ ಶಕ್ತಿ ಯುವಕರಲ್ಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಹೊಸ ಶಿಕ್ಷಣ ನೀತಿ2020 ಶಿಕ್ಷಣ ವ್ಯವಸ್ಥೆಯನ್ನು ಹೆಚ್ಚು ಒಳಗೊಂಡ, ಬಹುಆಯಾಮದ ಮತ್ತು ಕೌಶಲ್ಯಾಧಾರಿತವಾಗಿಸಿದೆ. ಶಿಕ್ಷಣವು ಕೇವಲ ಪದವಿ ಪಡೆಯುವ ಸಾಧನವಲ್ಲ; ಅದು ಜೀವನ ಕೌಶಲ್ಯ, ನೈತಿಕತೆ ಮತ್ತು ಸಾಮಾಜಿಕ ಜವಾಬ್ದಾರಿಯ ಆಧಾರವಾಗಬೇಕು ಎಂದರು. ಜಾಗತಿಕ ತಾಪಮಾನ ಏರಿಕೆ, ಹವಾಮಾನ ಬದಲಾವಣೆ ಮತ್ತು ಪರಿಸರ ಮಾಲಿನ್ಯದಂತಹ ಸವಾಲುಗಳಿಗೆ ಯುವಕರು ಸ್ಪಂದಿಸಬೇಕು. ವಿಜ್ಞಾನ, ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಡೇಟಾ ಸೈನ್ಸ್ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಬೆಳವಣಿಗೆಗಳು ಹೊಸ ಅವಕಾಶಗಳ ಜೊತೆಗೆ ಸವಾಲುಗಳನ್ನೂ ತರುತ್ತಿವೆ ಎಂದು ತಿಳಿಸಿದರು.

ಕುವೆಂಪು ವಿಶ್ವವಿದ್ಯಾಲಯವು ಮಹಾನ್ ಕವಿ ಮತ್ತು ಚಿಂತಕ ಕುವೆಂಪು ಅವರ ಆದರ್ಶಗಳಿಂದ ಪ್ರೇರಿತವಾಗಿದೆ. ಅವರ ವಿಶ್ವಮಾನವ ಸಂದೇಶ ಸಮಾನತೆ, ಮಾನವೀಯತೆ ಮತ್ತು ಪ್ರಗತಿಪರ ಚಿಂತನೆಗೆ ದಾರಿದೀಪವಾಗಿದೆ. ವಿದ್ಯಾರ್ಥಿಗಳು ಕುವೆಂಪು ಅವರ ಆದರ್ಶಗಳನ್ನು ಅಳವಡಿಸಿಕೊಂಡು ಸಮಾಜಮುಖಿ ಜೀವನ ನಡೆಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಸಚಿವ ಡಾ. ಎಂ.ಸಿ.ಸುಧಾಕರ್, ಪ್ರೊ.ಅನಿಲ್ ಡಿ. ಸಹಸ್ರಬುಧೆ, ಕುಲಪತಿ ಪ್ರೊ. ಶರತ್ ಅನಂತಮೂರ್ತಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.



## ಸಂಕ್ಷಿಪ್ತ ಸುದ್ದಿ

### ಅರ್ಜಿ ಅಹ್ವಾನ

**ಮಂಡ್ಯ:** 2025–26ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕ ಮರುಪಾವತಿ" ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಮೇ 16 ರವರೆಗೆ ಪೋಷಕರು / ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಲುಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಬೇಕಾದ ವೆಬ್ ಸೈಟ್ :https:ssp.postmetric.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ : 8050770004 ಹಾಗೂ

E-mail : bcwdhelpline@gmail.com ಅನ್ನು ಸಂಪರ್ಕಿಸಬಹುದು. ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಅಹ್ವಾನ

**ಮಂಡ್ಯ:** 2025–26ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕ ಮರುಪಾವತಿ" ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಮೇ 16 ರವರೆಗೆ ಪೋಷಕರು / ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಲುಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಬೇಕಾದ ವೆಬ್ ಸೈಟ್ : :https:ssp.postmetric.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು.

# ಮಂಡ್ಯದಲ್ಲಿ ಟಿ.ತಿಮ್ಮೇಗೌಡ ಪ್ರಶಸ್ತಿ ಪ್ರದಾನ ಸಮಾರಂಭ ಮೇ 9ರಂದು

**ಮಂಡ್ಯ:** ಮಂಗಲ ಟಿ.ತಿಮ್ಮೇಗೌಡ ಪ್ರತಿಷ್ಠಾನದ ವತಿಯಿಂದ ಟಿ.ತಿಮ್ಮೇಗೌಡ ಜನಮುಖಿ ಆಡಳಿತ ಪ್ರಶಸ್ತಿ, ಶ್ರೀಮತಿ ನಿಂಗಮ್ಮ ದೊಡ್ಡಿ ತಿಮ್ಮೇಗೌಡ ಕೃಷಿಕ ಪ್ರಶಸ್ತಿ ಹಾಗೂ ಶ್ರೀಮತಿ ಎಂ.ಆರ್ ಶಶಿಕಲಾ ಟಿ ತಿಮ್ಮೇಗೌಡ ವಿದ್ಯಾರ್ಥಿ ಪುರಸ್ಕಾರ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಮೇ 9 ರಂದು ಸಂಜೆ 4 ಗಂಟೆಗೆ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಎ.ಸಿ.ರಮೇಶ್ ತಿಳಿಸಿದರು

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ.ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷರಾದ ಡಾ.ನಿಶ್ಚಲಾನಂದನಾಥ ಸ್ವಾಮೀಜಿಯವರ ದಿವ್ಯ ಸಾನ್ನಿಧ್ಯದಲ್ಲಿ ನಡೆಯುವ ಸಮಾರಂಭವನ್ನು ಬೆಂಗಳೂರಿನ ಕಣ್ವ ಡಯಾಗ್ನೋಸ್ಟಿಕ್ ಸೆಂಟರ್ ಮಾಲೀಕರಾದ ಡಾ॥ಎಚ್.ಎಂ.ವೆಂಕಟಪ್ಪ ಉದ್ಘಾಟಿಸಲಿದ್ದಾರೆ. ಕರ್ನಾಟಕ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯ ಭಾಸ್ಕರ್ ಪ್ರಶಸ್ತಿ ಪ್ರದಾನ ಮಾಡಲಿದ್ದು, ಮಂಗಲ ಟಿ ತಿಮ್ಮೇಗೌಡ ಪ್ರತಿಷ್ಠಾನದ ಅಧ್ಯಕ್ಷ ಎ.ಸಿ. ರಮೇಶ್ ಸಮಾರಂಭದ ಅಧ್ಯಕ್ಷತೆ ವಹಿಸುವರು ಎಂದರು..

ಟಿ.ತಿಮ್ಮೇಗೌಡ ಜನಮುಖಿ ಆಡಳಿತ ಪ್ರಶಸ್ತಿಗೆ ಆಯ್ಕೆಯಾಗಿರುವ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಡಾ.ಕೆ.ಜ್ಯೋತಿ, ಪ್ರಗತಿಪರ ಕೃಷಿ ಪ್ರಶಸ್ತಿ ಪುರಸ್ಕೃತರಾದ ದೇವರಹಳ್ಳಿಯ ಸುವರ್ಣ.ಎಸ್.ಬಿ ಅವರಿಗೆ ತಲಾ 25 ಸಾವಿರ ನಗದು ಪ್ರಶಸ್ತಿ ಫಲಕದೊಂದಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಯುಪಿಎಸ್‌ಸಿ ಪರೀಕ್ಷೆಯಲ್ಲಿ ಆಯ್ಕೆಯಾದ ನಾಗಮಂಗಲದ ಕರಡಹಳ್ಳಿಯ ಧನಂಜಯ ರಾಮಚಂದ್ರು, ಕೆಆರ್ ಪೇಟೆ ಅಂಬಿಗರಹಳ್ಳಿಯ ಮುತ್ತೇಶ್‌ಗೌಡ.ಎ.ಎಸ್ ಅವರನ್ನು ಜಿಲ್ಲಾಧಿಕಾರಿ ಡಾ.ಕುಮಾರ ಸನ್ಮಾನಿಸುವರು ಎಂದು ಹೇಳಿದರು.




ಪ್ರತಿಭಾ ಪುರಸ್ಕೃತ ವಿದ್ಯಾರ್ಥಿಗಳಾದ ಮಂಗಲ ಸ.ಪ.ಪೂ.ಕಾಲೇಜಿನ ಮಹೇಂದ್ರ.ಎಲ್.ಎನ್ ಮತ್ತು ಸರ್ಕಾರಿ ಪ್ರೌಢಶಾಲೆಯ ಪರೀಕ್ಷಿತ ಅವರುಗಳಿಗೆ 5000 ರೂ. ನಗದಿನೊಂದಿಗೆ ವಿದ್ಯಾರ್ಥಿ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಕಾವೇರಿ ನೀರಾವರಿ ನಿಗಮದ ನಿವೃತ್ತ ವ್ಯವಸ್ಥಾಪಕ ನಿರ್ದೇಶಕ ಟಿ.ತಿಮ್ಮೇಗೌಡ ಉಪಸ್ಥಿತರಿರುವರು.ಮಧ್ಯಾಹ್ನ 3:00 ಗಂಟೆಯಿಂದ ಜಿಲ್ಲೆಯ ಕಲಾವಿದರಿಂದ ಜನಪದ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ವಿವರಿಸಿದರು.

ಗೋಷ್ಠಿಯಲ್ಲಿ ಟ್ರಸ್ಟ್‌ನ ಕಾರ್ಯದರ್ಶಿ ಕೀಲಾರ ಕೃಷ್ಣೇಗೌಡ, ಜಂಟಿ ಕಾರ್ಯದರ್ಶಿ, ಹೆಚ್.ಆರ್. ಕನ್ನಿಕಾ, ಖಜಾಂಚಿ ಶಂಕರೇಗೌಡ, ಟ್ರಸ್ಟಿ ಡಿ.ಎಸ್. ದೇವರಾಜು ಇದ್ದರು.

## ಕಸಾಪ ಸಂಸ್ಥಾಪನಾ ದಿನಾಚರಣೆಯಲ್ಲಿ ಎಚ್.ಪಿ.ಮದನಗೌಡ ನುಡಿ

# ಭಾಷೆ ಬೆಳವಣಿಗೆಗೆ ಮಹನೀಯರ ಕೊಡುಗೆ ಅಪಾರ

**ಹಾಸನ:** ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಹಾಗೂ ಬಸವ ಜಯಂತಿ ಕಾರ್ಯಕ್ರಮವನ್ನು ನಗರದ ಸ್ಕೌಟ್ ಅಂಡ್ ಗೈಡ್ಸ್ ಭವನದಲ್ಲಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಎಚ್.ಪಿ.ಮದನಗೌಡ ಅವರು, ಕನ್ನಡ ಭಾಷೆ ಅತ್ಯಂತ ಶ್ರೀಮಂತವಾಗಿದ್ದು, ಎಂಟು ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದಿರುವ ಏಕೈಕ ಭಾಷೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಹೇಳಿದರು. ಅನೇಕ ಮಹನೀಯರ ಕೊಡುಗೆಯಿಂದ ಕನ್ನಡ ಸಾಹಿತ್ಯ ಪರಿಷತ್ತು ಇಂದು ಹೆಮ್ಮರವಾಗಿ ಬೆಳೆದಿದೆ ಎಂದು ಅಭಿಪ್ರಾಯಪಟ್ಟರು.

1915ರ ಮೇ 5ರಂದು ಸ್ಥಾಪಿತವಾದ ಕನ್ನಡ ಸಾಹಿತ್ಯ ಪರಿಷತ್ತು ಅಂದಿನಿಂದ ಇಂದಿನವರೆಗೂ ಸಾಹಿತ್ಯ, ನಾಡು–ನುಡಿ, ಸಂಸ್ಕೃತಿ ಹಾಗೂ ಭಾಷಾ ಅಭಿವೃದ್ಧಿಯಲ್ಲಿ ಅಪಾರ ಸೇವೆ ಸಲ್ಲಿಸಿದೆ ಎಂದು ಹೇಳಿದರು. ಪರಿಷತ್ತಿನ ಮೊದಲ ಅಧ್ಯಕ್ಷರಾಗಿದ್ದ ಎಚ್.ಬಿ. ನಂಜುಂಡಯ್ಯ ಅವರೊಂದಿಗೆ, ಸಂಸ್ಥಾಪನೆಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ದಿವಾನರಾಗಿದ್ದ ಸರ್ ಎಂ.ವಿಶ್ವೇಶ್ವರಯ್ಯ ಅವರ ಪಾತ್ರ ಅತ್ಯಂತ ಮಹತ್ವದ್ದಾಗಿತ್ತು ಎಂದು ಸ್ಮರಿಸಿದರು.

ಬಸವ ಜಯಂತಿಯ ಮಹತ್ವವನ್ನು ಉಲ್ಲೇಖಿಸಿದ ಅವರು, ಬಸವಣ್ಣ ಅವರ ತತ್ವಗಳು ಜಾತಿ, ಮತ, ಪಂಥಗಳನ್ನು ಮೀರಿ ಮಾನವೀಯ ಮೌಲ್ಯಗಳನ್ನು ಸಾರುತ್ತವೆ. ಇವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯ ಎಂದರು. ಶಿಕ್ಷಕ ಸೋಮಶೇಖರ್ ಮಾತನಾಡಿ, ಬಸವಣ್ಣನವರು 12ನೇ ಶತಮಾನದಲ್ಲಿ ವಚನಗಳ ಮೂಲಕ ಸಮಾಜ ಸುಧಾರಣೆಗೆ ಶ್ರಮಿಸಿದ ಮಹಾನ್ ಚಿಂತಕರು. ಅವರ ತತ್ವಗಳು ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿವೆ ಎಂದು ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಇಂತಹ ಕಾರ್ಯಕ್ರಮಗಳು ಯುವಪೀಳಿಗೆಗೆ ಪರಿಷತ್ತಿನ ಮಹತ್ವ ಹಾಗೂ ಶರಣರ ತತ್ವಗಳನ್ನು ಪರಿಚಯಿಸುವಲ್ಲಿ ಸಹಾಯಕವಾಗುತ್ತವೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ಕೌಟ್ ಅಂಡ್ ಗೈಡ್ಸ್ ಆಯುಕ್ತ ವೀರಭದ್ರಪ್ಪ ಅವರು, ಬಸವಣ್ಣನವರು ಸಮಾಜದಲ್ಲಿ ಸಮಾನತೆ ಮತ್ತು ಸಹಬಾಳ್ವೆಯನ್ನು ಸಾರಿದ ಮಹಾನ್ ವ್ಯಕ್ತಿ ಎಂದು ಅಭಿಪ್ರಾಯಪಟ್ಟರು.



ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಉಪ್ಪಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಸವ ಕೇಂದ್ರದ ಅಧ್ಯಕ್ಷ ಯು.ಎಸ್.ಬಸವರಾಜ್, ನ್ಯಾಯವಾದಿ ಎಂ.ಬಿ. ಗಿರಿಜಾಂಬಿಕ, ತಾಲ್ಲೂಕು ಅಧ್ಯಕ್ಷೆ ಗೀತಾ, ಕೋಶಾಧ್ಯಕ್ಷ ಎಚ್.ಎಸ್.ಬಸವರಾಜ್, ಮಾಜಿ ಅಧ್ಯಕ್ಷ ಉದಯರವಿ, ಸಾಹಿತಿ ಚಲಂ ಹಾಡ್ಲಹಳ್ಳಿ, ಶಿಕ್ಷಕ ಸೋಮಶೇಖರ್, ಹಿರಿಯ ಗೈಡ್ ಶಿಕ್ಷಕಿ ಎಚ್.ಜಿ. ಕಾಂಚನಮಾಲ, ರಾಜ್ಯ ಸಹಾಯಕ ಆಯುಕ್ತೆ ಎಚ್.ಎಂ.ಪ್ರಿಯಾಂಕ, ಮಮತ, ಬಾ.ನಂ. ಲೋಕೇಶ್, ಪ್ರಕಾಶ್, ಪರಮಶಿವಯ್ಯ, ರೇಖಾ ಪ್ರಕಾಶ್, ಮಮತಾ ಪಾಟೀಲ್, ಕವಯಿತ್ರಿ ಎಚ್.ಬಿ. ಚೂಡಾಮಣಿ, ಪದ್ಮಾವತಿ ವೆಂಕಟೇಶ್, ಚಿತ್ರಕಲಾವಿದ ಬಿ.ಎಸ್. ದೇಸಾಯಿ, ಸಾಹಿತಿ ಗೊರೂರು ಅನಂತರಾಜು, ಗಣೇಶ್ ಉಪಸ್ಥಿತರಿದ್ದರು.

# ಕೇಂದ್ರ ರೈಲ್ವೆ -ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ
# ಬೆಂ-ಮೈ ಒಡೆಯರ್ ಎಕ್ಸ್‌ಪ್ರೆಸ್‌ಗೆ ರಾಮನಗರ ನಿಲುಗಡೆ



**ರಾಮನಗರ:** ಬೆಂಗಳೂರು–ಮೈಸೂರು ರೈಲು ಮಾರ್ಗದಲ್ಲಿ ನಾಲ್ಕು ಪಥದ ರೈಲು ಹಳಿ ಅಭಿವೃದ್ಧಿ ಕಾಮಗಾರಿಯನ್ನು ಶೀಘ್ರದಲ್ಲೇ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ಮಂಗಳವಾರ ರಾಮನಗರ ರೈಲು ನಿಲ್ದಾಣದಲ್ಲಿ ಕೆ.ಎಸ್.ಆರ್. ಬೆಂಗಳೂರು–ಮೈಸೂರು ಒಡೆಯರ್ ಎಕ್ಸ್‌ಪ್ರೆಸ್ ರೈಲಿಗೆ ನಿಲುಗಡೆ ವ್ಯವಸ್ಥೆಗೆ ಹಸಿರು ನಿಶಾನೆ ತೋರಿಸಿ ಮಾತನಾಡಿದ ಅವರು, ಈ ನಿಲುಗಡೆಯಿಂದ ಜಿಲ್ಲೆಯ ಸಾವಿರಾರು ಪ್ರಯಾಣಿಕರಿಗೆ ಅನುಕೂಲವಾಗಲಿದ್ದು, ರಾಮನಗರ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ಅಭಿವೃದ್ಧಿಗೆ ಇದು ನೆರವಾಗಲಿದೆ ಎಂದರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಅವರ ಪ್ರಯತ್ನದಿಂದ ಈ ರೈಲು ನಿಲುಗಡೆ ಸಾಧ್ಯವಾಗಿದೆ ಎಂದು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕಾಗಿ 64 ಮೇಲ್ಸೇತುವೆ ಮತ್ತು ಕೆಳಸೇತುವೆಗಳ ನಿರ್ಮಾಣಕ್ಕೆ 2,900 ಕೋಟಿ ರೂಪಾಯಿ ಮೀಸಲಿಡಲಾಗಿದೆ. ಪ್ರತಿವರ್ಷ ಕರ್ನಾಟಕದ ರೈಲ್ವೇ ಅಭಿವೃದ್ಧಿಗೆ ಕೇಂದ್ರ ಬಜೆಟ್‌ನಲ್ಲಿ 700 ಕೋಟಿಗೂ ಅಧಿಕ ಅನುದಾನ ನೀಡಲಾಗುತ್ತಿದೆ ಎಂದು ಹೇಳಿದರು.

ಕಳೆದ 11 ವರ್ಷಗಳಲ್ಲಿ ರೈಲ್ವೇ ಇಲಾಖೆಯಲ್ಲಿ ಸಾವಿರಾರು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ದೀರ್ಘಕಾಲದಿಂದ ನನೆಗುದಿಗೆ ಬಿದ್ದಿದ್ದ ಹಲವು ಯೋಜನೆಗಳಿಗೆ ಪುನರ್ಜೀವ ನೀಡಲಾಗಿದೆ. ಪ್ರಸ್ತುತ ದೇಶದ ಶೇಕಡಾ 97ರಷ್ಟು ರೈಲು ಮಾರ್ಗಗಳು ವಿದ್ಯುತೀಕರಣಗೊಂಡಿದ್ದು, ಇನ್ನೆರಡು ತಿಂಗಳಲ್ಲಿ ಶೇಕಡಾ 100ರ ಗುರಿ ಸಾಧಿಸಲಾಗುವುದು ಎಂದು ತಿಳಿಸಿದರು.

ರಾಮನಗರ ರೈಲು ನಿಲ್ದಾಣವನ್ನು 11 ಕೋಟಿ ರೂಪಾಯಿ ವೆಚ್ಚದಲ್ಲಿ, ಚನ್ನಪಟ್ಟಣ ರೈಲು ನಿಲ್ದಾಣವನ್ನು 12 ಕೋಟಿ ರೂಪಾಯಿ ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲಾಗುತ್ತಿದೆ. ಬಿಡದಿ ರೈಲು ನಿಲ್ದಾಣವನ್ನು ಸಹ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಕೋಲಾರಕ್ಕೆ ಹೊಸ ರೈಲು ಸಂಪರ್ಕ ಕಲ್ಪಿಸಲು ಹೊಸಕೋಟೆ–ಕೋಲಾರ ಮಾರ್ಗದ 43 ಕಿಲೋಮೀಟರ್ ರೈಲು ಮಾರ್ಗ ಅಭಿವೃದ್ಧಿಗೆ ಕಾರ್ಯಯೋಜನೆ ರೂಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕರ್ನಾಟಕದಲ್ಲಿ ಈಗಾಗಲೇ 13 ವಂದೇ ಭಾರತ್ ರೈಲುಗಳು ಸಂಚರಿಸುತ್ತಿದ್ದು, ಬೆಂಗಳೂರು–ಮಂಗಳೂರು ವಂದೇ ಭಾರತ್ ರೈಲನ್ನು ಶೀಘ್ರದಲ್ಲೇ ಆರಂಭಿಸಲಾಗುವುದು ಎಂದು ಘೋಷಿಸಿದರು.

ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಮಾತನಾಡಿ, ಹಲವು ವರ್ಷಗಳ ಹೋರಾಟದ ಫಲವಾಗಿ ಒಡೆಯರ್ ಎಕ್ಸ್‌ಪ್ರೆಸ್ ರೈಲು ನಿಲುಗಡೆ ಸಾಧ್ಯವಾಗಿದೆ ಎಂದು ಹೇಳಿದರು. ರಾಮನಗರದಲ್ಲಿ ಇನ್ನೂ ಹಲವು ಮೇಲ್ಸೇತುವೆಗಳ ಅಗತ್ಯವಿದ್ದು, ರೈಲು ನಿಲ್ದಾಣದಲ್ಲಿ ಎಸ್ಕಲೇಟರ್ ಹಾಗೂ ವಿಶ್ರಾಂತಿ ಗೃಹ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ಸಂಸದ ಡಾ.ಸಿ.ಎನ್.ಮಂಜುನಾಥ್ ಮಾತನಾಡಿ, ದಶಕಗಳ ಕನಸಾಗಿದ್ದ ಈ ನಿಲುಗಡೆ ಇಂದು ನನಸಾಗಿದೆ. ಬೆಂಗಳೂರು–ಮೈಸೂರು ನಡುವೆ ಪ್ರತಿದಿನ 47 ರೈಲುಗಳು ಸಂಚರಿಸುತ್ತಿದ್ದು, ಸೂಪರ್‌ಫಾಸ್ಟ್ ರೈಲಿಗೆ ರಾಮನಗರದಲ್ಲಿ ನಿಲುಗಡೆ ಕಲ್ಪಿಸುವುದು ಐತಿಹಾಸಿಕ ನಿರ್ಧಾರ ಎಂದರು.

ಅಮೃತ್ ಭಾರತ್ ಯೋಜನೆಯಡಿ ರಾಮನಗರ ರೈಲು ನಿಲ್ದಾಣವನ್ನು ಮೇಲ್ದರ್ಜೆಗೇರಿಸುವ ಕಾಮಗಾರಿ ಸೆಪ್ಟೆಂಬರ್ ವೇಳೆಗೆ ಪೂರ್ಣಗೊಳ್ಳಲಿದ್ದು, ಲೋಕಾರ್ಪಣೆಗೆ ಸಿದ್ಧವಾಗಲಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ, ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಸೇರಿದಂತೆ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಸುದೀರ್ಘ ಕಾಯಿಲೆಗಳಿಗೆ ಸಮಗ್ರ ಪರಿಹಾರ: ಗೆಹ್ಲೋಟ್
# ಹೋಮಿಯೋಪತಿ ಜೀವನಶೈಲಿ ಬದಲಿಸುತ್ತೆ



**ಬೆಂಗಳೂರು:** ಜೀವನಶೈಲಿ ಕಾಯಿಲೆಗಳು, ಮಾನಸಿಕ ಒತ್ತಡ ಮತ್ತು ದೀರ್ಘಕಾಲದ ರೋಗಗಳು ಹೆಚ್ಚುತ್ತಿರುವ ಇಂದಿನ ಸಂದರ್ಭದಲ್ಲಿ ಹೋಮಿಯೋಪತಿ ಸಮಗ್ರ ಮತ್ತು ಶಾಶ್ವತ ಪರಿಹಾರವನ್ನು ನೀಡಬಲ್ಲ ವೈದ್ಯಕೀಯ ಪದ್ಧತಿ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟರು.

ಹೋಮಿಯೋಪತಿ ಫೌಂಡೇಶನ್ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸಂಯುಕ್ತವಾಗಿ ಆಯೋಜಿಸಿದ್ದ ವಿಶ್ವ ಹೋಮಿಯೋಪತಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ ಹೋಮಿಯೋಪತಿ ಶಕ್ತಿಶಾಲಿ ಮತ್ತು ಜನಪ್ರಿಯ ವೈದ್ಯಕೀಯ ಪದ್ಧತಿಯಾಗಿ ರೂಪುಗೊಂಡಿದ್ದು, ಲಕ್ಷಾಂತರ ಜನರು ಇದರ ಪ್ರಯೋಜನ ಪಡೆಯುತ್ತಿದ್ದಾರೆ. ಕೇಂದ್ರ ಸರ್ಕಾರದ ಆಯುಷ್ ಸಚಿವಾಲಯ ಈ ಕ್ಷೇತ್ರದಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ ಎಂದು ಹೇಳಿದರು.

ಪ್ರತಿ ವರ್ಷ ಏಪ್ರಿಲ್ 10ರಂದು ಆಚರಿಸಲ್ಪಡುವ ವಿಶ್ವ ಹೋಮಿಯೋಪತಿ ದಿನವು ಮಹಾನ್ ವೈದ್ಯ ಸ್ಯಾಮ್ಯುಯೆಲ್ ಹ್ಯಾನೆಮನ್ ಅವರ ಜನ್ಮ ದಿನಾಚರಣೆಯ ಅಂಗವಾಗಿದೆ. ಹೋಮಿಯೋಪತಿ ದೇಹ, ಮನಸ್ಸು ಮತ್ತು ಆತ್ಮದ ಸಮತೋಲನಕ್ಕೆ ಒತ್ತು ನೀಡುವ ಸಮಗ್ರ ವೈದ್ಯಕೀಯ ವಿಧಾನವಾಗಿದ್ದು, ಪ್ರಕೃತಿಯಲ್ಲೇ ರೋಗ ನಿವಾರಣೆಯ ಮಾರ್ಗಗಳಿವೆ ಎಂಬ ತತ್ವದ ಮೇಲೆ ಆಧಾರಿತವಾಗಿದೆ ಎಂದು ವಿವರಿಸಿದರು.

ಸಣ್ಣ ಪ್ರಮಾಣದ ಔಷಧಿಗಳು ದೇಹದ ನೈಸರ್ಗಿಕ ರೋಗನಿರೋಧಕ ಶಕ್ತಿಯನ್ನು ಉತ್ತೇಜಿಸಿ, ಸ್ವಯಂ ಗುಣಮುಖತೆಯನ್ನು ಸಾಧಿಸಲು ನೆರವಾಗುತ್ತವೆ. ಇಂದಿನ ಆಧುನಿಕ ವೈದ್ಯಕೀಯ ಪ್ರಗತಿಯ ನಡುವೆಯೂ ಜೀವನಶೈಲಿ ಕಾಯಿಲೆಗಳು ಹೆಚ್ಚುತ್ತಿರುವುದು ಗಮನಾರ್ಹವಾಗಿದ್ದು, ಇಂತಹ ಸಂದರ್ಭಗಳಲ್ಲಿ ಹೋಮಿಯೋಪತಿಯ ಸಮತೋಲಿತ ವಿಧಾನವು ಆರೋಗ್ಯದ ಕಡೆಗೆ ದಾರಿ ತೋರಿಸುತ್ತದೆ ಎಂದು ಹೇಳಿದರು.

ಸುಸ್ಥಿರ ಆರೋಗ್ಯಕ್ಕಾಗಿ ಹೋಮಿಯೋಪತಿ ಎಂಬ ಈ ವರ್ಷದ ಧ್ಯೇಯವಾಕ್ಯ ಅತ್ಯಂತ ಅರ್ಥಪೂರ್ಣವಾಗಿದೆ. ಸುಸ್ಥಿರ ಆರೋಗ್ಯ ಎಂದರೆ ಕೇವಲ ರೋಗಮುಕ್ತ ಜೀವನವಲ್ಲ; ದೀರ್ಘಕಾಲೀನ, ಪರಿಸರ ಸ್ನೇಹಿ ಮತ್ತು ಎಲ್ಲರಿಗೂ ಲಭ್ಯವಾಗುವ ಆರೋಗ್ಯ ವ್ಯವಸ್ಥೆಯಾಗಿದೆ. ಹೋಮಿಯೋಪತಿ ಕಡಿಮೆ ವೆಚ್ಚದ, ವ್ಯಕ್ತಿ ಕೇಂದ್ರಿತ ಹಾಗೂ ನೈಸರ್ಗಿಕ ಸಂಪನ್ಮೂಲಗಳ ಸಮತೋಲನ ಬಳಕೆಯನ್ನು ಉತ್ತೇಜಿಸುವ ಪದ್ಧತಿಯಾಗಿದ್ದು, ಈ ದೃಷ್ಟಿಯಲ್ಲಿ ಮಹತ್ವದ್ದು ಎಂದು ಹೇಳಿದರು.

ಹೋಮಿಯೋಪತಿ ಕ್ಷೇತ್ರದಲ್ಲಿ ಸಂಶೋಧನೆ, ನವೀನತೆ ಹಾಗೂ ಆಧುನಿಕ ತಂತ್ರಜ್ಞಾನಗಳ ಬಳಕೆ ಹೆಚ್ಚಳ ಅಗತ್ಯವಾಗಿದೆ. ಡಿಜಿಟಲ್ ಆರೋಗ್ಯ ಮತ್ತು ಕೃತಕ ಬುದ್ಧಿಮತ್ತೆಯ ನೆರವಿನಿಂದ ಈ ಪದ್ಧತಿಯನ್ನು ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಬಲಪಡಿಸಬಹುದು ಎಂದು ಅವರು ಅಭಿಪ್ರಾಯಪಟ್ಟರು.

ಹೋಮಿಯೋಪತಿ ವಿದ್ಯಾರ್ಥಿಗಳು ಈ ಕ್ಷೇತ್ರದ ಭವಿಷ್ಯವಾಗಿದ್ದು, ಸಾಂಪ್ರದಾಯಿಕ ಜ್ಞಾನವನ್ನು ಆಧುನಿಕ ವಿಜ್ಞಾನದೊಂದಿಗೆ ಸಂಯೋಜಿಸಿ, ಹೊಸ ಸಂಶೋಧನೆಗಳ ಮೂಲಕ ಜಾಗತಿಕ ಮನ್ನಣೆ ಪಡೆಯುವ ಅವಕಾಶವಿದೆ ಎಂದು ಪ್ರೇರೇಪಿಸಿದರು.

ಗ್ರಾಮೀಣ ಹಾಗೂ ದೂರದ ಪ್ರದೇಶಗಳಲ್ಲಿ ಹೋಮಿಯೋಪತಿಯ ಸೇವೆಯನ್ನು ವಿಸ್ತರಿಸುವುದು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಮತ್ತು ಎಲ್ಲ ವರ್ಗದ ಜನರಿಗೆ ಕೈಗೆಟುಕುವ ಚಿಕಿತ್ಸೆಯನ್ನು ಒದಗಿಸುವುದು ನಮ್ಮ ಸಾಮಾಜಿಕ ಜವಾಬ್ದಾರಿ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಹೋಮಿಯೋಪತಿ ಫೌಂಡೇಶನ್ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಕಾರ್ಯಚಟುವಟಿಕೆಗಳನ್ನು ಅವರು ಪ್ರಶಂಸಿಸಿದರು. ಹೋಮಿಯೋಪತಿ ಕೇವಲ ವೈದ್ಯಕೀಯ ಪದ್ಧತಿಯಾಗಿರದೇ, ಪ್ರಕೃತಿಯೊಂದಿಗೆ ಸಮತೋಲನ ಸಾಧಿಸುವ ಜೀವನ ತತ್ವಶಾಸ್ತ್ರವೂ ಆಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿ.ಕೆ.ರಾಮಮೂರ್ತಿ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್, ಕುಲಪತಿ ಡಾ.ಬಿ.ಸಿ.ಭಗವಾನ್, ಕರ್ನಾಟಕ ಹೋಮಿಯೋಪತಿ ಮಂಡಳಿ ಅಧ್ಯಕ್ಷ ನಾಡೋಜ ಡಾ.ಬಿ.ಟಿ. ರುದ್ರೇಶ್, ರಿಜಿಸ್ಟ್ರಾರ್ ಅರ್ಜುನ್ ಒಡ್ಯೆರ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಶಾಶ್ವತ ಸತ್ಯದ ಹೊಳಹಿನಲ್ಲಿ



| ವೀಣಾ ಹೇಮಂತ್‌ಗೌಡ ಪಾಟೀಲ್

ಅದು 2007 ರ ಸಮಯ. ಎಪಿಜೆ ಅಬ್ದುಲ್ ಕಲಾಂ ಅವರು ರಾಷ್ಟ್ರಪತಿಯಾಗಿ ತಮ್ಮ ಅವಧಿಯನ್ನು ಪೂರೈಸುವ ಅಂತಿಮ ದಿನಗಳು ಅವಾಗಿದ್ದವು. ಇಡೀ ದೇಶದ ಜನತೆ ಅಬ್ದುಲ್ ಕಲಾಂರನ್ನು ಅವರ ಬುದ್ಧಿಮತ್ತೆಗೆ, ವೈಜ್ಞಾನಿಕತೆಗೆ ಮಾತ್ರ ಗೌರವ ನೀಡುತ್ತಿರಲಿಲ್ಲ ಬದಲಾಗಿ ಅವರು ಕಲಾಮ್ ಅವರನ್ನು ಇನ್ನಿಲ್ಲದಂತೆ ಪ್ರೀತಿಸುತ್ತಿದ್ದರು.

ಜನಸಾಮಾನ್ಯರಿಂದ ಹಿಡಿದು ರಾಜಕೀಯ ಧುರೀಣರವರೆಗೆ ಪ್ರತಿಯೊಬ್ಬರ ಮನಸ್ಥಿತಿ ಅಬ್ದುಲ್ ಕಲಾಂ ಅವರು ಮತ್ತೊಮ್ಮೆ ರಾಷ್ಟ್ರಪತಿಯಾಗಿ ಅಧಿಕಾರವನ್ನು ಸ್ವೀಕರಿಸಲಿ ಎಂಬುದೇ ಆಗಿತ್ತು. ಈ ನಿಟ್ಟಿನಲ್ಲಿ ಅವರ ಮನ ಒಲಿಸುವ ಪ್ರಯತ್ನಗಳು ಕೂಡ ನಡೆದಿದ್ದವು.

ಅಂದಿನ ಪ್ರಧಾನಿಯಾಗಿದ್ದ ಡಾ. ಮನಮೋಹನ್ ಸಿಂಗ್ ಅವರು ಕೂಡ ಅಬ್ದುಲ್ ಕಲಾಂ ಅವರನ್ನು ಅತ್ಯಂತ ಗೌರವಿಸುತ್ತಿದ್ದರು. ಅವರು ಅಬ್ದುಲ್ ಕಲಾಂ ಅವರನ್ನು ವೈಯಕ್ತಿಕವಾಗಿ ಭೇಟಿಯಾಗಿ 'ತಾವು ಮತ್ತೊಮ್ಮೆ ರಾಷ್ಟ್ರಪತಿಯಾಗಿ ಕಾರ್ಯನಿರ್ವಹಿಸಲು ಒಪ್ಪಿಕೊಳ್ಳಿ ನಮ್ಮೆಲ್ಲರ ಬೆಂಬಲ ತಮಗಿದೆ' ಎಂದು ಅತ್ಯಂತ ಪ್ರಾಮಾಣಿಕತೆಯಿಂದ ಗೌರವಪೂರ್ವಕವಾಗಿ ವಿನಂತಿಸಿಕೊಂಡರು.

ರಾಜಕಾರಣದಲ್ಲಿ ಬಹುತೇಕ ಜನರು ಅಧಿಕಾರ, ಗೌರವ ಮತ್ತು ಮತ್ತೊಂದು ಬಾರಿ ದೇಶದ ಅತ್ಯುನ್ನತ ಹುದ್ದೆಯಲ್ಲಿ ಕುಳಿತುಕೊಳ್ಳುವ ಅವಕಾಶ ದೊರೆತರೆ ಬೇಡ ಎಂದು ಹೇಳುವುದಿಲ್ಲ ಅಲ್ಲವೇ ? ಆದರೆ ಕಲಾಂ ಅವರು ಈ ಉತ್ತರಿಸಿದ ರೀತಿ ನಮ್ಮ ಆತ್ಮಸಾಕ್ಷಿಯನ್ನು ನಾವು ಮಾಡಿಕೊಳ್ಳುವ ಪ್ರೀತಿಯಲ್ಲಿ ಗಾಢವಾಗಿ ತಟ್ಟುತ್ತದೆ.

ಅತ್ಯಂತ ಶಾಂತವಾಗಿ ಅವರು 'ನಾನು ರಾಷ್ಟ್ರಪತಿ ಭವನಕ್ಕೆ ಮರಳಿ ಬರಲು ಒಪ್ಪಿಕೊಳ್ಳುವೆ, ಆದರೆ ಇದಕ್ಕೆ ಬಹುತೇಕ ಎಲ್ಲರ ಸರ್ವಾನುಮತದ ಒಪ್ಪಿಗೆ ಬೇಕು. ರಾಷ್ಟ್ರಪತಿಯಂತಹ ಗೌರವಾನ್ವಿತ ಹುದ್ದೆಯು ರಾಜಕೀಯ ಬಿಕ್ಕಟ್ಟಿಗೆ ಕಾರಣವಾಗಬಾರದು ಎಂಬುದು ನನ್ನ ಆಶಯವಾಗಿದೆ' ಎಂದು ಹೇಳಿದರು.

ನಿಜ ! ರಾಷ್ಟ್ರಪತಿಯಂತಹ ಗೌರವಾನ್ವಿತ ಹುದ್ದೆಯು ರಾಜಕೀಯ ಬಿಕ್ಕಟ್ಟಿಗೆ ಕಾರಣವಾಗಬಾರದು ಎಂದು ಕೋಟ್ಯಾಂತರ ಜನರಿಂದ ಪ್ರೀತಿಸಲ್ಪಟ್ಟ, ಗೌರವಿಸಲ್ಪಟ್ಟ ವ್ಯಕ್ತಿ ಮನಸ್ಸು ಮಾಡಿದ್ದರೆ ಮತ್ತೆ ಅಧಿಕಾರದಲ್ಲಿ ಉಳಿಯಬಹುದಿತ್ತು, ಆದರೆ ಅವರು ರಾಷ್ಟ್ರಪತಿ ಭವನದಿಂದ ನಿರ್ಗಮಿಸುವುದನ್ನು ಆಯ್ದುಕೊಂಡರು.

ಏಕೆಂದರೆ ಅವರಿಗೆ ತಾವು ರಾಷ್ಟ್ರಪತಿಯಾಗುವ ಗೌರವಕ್ಕಿಂತಲೂ ರಾಷ್ಟ್ರಪತಿ ಹುದ್ದೆಯ ಘನತೆ ಹೆಚ್ಚಿನದು ಎಂಬ ಅರಿವಿತ್ತು.

ತಾವು ರಾಷ್ಟ್ರಪತಿ ಹುದ್ದೆಯಲ್ಲಿ ಮುಂದುವರೆಯಲು ಎಲ್ಲ ಪಕ್ಷಗಳ ಸಂಪೂರ್ಣ ಸಹಮತವಿಲ್ಲ ಎಂಬ ಅರಿವಾದಾಗ ಯಾವುದೇ ಹಿಂಜರಿಕೆ ಇಲ್ಲದೆ, ಬೇಸರ ಇಲ್ಲವೇ ಪಶ್ಚಾತ್ತಾಪ ಪಡದೆ ಅಧಿಕಾರದ ಚುಕ್ಕಾಣಿಗೆ ಜೋತು ಬೀಳದೆ ಅತ್ಯಂತ ಶಾಂತವಾಗಿ ಅವರು ಅಲ್ಲಿಂದ ನಿರ್ಗಮಿಸಿದರು.

ಯಾವುದೇ ನಾಟಕೀಯತೆ, ಓಲೈಕೆ ಹಾಗೂ ಅಧಿಕಾರದ ಹಸಿವು ಅಲ್ಲಿರಲಿಲ್ಲ... ಸಂಪೂರ್ಣವಾದ ಮೌನ ಮತ್ತು ಘನತೆಯಿಂದ ಅವರು ತಮ್ಮ ಹುದ್ದೆಯಿಂದ ಕೆಳಗಿಳಿದರು.

ಇದು ಅಂದಿನ ಪ್ರಧಾನಿ ಡಾಕ್ಟರ್ ಮನಮೋಹನ್ ಸಿಂಗ್ ಅವರ ಮೇಲೆ ಬಹಳ ಪ್ರಭಾವ ಬೀರಿತು. ಮುಂದೆ ಅವರು ರಾಷ್ಟ್ರಪತಿಯಾಗಿದ್ದ ಅಬ್ದುಲ್ ಕಲಾಮ್ ಅವರ ಜೊತೆಗೆ ಕಾರ್ಯನಿರ್ವಹಿಸಿದ ಗೌರವಯುತ ಬದುಕು ತಮ್ಮದಾಗಿತ್ತು ಎಂದು ಬರೆದುಕೊಂಡಿದ್ದಾರೆ. ಕಾರಣ ಅಬ್ದುಲ್ ಕಲಾಮ್ ಅವರು ಮುಖ್ಯವಾದ ಫೈಲ್ಗಳಲ್ಲಿನ ಕಾಗದ ಪತ್ರ ಹಾಕುವ ಸೋ ಕಾಲ್ಡ ರಬ್ಬರ್ ಸ್ಟ್ಯಾಂಪ್ ರಾಷ್ಟ್ರಪತಿಯಾಗಿರಲಿಲ್ಲ. ಅವರೊಬ್ಬ ಶಿಕ್ಷಕ, ಮಾರ್ಗದರ್ಶಕ ಹಾಗೂ ಸಲಹಾಕಾರ ಕೂಡ ಆಗಿದ್ದರು.

ಪ್ರತಿಯೊಂದು ಮಹತ್ವದ ನಿರ್ಣಯದ ಹಿಂದಿನ ಪರಿಣಾಮಗಳ ಅರಿವನ್ನು ಹೊಂದಿದ ವ್ಯಕ್ತಿ ಅವರಾಗಿದ್ದರು.

ಇಂದು ಜನರು ತಮ್ಮ ಬದುಕಿನಲ್ಲಿ ಮುಂದೆ ಸಾಗಲು ಯಶಸ್ಸನ್ನು ಪಡೆಯಲು ಬಳಸುವ ಶಾರ್ ಕಟ್ ಗಳನ್ನು ನೋಡಿದಾಗ ಮನಸ್ಸಿಗೆ ರೇಜಿಗೆಯಾಗುತ್ತದೆ. ಅಧಿಕಾರಕ್ಕಾಗಿ ತಮ್ಮ ವೈಯುಕ್ತಿಕ ಸಂಬಂಧಗಳನ್ನು, ಮೌಲ್ಯಗಳನ್ನು ಹಾಗೂ ತಮ್ಮನ್ನು ತಾವೇ ಕಳೆದುಕೊಳ್ಳುವ ಜನರನ್ನು ನೋಡಿದಾಗ ಕಲಾಂರವರು ಏರಿದ ಎತ್ತರದ ಅರಿವಾಗುತ್ತದೆ.


ಅತ್ಯಂತ ವಿಭಿನ್ನವಾದ ವ್ಯಕ್ತಿತ್ವ ಕಲಾಂ ಅವರದಾಗಿದ್ದು ಅವರ ಈ ಕಥೆ ನಾವು ನಿಧಾನವಾಗಿ ಮರೆಯುತ್ತಿರುವ ಮೌಲ್ಯವನ್ನು ನೆನಪಿಸುವಂತಹದ್ದಾಗಿದೆ.

ಅಧಿಕಾರ, ಹಣ, ಅಂತಸ್ತು ಎಂದಿಗೂ ಶಾಶ್ವತವಲ್ಲ. ಆದರೆ ನಿಮ್ಮ ವ್ಯಕ್ತಿತ್ವ, ನೀವು ನಂಬಿಕೊಂಡಿರುವ ಮೌಲ್ಯಗಳು ಹಾಗೂ ನಿಮ್ಮ ಸದ್ಭಾವಗಳು ನಿಮ್ಮೊಂದಿಗೆ ಸದಾ ಇರುತ್ತವೆ.

ಅತ್ಯಂತ ವಿರಳವಾದರೂ ಶಕ್ತಿಯುತವಾದ ಪಾಠವೊಂದನ್ನು ನಾವು ಕಲಾಂ ಅವರ ಬದುಕಿನ ಈ ಘಟನೆಯಿಂದ ಕಲಿಯಬಹುದು. ಹಠದಿಂದ, ಮೊಂಡುತನದಿಂದ, ವಿಪರೀತದ ಧೋರಣೆಯ ಭಾವದಿಂದ ಅಧಿಕಾರದ ಕುರ್ಚಿಯಲ್ಲಿ ಕುಳಿತುಕೊಳ್ಳುವುದಕ್ಕಿಂತ ಗೌರವವನ್ನು ಹೊಂದಿರುವಾಗಲೇ ಅಧಿಕಾರವನ್ನು ತೊರೆಯುವುದು ಒಳ್ಳೆಯದು ಅಲ್ಲವೇ ?

ಬಹುಷ: ಆ ಕಾರಣಕ್ಕಾಗಿಯೇ ಡಾಕ್ಟರ್ ಎ ಪಿ ಜೆ ಅಬ್ದುಲ್ ಕಲಾಮ್ ಅವರು ರಾಷ್ಟ್ರಪತಿ ಭವನದಲ್ಲಿ ಮಾತ್ರ ಇರಲಿಲ್ಲ ಬದಲಾಗಿ ಇಡೀ ರಾಷ್ಟ್ರದ ಜನತೆಯ ಹೃದಯದಲ್ಲಿ ಸ್ಥಾನ ಪಡೆದಿದ್ದಾರೆ ಏನಂತೀರಾ ಸ್ನೇಹಿತರೆ?






# ಸಾಂತ್ವನದ ನುಡಿಗಳು




| ಗಿರಿಜಾ.ಎಸ್. ದೇಶಪಾಂಡೆ. ಬೆಂಗಳೂರು.

ನಮ್ಮ ನೋವನ್ನು ಹಂಚಿಕೊಳ್ಳಲು ಇನ್ನೊಬ್ಬರು ನಮಗೆ ಜೊತೆಯಾಗಿರಬೇಕು ಎನ್ನುವ ಅತೀ ನಿರೀಕ್ಷೆಗಿಂತ ದೂರವಿರುವದು ಒಳಿತು. ಒಂದು ಮರ ಬೃಹತ್ ಆಗಿ ಬೆಳೆದು ಅದಕ್ಕೆ ರಂಬೆ,ಕೊಂಬೆಗಳಿದ್ದರೂ ಅದು ನಂಬಿರುವದು ಬೇರನ್ನು.ನಾವೂ ಕೂಡ ನಮ್ಮ ಜೀವನದಲ್ಲಿ ಮರದಂತೆ ಇರುವದು ಕಲಿಯಬೇಕಿದೆ.







ಸಂಬಂಧಗಳಲ್ಲಿ ಜಗಳ,ಮನಸ್ತಾಪ,ಮುನಿಸು ಬರುವದು ಸಹಜ.ಒಮ್ಮೊಮ್ಮೆ ನಾವು ಅತೀ ಆತ್ಮೀಯರೊಂದಿಗೆ ಜಗಳಮಾಡಿಕೊಂಡಾಗ ಸಾಂತ್ವನದ ಮಾತುಗಳಿಗೆ ಹಂಬಲಿಸುತ್ತೇವೆ .ಬೇರೆಯವರೊಂದಿಗೆ ಕ್ಷಮೆಯ ನಿರೀಕ್ಷೆಯ ಜೊತೆಗೆ ಸಮಾಧಾನದ ಮಾತುಗಳನ್ನು ಕೇಳಲು ಹಾತೊರೆಯುತ್ತೇವೆ.ಜಗಳದ ಕೋಪ ತಣಿಯುವ ತನಕ ಕಾಯುವ ತಾಳ್ಮೆ ನಮಗಿರುವದಿಲ್ಲ.ಕ್ಷಣಿಕವಾಗಿ ನಮಗೆ ಸಾಂತ್ವನದ ಮಾತು ಬೇಕು ಎಂದು ಹಾತೊರೆಯುತ್ತೇವೆ.ಅದೂ ನಾವು ಪ್ರೀತಿಸುವ ವಸ್ತುವಿನಿಂದ ದೊರೆತರೆ ಮನಸ್ಸಿಗೆ ಇನ್ನಷ್ಟು ಹಿತವೆಂಬ ನಮ್ಮ ಭಾವನೆ.ಮುನಿಸು ಮುಂದುವರೆದಾಗ ನಮಗೆ ನಾವೇ ಸಂತೈಸಿಕೊಳ್ಳಲು ದಾರಿ ಹುಡುಕುತ್ತೇವೆ.ಆ ದಾರಿಯಲ್ಲಿ ಸಾಗಿದಾಗ ನಮಗೆ ಸಿಗುವದು ಸಾಲುಗಳು.ಬೇಜಾರಾದಾಗ ಇನ್ನೊಬ್ಬರ ಮುಂದೆ ಹೇಳಿಕೊಳ್ಳಲಾಗದ ಸಂದಿಗ್ಧತೆಯಲ್ಲಿದ್ದಾಗ ನಾವು ಇನ್ಯಾರೋ ಬರೆದ ಹಿತನುಡಿಗಳ ಕಡೆಗೆ ಮೊರೆ ಹೋಗುತ್ತೇವೆ.ಜಾಲತಾಣಗಳ ಹಲವು ವೇದಿಕೆಯಲ್ಲಿ ಸಿಗುವ ಸ್ಫೂರ್ತಿಯ ಹಿತವಚನದ ಮಾತುಗಳನ್ನು ಹುಡುಕುತ್ತೇವೆ.ಆ ಮಾತುಗಳನ್ನು ನಮಗೆ ನಾವು ಅನ್ವಯಿಸಿಕೊಳ್ಳುತ್ತೇವೆ.ಆಗ ನೊಂದಿರುವ ಮನಕೆ ಆ ಸಾಲುಗಳು ಅರೆಕಾಲಿಕ ಉಪಶಮನದಂತೆ ಭಾಸವಾಗುತ್ತವೆ.ನಮ್ಮನ್ನು ನೋಯಿಸಿದವರು ನೋಡಲಿ ಎನ್ನುವ ಕಾರಣಕ್ಕೆ ಸ್ಟೇಟಸನಲ್ಲಿ ಬರೆದುಕೊಳ್ಳುತ್ತೇವೆ.ಅವರು ನೋಡಿದ ತಕ್ಷಣ ಒಂದು ರೀತಿಯ ನಿಟ್ಟುಸಿರು .ಸಾಲುಗಳು ಸಾಂತ್ವನ ನೀಡಿದ ಸಂತೃಪ್ತಿ ತೆರೆಮರೆಯಲ್ಲಿ ನಮ್ಮನ್ನು ಆವರಿಸಿಬಿಡುತ್ತದೆ.ಸಂವಹನ ಬದುಕಿನ ಅವಿಭಾಜ್ಯ ಎಂದು ಭಾವಿಸುವ ನಾವುಗಳೇ ಅಕ್ಷರಗಳ ಸಾಲಿಗೆ ನಮ್ಮನ್ನು ನಾವು ಸಂತೈಸಿಕೊಳ್ಳುತ್ತೇವೆ.ಮನುಷ್ಯ ಭಾವುಕ ಜೀವಿ.ಅವನ ಭಾವುಕತೆ ಬದಲಾಯಿಸುವ ಅಲಿಖಿತ ಶಕ್ತಿ ಬರಹ ಮತ್ತು ರೂಪದ ಅಕ್ಷರಕ್ಕಿದೆ. ಜೀವನದ ಸುಖದುಃಖಗಳಲ್ಲಿ ಯಾರೋ,ಎಂದೋ ಬರೆದ ಸಾಲುಗಳು ಪ್ರಸ್ತುತವಾಗಿ ಬಿಡುತ್ತವೆ.


ಬೇಸರವಾದಾಗ ಖುಷಿಯಾದಾಗ ಮಾತ್ರವಲ್ಲ.ನಿತ್ಯದ ಬದುಕಿನ ಜಂಜಾಟದ ನಡುವೆ ಗೊಂದು ಬಿಡುವಿನ ನಿಲ್ದಾಣ ಬೇಕೆಂದು ಅನಿಸುತ್ತದೆ.ಆ ನಿಲ್ದಾಣ ನಮ್ಮನ್ನು ಎಲ್ಲ ಒತ್ತಡಗಳಿಂದ ಮುಕ್ತಗೊಳಿಸಬೇಕೆಂದು ನಿರೀಕ್ಷೆ ಮಾಡುತ್ತೇವೆ.ಆ ಸಮಯದಲ್ಲಿ ಕೆಲವೊಮ್ಮೆ ಮನದ ಮಾತುಗಳನ್ನು ಅಕ್ಷರರೂಪದಲ್ಲಿ ಬದಲಾದ ಹಿತದ ಸಾಲುಗಳನ್ನು ಒಪ್ಪಿಕೊಳ್ಳುತ್ತೇವೆ.

ಬದುಕೇ ಬೇರೆ ಪದ್ಯದ ಅಕ್ಷರಗಳೇ ಬೇರೆ. ಅಕ್ಷರಗಳನ್ನು ಅಕ್ಷರಗಳಾಗಿ ನೋಡಬೇಕು.ಎಷ್ಟೇ ಸ್ನೇಹಿತರು,ಸಂಬಂಧಿಗಳು,ಹಿತೈಷಿಗಳು ನಮ್ಮ ನಡುವಿರಬಹುದು.ಆದರೆ ಗೆ ನಾವೇ ಆಸರೆ,ನಮ್ಮ ಬದುಕನ್ನು ನಾವೇ ನೋಡಿಕೊಳ್ಳಬೇಕು ಎನ್ನುವ ಸತ್ಯ ಒಪ್ಪಿಕೊಳ್ಳಲೇ ಬೇಕು.ಎಲ್ಲವನ್ನೂ ವಾಸ್ತವದ ಕಣ್ಣಿನಿಂದ ನೋಡುವದನ್ನು ಅಭ್ಯಾಸಮಾಡಿಕೊಳ್ಳೋಣ. ಆಗಬದುಕಿನ ಹಲವು ದುರಂತಗಳಿಂದ ತಪ್ಪಿಸಿಕೊಳ್ಳಬಹುದು.

# `ಗೂಗಲ್ ಇಲ್ಲದ ಕಾಲದ ಮಹಾಜ್ಞಾನಿ'



| ಡಾ.ಸುಧಾಕರ.ಜಿ.ಲಕ್ಕವಳ್ಳಿ



ಸ್ಫೂರ್ತಿ ಸುಧೆ - 14

ಇಂದಿನ ತಾಂತ್ರಿಕ ಪ್ರವಾಹದಲ್ಲಿ ಜ್ಞಾನವು ಒಂದು ಕ್ಲಿಕ್ ಸಾನ್ನಿಧ್ಯದಲ್ಲಿದೆ. ಆದರೆ, ಸೌಲಭ್ಯಗಳ ಸಣ್ಣ ಕಿರಣವೂ ಇಲ್ಲದ ಅಂದಿನ ಕಾಲದಲ್ಲಿ, ಅಕ್ಷರವನ್ನೇ ದೀವಿಗೆಯನ್ನಾಗಿಸಿಕೊಂಡು ಜ್ಞಾನದ ಹಿಮಾಲಯವನ್ನೇ ಏರಿದವರು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್.ಅವರ ವಿದ್ವತ್ತಿನ ಹಾದಿಯು ಇಂದಿನ ಪೀಳಿಗೆಗೆ ಕೇವಲ ಇತಿಹಾಸವಲ್ಲ, ಅದೊಂದು ಜೀವನ ದರ್ಶನ.

ಲಂಡನ್‌ನ ಗ್ರಂಥಾಲಯಗಳ ಮೌನದಲ್ಲಿ ಬಾಬಾಸಾಹೇಬರ ಜ್ಞಾನದ ತಪಸ್ಸು ಆರಂಭವಾಗುತ್ತಿತ್ತು. ದೈಹಿಕ ಹಸಿವಿಗಿಂತಲೂ ಬೌದ್ಧಿಕ ಹಸಿವೇ ಮಿಗಿಲೆಂದು ನಂಬಿದ್ದ ಅವರು, ಲೈಬ್ರರಿಯ ಬಾಗಿಲು ತೆರೆದ ಕ್ಷಣದಿಂದ ಮುಚ್ಚುವವರೆಗೂ ಅಕ್ಷರಗಳ ಧ್ಯಾನದಲ್ಲಿ ಮುಳುಗುತ್ತಿದ್ದರು. ದಿನದ ಬಹುಪಾಲು ಸಮಯವನ್ನು ಕೇವಲ ಒಂದು ಬ್ರೆಡ್ ತುಂಡು ಮತ್ತು ಸಾಧಾರಣ ಪಾನೀಯದೊಂದಿಗೆ ಕಳೆಯುತ್ತಿದ್ದ ಆ ದಿನಗಳು, ಅವರ ವಿದ್ವತ್ತಿನ ಆಳಕ್ಕೆ ಸಾಕ್ಷಿಯಾಗಿವೆ. ಇಂದು ಮಾಹಿತಿಯ ಮಹಾಪೂರದ ನಡುವೆಯೂ ನಾವು ದಿಕ್ಕೆಡುತ್ತಿದ್ದೇವೆ,ಆದರೆ ಅಂಬೇಡ್ಕರ್ ಅವರು ಅಂದು ಶ್ರದ್ಧೆಯನ್ನೇ ದಾರಿದೀಪವನ್ನಾಗಿಸಿಕೊಂಡಿದ್ದರು.

ಸೌಲಭ್ಯಗಳ ಕೊರತೆಯು ಸಾಧಕನಿಗೆ ಎಂದಿಗೂ ಅಡ್ಡಿಯಾಗಲಾರದು ಎಂಬುದಕ್ಕೆ ಅಂಬೇಡ್ಕರ್ ಅವರ ಬದುಕೇ ನಿದರ್ಶನ. ಅಂತರ್ಜಾಲದ ವೇಗವಾಗಲಿ ಅಥವಾ ಡಿಜಿಟಲ್ ಸಂಪನ್ಮೂಲಗಳಾಗಲಿ ಇಲ್ಲದ ಆ ಕಾಲದಲ್ಲಿ, ಸಹಸ್ರಾರು ಪುಟಗಳ ಗ್ರಂಥಗಳನ್ನು ಮಥಿಸಿ, ಸ್ವತಃ ಹಸ್ತಾಕ್ಷರದಲ್ಲಿ ಟಿಪ್ಪಣಿಗಳನ್ನು ಸಿದ್ಧಪಡಿಸುತ್ತಿದ್ದರು. ಇತರರು ದಶಕಗಳ ಕಾಲ ತೆಗೆದುಕೊಳ್ಳುವ ಅಗಾಧ ಅಧ್ಯಯನವನ್ನು ಕೇವಲ ಎರಡೂವರೆ ವರ್ಷಗಳಲ್ಲಿ ಪೂರೈಸಿದ ಅವರ ಸಮಯ ಪ್ರಜ್ಞೆ ಮತ್ತು ಅಚಲ ಶಿಸ್ತು ಇಂದಿನ ಯುವಜನತೆಗೆ ಆದರ್ಶಪ್ರಾಯ.

ಅಂಬೇಡ್ಕರ್ ಅವರು ಮಾಹಿತಿಯನ್ನು ಕೇವಲ ಸಂಗ್ರಹಿಸಲಿಲ್ಲ, ಬದಲಿಗೆ ಅದನ್ನು ವಿವೇಕದ ಅಸ್ತ್ರವನ್ನಾಗಿ ರೂಪಿಸಿದರು. ಯಾವುದೇ ಸರ್ಚ್ ಇಂಜಿನ್ ನೀಡಲಾಗದ ಗಂಭೀರ ಚಿಂತನೆಯನ್ನು ಅವರು ಗ್ರಂಥಗಳ ಗಾಢ ಒಡನಾಟದಿಂದ ಪಡೆದುಕೊಂಡರು.

ಸೌಲಭ್ಯಗಳ ಸಮೃದ್ಧಿಯಲ್ಲಿರುವ ನಮಗೆ ಅಂಬೇಡ್ಕರ್ ಅವರ ಜೀವನವು ಧೈರ್ಯದ ದಾರಿಯನ್ನು ತೋರಿಸುತ್ತದೆ. ಜ್ಞಾನವೇ ಶಕ್ತಿ ಎಂದು ನಂಬಿದ್ದ ಆ ಮಹಾಚೇತನದ ಹಾದಿಯಲ್ಲಿ ಸಾಗುವುದೇ ನಾವು ಅವರಿಗೆ ಸಲ್ಲಿಸುವ ಶ್ರೇಷ್ಠ ಗೌರವ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,